06 February 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಮನಸ್ಸೇ ಬಂಧು, ನಮ್ಮ ಮನಸ್ಸೇ ಶತ್ರು!
ನಾವು ಮಾಡುವ ವಿಚಾರಗಳೇ ನಮ್ಮ ಬಂಧು,
ಶತ್ರುವಾಗಿ ಪಾತ್ರ ವಹಿಸುತ್ತವೆ!
-ಸ್ನೇಹಾ ಆನಂದ್

info.varthaman@gmail.com



ಜಿಲ್ಲಾಧಿಕಾರಿ ಹಠಾವೋ- ರೈತ ಬಚಾವೋ: ರೈತರಿಂದ ರಾಮನಗರದಲ್ಲಿ ಪ್ರತಿಭಟನೆ — ಪುಟ ಸಂ. 2



ಎಸ್ಎಸ್ಎಲ್‌ಸಿ ಪರೀಕ್ಷೆ ಹಿನ್ನೆಲೆ: ದಿನಕ್ಕೊಂದು ಅಂಕಕ್ಕೆ ಇಲಾಖೆ ಗುರಿ — ಪುಟ ಸಂ. 4



ರೈಲ್ವೆ ನೇಮಕಾತಿ ಪರೀಕ್ಷೆ: ಕನ್ನಡಕ್ಕೆ ಅವಕಾಶ ಕೊಡಿ: ಪ್ರತಿಭಟನೆ — ಪುಟ ಸಂ. 4


9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್


VARTHAMAN | Volume: 69 | Issue: 92 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಮೈಸೂರಲ್ಲಿ 'ಲೋಕಾ ಭರ್ಜರಿ ಭೇಟೆ'


## ಜೆಇ ಚಂದ್ರಶೇಖರ್, ಎಜಿಒ ಅಲ್ತಾಫ್ ಹುಸೇನ್ ಮನೆ, ಕಚೇರಿ ಮೇಲೆ ದಾಳಿ

## ಆದಾಯಕ್ಕಿಂತ ಹೆಚ್ಚಿನ ಕೋಟ್ಯಂತರ ಮೌಲ್ಯದ ಆಸ್ತಿ, ನಗದು, ಚಿನ್ನಾಭರಣ ಪತ್ತೆ









**ಮೈಸೂರು:** ಮೈಸೂರು ನಗರದಲ್ಲಿ ಲೋಕಾಯುಕ್ತ ಪೊಲೀಸರು ಗುರುವಾರ ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಏಕಕಾಲಕ್ಕೆ ಇಬ್ಬರು ಅಧಿಕಾರಿಗಳ ಮನೆ ಹಾಗೂ ಕಚೇರಿ ಸೇರಿದಂತೆ ಏಳು ಕಡೆ ದಾಳಿ ನಡೆಸಿ ಅಪಾರ ಪ್ರಮಾಣದ ಸಂಪತ್ತು ಮತ್ತು ಆಸ್ತಿಗಳ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ.

ನಿಗದಿತ ಆದಾಯಕ್ಕಿಂತ ಹೆಚ್ಚು ಹಣ, ಆಸ್ತಿಗಳಿಸಿರುವ ಆರೋಪದ ಮೇರೆಗೆ ಮೈಸೂರು ಮಹಾನಗರ ಪಾಲಿಕೆ ಹಾಗೂ ಟಿ.ನರಸೀಪುರ ಪುರಸಭೆ ಜೆಇ ಕೆ.ಆರ್.ಚಂದ್ರಶೇಖರ್ ಅವರಿಗೆ ಸೇರಿದ ಮೈಸೂರಿನ ವಿಜಯನಗರದ ನಿವಾಸ, ಕೆಜಿ.ಕೊಪ್ಪಲು ನಿವಾಸ ಹಾಗೂ ಟಿ.ನರಸೀಪುರ ಕಚೇರಿ ಸೇರಿದಂತೆ ನಾಲ್ಕು ಕಡೆಗಳಲ್ಲಿ ಏಕಕಾಲದಲ್ಲಿ ಶೋಧ ನಡೆಸಿದ್ದಾರೆ.

### ಚಂದ್ರಶೇಖರ್ ಹಿನ್ನೆಲೆ ಏನು?

ಗುಲ್ಬರ್ಗ ಜೆಇ ಆಗಿ ನೇಮಕಗೊಂಡಿದ್ದ ಕೆ.ಆರ್.ಚಂದ್ರಶೇಖರ್ ಅವರು, ಪಾಂಡವಪುರ ತಾಲ್ಲೂಕಿನಲ್ಲಿ ಹಾಗೂ ಅನಂತರ ಮೈಸೂರು ಮಹಾನಗರ ಪಾಲಿಕೆ ಜೂನಿಯರ್ ಇಂಜಿನಿಯರ್ ಆಗಿದ್ದರು. 2021 ರಲ್ಲಿ ಮಹಿಳೆಯಿಂದ 5 ಸಾವಿರ ಲಂಚ ಪಡೆಯುತ್ತಿರುವಾಗಲೇ ಲೋಕಾಯುಕ್ತರ ಬಲೆಗೆ ಬಿದ್ದಿದ್ದರು. ಇದಾದ ಬಳಿಕ ಕೆ. ಆರ್. ನಗರ ಜೆಇ ಆಗಿದ್ದರು. ಮತ್ತೆ ಮೈಸೂರು ಮಹಾನಗರಪಾಲಿಕೆ ವಲಯ ಕಚೇರಿ 6 ಹಾಗೂ ಪುಟ 2ಕ್ಕೆ

ಜೂನಿಯರ್ ಎಂಜಿನಿಯರ್ ಕೆ.ಆರ್. ಚಂದ್ರಶೇಖರ್ ಗೆ ಸೇರಿದ ನಾಲ್ಕು ಸ್ಥಳಗಳಲ್ಲಿ ಹುಡುಕಾಟ ನಡೆಸಿದ್ದಾರೆ. ಅಂದಾಜು 1.37 ಕೋಟಿ ರೂ. ಮೌಲ್ಯದ ಸ್ಥಿರ ಆಸ್ತಿ, 55 ಲಕ್ಷ ಮೌಲ್ಯದ 2 ನಿವೇಶನ, 82 ಲಕ್ಷ ಮೌಲ್ಯದ 1 ಮನೆ, ಕೃಷಿ ಭೂಮಿ, ಅಂದಾಜು 2,75,10,300 ರೂ. ಚರ ಆಸ್ತಿ ಇರುವುದಾಗಿ ದಾಖಲೆ ನೀಡಿದ್ದಾರೆ. ಇನ್ನೂ ಶೋಧದ ವೇಳೆಯಲ್ಲಿ 62 ಲಕ್ಷ ರೂ. ನಗದು, 2.02.39,900 ಬೆಲೆಯ ಆಭರಣ, 10,70,000 ಮೌಲ್ಯದ ವಾಹನ ಸೇರಿ ಬರೋಬ್ಬರಿ 2.54 ಕೋಟಿ ರೂ. ನಗದು ಮತ್ತು ಆಸ್ತಿಪತ್ತೆಯಾಗಿದೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ.

ಎಜಿಒ ಅಲ್ತಾಫ್ ಹುಸೇನ್ ಜಕಾರ್ತಿ ಎರಡು ಮನೆ ಹಾಗೂ ಕಚೇರಿಯಲ್ಲಿ ಹುಡುಕಾಟ ನಡೆಸಿದ್ದು, 2,34,10,000ರೂ. ಅಂದಾಜು ಸ್ಥಿರ ಆಸ್ತಿ, 1,03,10,000 ಮೌಲ್ಯದ ನಾಲ್ಕು ನಿವೇಶನ, 1,31,00,000 ಮೌಲ್ಯದ ಮನೆ ಸೇರಿ ಒಟ್ಟು ಚರ ಆಸ್ತಿಗಳ ಅಂದಾಜು ಒಟ್ಟು ಮೌಲ್ಯ 1,10,02,829 ರೂ. ಎಂದು ಖಚಿತಪಡಿಸಿದ್ದಾರೆ. ಶೋಧ ಕಾರ್ಯದ ವೇಳೆ 1,45,340 ನಗದು ವಶ ಪಡಿಸಿಕೊಂಡಿದ್ದಾರೆ. 75,46,800 ಮೌಲ್ಯದ ಆಭರಣ, 19,55,000 ಮೌಲ್ಯದ ವಾಹನ ಹಾಗೂ ಇತರೆ 13,55,689 ಸೇರಿ ಒಟ್ಟು 2 ಕೋಟಿ 41ಲಕ್ಷ 77ಸಾವಿರ 849 ರೂ.ಗಳನ್ನು ವಶಕ್ಕೆ ಪಡೆದಿದ್ದಾರೆ. ಲೋಕಾಯುಕ್ತ ಎಸ್ಪಿ ಉದ್ದೇಶ್ ನೇತೃತ್ವದಲ್ಲಿ ಅಧಿಕಾರಿಗಳ ತಂಡ ಈ ದಾಳಿ ನಡೆಸಿದೆ.

# ಕಾಂಗ್ರೆಸ್ ಭವನ ನಿರ್ಮಾಣಕ್ಕೆ ರಿಯಾಯಿತಿ ಬೆಲೆಯ ನಿವೇಶನ

**ಬೆಂಗಳೂರು:** ರಾಜ್ಯದಲ್ಲಿ ಕೋಟಿ ಬೆಲೆ ಬಾಳುವ ಸರ್ಕಾರದ ಜಾಗ ಕಾಂಗ್ರೆಸ್ ಪಕ್ಷದ ಪಾಲಾಗುತ್ತಿದೆ. ರಾಜ್ಯದ ವಿವಿಧ ನಗರಗಳಲ್ಲಿನಗರಾಭಿವೃದ್ಧಿ ಪ್ರಾಧಿಕಾರಿಗಳ ಬಡಾವಣೆಗಳಲ್ಲಿ ಸಾರ್ವಜನಿಕ ಸೌಕರ್ಯಗಳಿಗಾಗಿ ಮೀಸಲಿಡುವ ಕೋಟಿ ಕೋಟಿ ಬೆಲೆ ಬಾಳೋ ಸಿಎ ಸೈಟ್‌ಗಳನ್ನು ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಸರ್ಕಾರ ಹಂಚಿಕೆ ಮಾಡಿದೆ.

ಪ್ರತಿ ತಾಲೂಕಿನಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಮುಂದಾಗಿರುವ ಕೆಪಿಸಿಸಿಗೆ ಈ ಜಾಗವನ್ನ ಪೌರಾಡಳಿತ ಇಲಾಖೆ ಕೊಟ್ಟಿದೆ. ವಿಧಾನ ಪರಿಷತ್ ನಲ್ಲಿ ಬಿಜೆಪಿ ಸದಸ್ಯ ಚಿದಾನಂದಗೌಡ ಪ್ರಶ್ನೆಗೆ ಈ ಬಗ್ಗೆ ಪೌರಾಡಳಿತ ಇಲಾಖೆ ಸಚಿವ ರಹೀಂ ಖಾನ್ ಲಿಖಿತ ಉತ್ತರ ಕೊಟ್ಟಿದ್ದಾರೆ.

ಇನ್ನೂ 13 ಜಿಲ್ಲೆಗಳಲ್ಲಿ ಪುರಸಭೆ, ನಗರ ಸಭೆಗಳ ಜಾಗವನ್ನ ಕಾಂಗ್ರೆಸ್ ಭವನ ಕಟ್ಟಲು ಕೊಟ್ಟಿರೋ ಪೌರಾಡಳಿತ ಇಲಾಖೆ ಕೊಟ್ಟಿದೆ. ಕಾನೂನು ಇಲಾಖೆ ವಿರೋಧದ ನಡುವೆಯೂ ಕಾಂಗ್ರೆಸ್ ಭವನಕ್ಕೆ ಜಾಗ ಕೊಟ್ಟಿರುವ ಬಗ್ಗೆಯೂ ಆರೋಪ ಇದೆ. ಸರ್ಕಾರದ ಕ್ರಮವನ್ನ ಗೃಹ ಸಚಿವ ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾ. ಜಿಲ್ಲೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನಿವೇಶನ ನೀಡಲಾಗಿದೆ.

# ರೇವಣ್ಣಗೆ ಹೈಕೋರ್ಟ್ ಶಾಕ್: ಅಪಹರಣ ಪ್ರಕರಣ ತಡೆ ತೆರವು



**ಬೆಂಗಳೂರು:** ಕೆ.ಆರ್.ನಗರ ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಎಚ್.ಡಿ. ರೇವಣ್ಣಗೆ ಹೈಕೋರ್ಟ್ ಬಿಗ್ ಶಾಕ್ ನೀಡಿದೆ. ಪ್ರಕರಣ ರದ್ದು ಕೋರಿ ಎಚ್.ಡಿ.ರೇವಣ್ಣ ಅರ್ಜಿ ವಿಚಾರಣೆ ನಡೆಸಿದ ನ್ಯಾ.ಸುನಿಲ್ ದತ್ ಯಾದವ್ ಅವರಿದ್ದ ಹೈಕೋರ್ಟ್ ಪೀಠ ಅರ್ಜಿ ತಿರಸ್ಕರಿಸಿ ಆದೇಶ ಹೊರಡಿಸಿದೆ.

ಎಚ್.ಡಿ.ರೇವಣ್ಣ ಪರ ವಕೀಲರು ವಾದ ಮಂಡನೆಗೆ ಕಾಲಾವಕಾಶ ಕೋರಿದ್ದರು. ಹಿರಿಯ ವಕೀಲರು ಮ್ಯಾಜಿಸ್ಟ್ರೇಟ್ ಕೋರ್ಟ್‌ನಲ್ಲಿದ್ದಾರೆಂಬ ಕಾರಣ ನೀಡಿ ಮನವಿ ಮಾಡಿದ್ದರು. ಎಚ್.ಡಿ.ರೇವಣ್ಣ ಪರ ವಕೀಲರ ಮನವಿಗೆ ಹೈಕೋರ್ಟ್ ಅಸಮಾಧಾನ ವ್ಯಕ್ತಪಡಿಸಿತು. ರೇವಣ್ಣ ವಿರುದ್ಧ ದೋಷಾರೋಪ ಹೊರಿಸದಂತೆ ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಕೋರ್ಟ್ ತೆರವು ಮಾಡಿದೆ.

# ಫೈನಾನ್ಸ್ ಸಿಬ್ಬಂದಿ ಬೆದರಿಕೆ: ವಿಷ ಸೇವಿಸಿ ರೈತ ಆತ್ಮಹತ್ಯೆ

**ಹಾಸನ:** ಮನೆ ಸೀಜ್ ಮಾಡುವುದಾಗಿ ಖಾಸಗಿ ಫೈನಾನ್ಸ್ ಸಿಬ್ಬಂದಿ ಬೆದರಿಕೆ ಹಾಕಿದ್ದರಿಂದ ಮನನೊಂದು ವಿಷ ಸೇವಿಸಿ ರೈತ ಆತ್ಮಹತ್ಯೆಗೆ ಶರಣಾದ ಘಟನೆ ಶ್ರವಣಬೆಳಗೊಳ ಸಮೀಪದ ಕೊತ್ತನ ಘಟ್ಟ ಗ್ರಾಮದಲ್ಲಿ ನಡೆದಿದೆ. ಯೋಗೇಶ್ (50) ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾದ ರೈತ.



ಚನ್ನರಾಯಪಟ್ಟಣದ ಖಾಸಗಿ ಫೈನಾನ್ಸ್ ಒಂದರಲ್ಲಿ 7 ಲಕ್ಷ ರೂ. ಸಾಲ ಪಡೆದಿದ್ದರು. ಪ್ರತಿ ತಿಂಗಳು ಸರಿಯಾಗಿ ಕಂತು ಕಟ್ಟುತ್ತಿದ್ದ ಅವರು, ವೈಯಕ್ತಿಕ ಸಮಸ್ಯೆಯಿಂದ ಕಳೆದ 2 ತಿಂಗಳ ಕಂತನ್ನು ಬಾಕಿ ಉಳಿಸಿ ಕೊಂಡಿದ್ದರು. ಫೆ.4ರ ರಾತ್ರಿ ಯೋಗೇಶ್ ಅವರ ಮನೆಗೆ ಬಂದಿದ್ದ ಇಬ್ಬರು ಫೈನಾನ್ಸ್ ಸಿಬ್ಬಂದಿ ಮನೆ ಸೀಜ್ ಮಾಡಲು ಮುಂದಾಗಿದ್ದರು. ಇದರಿಂದ ಮಾನಕ್ಕೆ ಅಂಜಿ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಫೈನಾನ್ಸ್ ವಿರುದ್ಧ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಶಾಸಕ ನಂಜೇಗೌಡಗೆ 'ಸುಪ್ರೀಂ ಗೆಲುವು'

**ಮಾಲೂರು ಕ್ಷೇತ್ರದ ಗೆಲುವು ಪ್ರಶ್ನಿಸಿ ಎದುರಾಳಿ ಮಂಜುನಾಥಗೌಡ ಕೋರ್ಟ್ ಮೊರೆ**



**ನವದೆಹಲಿ:** ಕಳೆದ 2023ರ ವಿಧಾನಸಭಾ ಚುನಾವಣೆಯಲ್ಲಿ ಮಾಲೂರು ಕ್ಷೇತ್ರದಿಂದ ಗೆಲುವು ಸಾಧಿಸಿದ್ದ ಕಾಂಗ್ರೆಸ್ ಶಾಸಕ ಕೆ.ವೈ.ನಂಜೇಗೌಡ ಆಯ್ಕೆಯನ್ನು ಸುಪ್ರೀಂ ಕೋರ್ಟ್ ಗುರುವಾರ ಎತ್ತಿಹಿಡಿದಿದೆ. ಈ ಹಿನ್ನೆಲೆಯಲ್ಲಿ ಶಾಸಕ ಕೆ.ವೈ.ನಂಜೇಗೌಡ ನಿಟ್ಟುಸಿರು ಬಿಟ್ಟಿದ್ದಾರೆ.

ತಮ್ಮ ಎದುರಾಳಿ ಬಿಜೆಪಿಯ ಕೆ.ಎಸ್. ಮಂಜುನಾಥ ಗೌಡ ಅವರಿಗಿಂತ ನಂಜೇಗೌಡ 250 ಹೆಚ್ಚು ಮತಗಳನ್ನು ಪಡೆದಿದ್ದಾರೆ ಎಂಬುದನ್ನು ಗಮನಿಸಿದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜಾಯ್‌ಮಲ್ಯ ಬಾಗ್ಚಿ ಅವರಿದ್ದ ಪೀಠವು ಕರ್ನಾಟಕ ಹೈಕೋರ್ಟ್‌ನ ಸೆಪ್ಟೆಂಬರ್ 2025ರ ತೀರ್ಪನ್ನು ರದ್ದುಗೊಳಿಸಿದೆ.

ಚುನಾವಣಾ ಆಯೋಗ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಿದ್ದ ಮರು ಮತ ಎಣಿಕೆಯ ಫಲಿತಾಂಶವನ್ನು ಅರ್ಜಿದಾರರು ಮತ್ತು ಪ್ರತಿವಾದಿಗಳ ಸಮ್ಮುಖದಲ್ಲಿ ತೆರೆದ ನ್ಯಾಯಪೀಠವು, ಮತಗಳ ಮರುಎಣಿಕೆಯ ನಂತರವೂ ನಂಜೇಗೌಡ ಅಧಿಕ ಮತಗಳನ್ನು ಗಳಿಸಿದ್ದಾರೆ ಎಂದು ಗಮನಿಸಿತು. ಮರು ಮತ ಎಣಿಕೆಯಲ್ಲಿ ನಂಜೇಗೌಡ 50,957 ಮತಗಳನ್ನು ಮತ್ತು ಮಂಜುನಾಥ ಗೌಡ 50,707 ಮತಗಳನ್ನು ಪಡೆದಿದ್ದಾರೆ. ಎಣಿಕೆ ಪ್ರಕ್ರಿಯೆಯ ವಿಡಿಯೋ ರೆಕಾರ್ಡಿಂಗ್ ಕಡ್ಡಾಯವೇ ಅಥವಾ ಇಲ್ಲವೇ ಎಂಬುದರ ಕುರಿತು ಯಾವುದೇ ಅಭಿಪ್ರಾಯ ವ್ಯಕ್ತಪಡಿಸುತ್ತಿಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ಮತ ಎಣಿಕೆ ಪ್ರಕ್ರಿಯೆ ಕಾನೂನುಬದ್ಧವಾಗಿ ನಡೆದಿಲ್ಲ. ಸಾಕಷ್ಟು ಅಕ್ರಮ ಎಸಗಲಾಗಿದೆ ಎಂದು ಆರೋಪಿಸಿ ಮಂಜುನಾಥ್ ಗೌಡ ಸಲ್ಲಿಸಿದ್ದ ಚುನಾವಣಾ ತಕರಾರು ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್‌ನ ಏಕಸದಸ್ಯ ಪೀಠ ನಂಜೇಗೌಡ ಆಯ್ಕೆಯನ್ನು ಅಸಿಂಧುಗೊಳಿಸಿತ್ತು. ಈ ಕ್ಷೇತ್ರದ ಮತಗಳನ್ನು ನಾಲ್ಕು ವಾರಗಳಲ್ಲಿ ಪುನಃ ಎಣಿಕೆ ಮಾಡಿ ಫಲಿತಾಂಶ ಪ್ರಕಟಿಸಬೇಕು. ಪುಟ 2ಕ್ಕೆ

# ಮೆಟ್ರೋ ದರ ಆಯ್ತು ನೀರಿನ ದರ ಏರಿಕೆ ಶಾಕ್

**ಬೆಂಗಳೂರು:** ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಪ್ರಯಾಣ ದರ ಏರಿಕೆಯಾದ ಬೆನ್ನಲ್ಲೇ ಈಗ ಕಾವೇರಿ ನೀರಿನ ದರವೂ ಏರಿಕೆಯಾಗಲಿದೆ. ಜನರಿಗೆ ಮತ್ತೊಂದು ಶಾಕ್ ನೀಡಲು ಸರ್ಕಾರ ಮುಂದಾಗಿದೆ.




ಪ್ರತಿ ವರ್ಷ ನೀರಿನ ದರ ಏರಿಕೆ ಮಾಡಬೇಕು ಎಂದು ಆಡಳಿತ ಸುಧಾರಣಾ ಸಮಿತಿ ಶಿಫರಾಸು ಮಾಡಿತ್ತು. ಈ ಶಿಫಾರಸಿನ ಅನ್ವಯ ಕುಡಿಯುವ ನೀರಿನ ದರವನ್ನು ಶೀಘ್ರವೇ ಶೇ.3ರಷ್ಟು ಹೆಚ್ಚಳ ಮಾಡಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಂದಾಗಿದೆ. ಏಪ್ರಿಲ್1 ರಿಂದ ನೀರಿನ ದರ ಏರಿಕೆಯಾಗುವ ಪುಟ 2ಕ್ಕೆ

# ರಾಯಭಾರಿ ಕಚೇರಿಗೆ ಹುಸಿ ಬಾಂಬ್ ಬೆದರಿಕೆ



**ಬೆಂಗಳೂರು:** ಬೆಂಗಳೂರಲ್ಲಿ ಮತ್ತೆ ಹುಸಿ ಬಾಂಬ್ ಬೆದರಿಕೆ ಸದ್ದು ಮಾಡುತ್ತಿದೆ. ನಗರದ ಇಟಲಿ ರಾಯಭಾರಿ ಕಚೇರಿಗೆ ಇ-ಮೇಲ್ ಮೂಲಕ ಕಿಡಿಗೇಡಿಗಳು ಬಾಂಬ್ ಬೆದರಿಕೆ ಹಾಕಿದ್ದಾರೆ. 5 ಆರ್‌ಡಿಎಕ್ಸ್ ಬಾಂಬ್ ಬ್ಲಾಸ್ಟ್ ಪುಟ 2ಕ್ಕೆ

# ಶಾಸಕ ಸತೀಶ್ ಸೈಲ್‌ಗೆ ಹೈಕೋರ್ಟ್ ಜಾಮೀನು



**ಬೆಂಗಳೂರು:** ಅಕ್ರಮ ಹಣ ವರ್ಗಾವಣೆ ಆರೋಪದಡಿ ಜಾರಿ ನಿರ್ದೇಶನಾಲಯ ದಾಖಲಿಸಿದ್ದ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ಹೈಕೋರ್ಟ್ ವೈದ್ಯಕೀಯ ಜಾಮೀನು ಮಂಜೂರು ಮಾಡಿದೆ. ಆರೋಪಿ ಸತೀಶ್ ಸೈಲ್‌ಗೆ ಲಿವರ್ ಕಸಿ ಮಾಡಿಸಬೇಕಿರುವುದರಿಂದ ಜಾಮಿನು ನೀಡಲಾಗುತ್ತಿದೆ ಎಂದು ಹೈಕೋರ್ಟ್ ತಿಳಿಸಿದೆ. ಲಿವರ್ ಕಸಿ ಕುರಿತು 2 ವಾರಕ್ಕೊಮ್ಮೆ ವರದಿ ಸಲ್ಲಿಸಬೇಕು. ಎಂಟು ವಾರಗಳಿಗೊಮ್ಮೆ ಆರೋಗ್ಯದ ಸ್ಥಿತಿಗತಿ ಬಗ್ಗೆ ವೈದ್ಯಕೀಯ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಕೋರ್ಟ್ ನಿರ್ದೇಶನ ನೀಡಿದೆ.

ಪ್ರಾಸಿಕ್ಯೂಷನ್ ಸಾಕ್ಷ್ಯದ ಮೇಲೆ ಪ್ರಭಾವ ಬೀರಬಾರದು. ವಿಚಾರಣಾ ನ್ಯಾಯಾಲಯ ವಿಚಾರಣೆಗೆ ತೊಂದರೆ ಉಂಟು ಮಾಡಬಾರದು. ಐದು ಲಕ್ಷ ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಒಂದು ಭದ್ರತಾ ಖಾತರಿ ಒದಗಿಸಬೇಕು ಎಂದು ಹೈಕೋರ್ಟ್ ಷರತ್ತು ವಿಧಿಸಿದೆ.

# ಸುಳ್ವಾಡಿ ವಿಷಪ್ರಸಾದ ಪ್ರಕರಣ: ಮೂವರ ಜಾಮೀನು ಅರ್ಜಿ ವಜಾ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲೂಕಿನ ಸುಳ್ವಾಡಿ ವಿಷಪ್ರಸಾದ ದುರಂತದ ಮೂವರು ಆರೋಪಿಗಳ ಜಾಮೀನು ಅರ್ಜಿಯನ್ನು ಜಿಲ್ಲಾ ನ್ಯಾಯಾಲಯ ತಿರಸ್ಕರಿಸಿದೆ. ಪ್ರಕರಣದ ಮೊದಲ ಆರೋಪಿ ಇಮ್ಮಡಿ ಮಹದೇವಸ್ವಾಮಿಗೆ ಈಗಾಗಲೇ ಹೈಕೋರ್ಟ್ ಜಾಮೀನು ನೀಡಿದೆ. ಅನಾರೋಗ್ಯದ ಹಿನ್ನಲೆಯಲ್ಲಿ ಜಾಮೀನು ನೀಡಲಾಗಿದೆ. ಎರಡನೇ ಆರೋಪಿ ಅಂಬಿಕಾ, ಮೂರನೇ ಆರೋಪಿ ಮಾದೇಶ ಹಾಗು ನಾಲ್ಕನೇ ಆರೋಪಿ ದೊಡ್ಡಯ್ಯ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ ಜಿಲ್ಲಾ ನ್ಯಾಯಾಲಯ ಜಾಮೀನು ನೀಡಲು ನಿರಾಕರಿಸಿದೆ. ಮೊದಲ ಆರೋಪಿಗೆ ಜಾಮೀನು ಕೊಟ್ಟ ಬಳಿಕ ಪ್ರಕರಣದ ಸಂತ್ರಸ್ತರು ಪ್ರತಿಭಟನೆ ನಡೆಸಿದ್ದರು.

# ಉಡುಪಿ ಯುವಕನಿಗೆ 49 ಕೋಟಿ ಬಹುಮಾನ




**ಉಡುಪಿ:** ಅಬುದಾಬಿಯ ಲಕ್ಕಿ ಲಾಟರಿ ಡ್ರಾನಲ್ಲಿ ಉಡುಪಿಯ ಯುವಕನಿಗೆ 49 ಕೋಟಿ ರೂ. ಬಹುಮಾನ ಬಂದಿದೆ. ಉಡುಪಿಯ ಕಾಪು ತಾಲೂಕು ಕಟಪಾಡಿ ಮಟ್ಟುವಿನ ಶಾಂತನು ಶೆಟ್ಟಿಗಾರ್ ಬಹುಮಾನ ವಿಜೇತರು. ಅವರಿಗೆ 20 ಮಿಲಿಯನ್ ದಿರಾಮ್ ಬಹುಮಾನ ಲಭಿಸಿದೆ.

ಅಬುದಾಬಿಯಲ್ಲಿ ಬಿಗ್ ಟಿಕೆಟ್ ಲಕ್ಕಿ ಡ್ರಾ ನಡೆಯಿತು. ಪುಟ 2ಕ್ಕೆ

# ಕಾವೇರಿ ನದಿಗೆ ಹಾರಿ ಮಹಿಳೆ ಆತ್ಮಹತ್ಯೆ ಯತ್ನ

**ಶ್ರೀರಂಗಪಟ್ಟಣ:** ಕಾವೇರಿ ನದಿಗೆ ಹಾರಿ ವೃದ್ಧ ಮಹಿಳೆಯೊಬ್ಬರು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಶ್ರೀರಂಗಪಟ್ಟಣದ ವೆಲ್ಲೆಸ್ಲಿ ಸೇತುವೆ ಬಳಿ ನಡೆದಿದೆ. ಚಾಮರಾಜನಗರದ ಬೆಂಡರವಾಡಿಯ ಗುಂಡಮ್ಮ (78) ಆತ್ಮಹತ್ಯೆಗೆ ಯತ್ನಿಸಿದ ವೃದ್ಧೆ.



ಕುಟುಂಬ ಕಲಹದಿಂದ ಬೇಸತ್ತು ಪಟ್ಟಣಕ್ಕೆ ಬಂದು ನದಿಗೆ ಬಿದ್ದು ಆತ್ಮಹತ್ಯೆ ಯತ್ನಿಸಿದ್ದಾರೆ. ನದಿಗೆ ಬಿದ್ದು ಒದ್ದಾಡುತ್ತಿರುವುದನ್ನು ಗಮನಿಸಿದ ಸ್ಥಳೀಯರು ಅವರನ್ನು ರಕ್ಷಣೆ ಮಾಡಿದ್ದಾರೆ. ನದಿಯಲ್ಲಿ ನೀರಿನ ಮಟ್ಟ ಕಡಿಮೆಯಾಗಿದ್ದರಿಂದ ಸ್ಥಳೀಯರಾದ ವಿ.ಸುರೇಶ್ ಮತ್ತು ನಿಸಾರ್ ಅಹ್ಮದ್ ಪುಟ 2ಕ್ಕೆ

# ಮೋದಿ ಮೇಲೆ ಹಲ್ಲೆ ಸಾಧ್ಯತೆ: ಸ್ಪೀಕರ್ ಹೇಳಿಕೆಗೆ ಕೋಲಾಹಲ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಮೇಲೆ ದೈಹಿಕ ದಾಳಿ ನಡೆಸಲು ಕಾಂಗ್ರೆಸ್ ಸಂಸದರು ಯೋಜನೆ ರೂಪಿಸಿದ್ದಾರೆ ಎಂಬ ಮಾಹಿತಿ ತಿಳಿದುಬಂದ ಹಿನ್ನೆಲೆಯಲ್ಲಿ ಪ್ರಜಾಪ್ರಭುತ್ವದ ದೇವಾಲಯದಲ್ಲಿ ಅಹಿತಕರ ಘಟನೆಯನ್ನು ತಡೆಯಲು ಸದನವನ್ನು ಮುಂದೂಡಲಾಯಿತು. ಅಲ್ಲದೇ ಪ್ರಧಾನಿ ಮೋದಿ ಭಾಷಣ ರದ್ದುಗೊಳಿಸಲಾಯಿತು ಎಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಹೇಳಿಕೆ ಸದನದಲ್ಲಿ ಗದ್ದಲ, ಕೋಲಾಹಲಕ್ಕೆ ಕಾರಣವಾಯಿತು.

ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಭಾಷಣವನ್ನು ಬುಧವಾರ ರದ್ದುಗೊಳಸಿರುವುದನ್ನು ವಿರೋಧಿಸಿ ಗುರುವಾರ ರಾಜ್ಯಸಭೆಯಲ್ಲಿ



ಪ್ರತಿಪಕ್ಷಗಳು ತೀವ್ರವಾಗಿ ತರಾಟೆಗೆ ತೆಗೆದುಕೊಂಡವು. ವಿಪಕ್ಷಗಳು ಪ್ರತಿಭಟನೆ ತೀವ್ರಗೊಳಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಸದನ ಮುಂದೂಡಿದ್ದ ಲೋಕಸಭೆ ಸ್ಪೀಕರ್ ಪ್ರಧಾನಿ ಮೋದಿ ಭಾಷಣ ರದ್ದುಗೊಳಿಸಿದ್ದಕ್ಕೆ ಕಾರಣವನ್ನೂ ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಭಾಷಣ ರದ್ದುಗೊಳಿಸಿರುವುದನ್ನು ಖಂಡಿಸಿ ಸಂಸತ್ತಿನಲ್ಲಿ ವಿಪಕ್ಷಗಳು ಆಕ್ರೋಶ ಪುಟ 2ಕ್ಕೆ

### ಪ್ರಿಯಾಂಕ ಗಾಂಧಿ ತಿರುಗೇಟು

ಪ್ರಧಾನಿ ನರೇಂದ್ರ ಮೋದಿ ಮೇಲೆ ದೈಹಿಕ ದಾಳಿ ನಡೆಸಲು ಕಾಂಗ್ರೆಸ್ ಮುಂದಾಗಿತ್ತು ಎಂಬ ಸ್ಪೀಕರ್ ಓಂ ಬಿಲ್ಲಾ ಹೇಳಿಕೆಯನ್ನು ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಖಂಡಿಸಿದರು. ಇದು ಶುದ್ಧ ಸುಳ್ಳು. ವಿರೋಧ ಪಕ್ಷಗಳು ಎತ್ತಿರುವ ವಿಷಯಗಳಿಗೆ ಸರಿಯಾಗಿ ಉತ್ತರ ಕೊಡದೇ ಸರ್ಕಾರವನ್ನು ಬಿಜೆಪಿ ಮತ್ತು ಪುಟ 2ಕ್ಕೆ



# ಭಾರತದ ಮೇಲೆ ಜಾಗತಿಕ ನಂಬಿಕೆ ಹೆಚ್ಚಳ

## ಹಿಂದಿನ ತಪ್ಪು ಸರಿಪಡಿಸಲು ನಮ್ಮ ಶಕ್ತಿ ವ್ಯಯ | ಪ್ರಧಾನಿ ಮೋದಿ ಅಭಿಮತ

**ನವದೆಹಲಿ:** ಹಿಂದಿನ ತಪ್ಪುಗಳನ್ನು ಸರಿಪಡಿಸಲು ನಮ್ಮ ಶಕ್ತಿಯ ಮಹತ್ವದ ಭಾಗ ವ್ಯಯವಾಗುತ್ತಿದೆ. ಈ ಹಿಂದೆ ಭಾರತದ ಬಗ್ಗೆ ಸೃಷ್ಟಿಯಾದ ಚಿತ್ರಣವನ್ನು ಅಳಿಸಲು ಹೆಚ್ಚಿನ ಪ್ರಯತ್ನ ಬೇಕಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಸಭೆಯಲ್ಲಿ ತಿಳಿಸಿದರು.

ರಾಜ್ಯಸಭೆಯಲ್ಲಿ ಗುರುವಾರ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಗೆ ಉತ್ತರಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ನಾವು ಭವಿಷ್ಯಕ್ಕೆ ಸಿದ್ಧವಾಗಿರುವ ನೀತಿಗಳ ಮೇಲೆ ಬಲವಾದ ಒತ್ತು ನೀಡಿದ್ದೇವೆ. ಇಂದು, ದೇಶವನ್ನು ನೀತಿ ಮತ್ತು ಕಾರ್ಯತಂತ್ರದ ಆಧಾರದ ಮೇಲೆ ಆಳಲಾಗುತ್ತಿದೆ. ಭಾರತದ ಮೇಲಿನ ಜಾಗತಿಕ ನಂಬಿಕೆ ಹೆಚ್ಚುತ್ತಿದೆ ಎಂದು ಹೇಳಿದರು.

ಭಾಷಣದ ಸಂದರ್ಭದಲ್ಲಿ ಪ್ರತಿಪಕ್ಷಗಳ ತೀವ್ರ ಗದ್ದಲ ಹಾಗೂ ಕೋಲಾಹದ ನಡುವೆ



ದೇಶದ ಪ್ರಗತಿಯ ಕುರಿತು ವಿವರಣೆ ನೀಡಿದ ಪ್ರಧಾನಿ ಮೋದಿ, ಭಾರತ ಈಗ ಎಲ್ಲಾ ಕ್ಷೇತ್ರಗಳಲ್ಲೂ ಮುನ್ನುಗ್ಗುತ್ತಿದೆ. 21ನೇ ಶತಮಾನದ ಮೊದಲ ಕಾಲುಭಾಗ ಮುಗಿದು ಹೋಗಿದೆ. ಸ್ವಾತಂತ್ರ್ಯದ ಶತಮಾನೋತ್ಸವದಲ್ಲಿ ಮತ್ತೊಂದು ಕಾಲು ಭಾಗ ಬರಲಿದೆ. 21ನೇ ಶತಮಾನದ ಕಾಲುಭಾಗ ಭಾರತದ ಅಭಿವೃದ್ಧಿಗೆ ಮೀಸಲು ಎಂದು ಹೇಳಿದರು.

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದಾಗ ಆರ್ಥಿಕತೆಯಲ್ಲಿ 6ನೇ ಸ್ಥಾನದಲ್ಲಿ ಭಾರತ ಇತ್ತು. ಇವರೆಲ್ಲಾ ಸೇರಿ 12ನೇ ಸ್ಥಾನಕ್ಕೆ ಇಳಿಸಿ ಬಿಟ್ಟರು. ಆದರೆ ನಾವು ಅಧಿಕಾರಕ್ಕೆ ಬಂದ ಪುಟ 2ಕ್ಕೆ

### ಪ್ರತಿಪಕ್ಷಗಳ ಸಭಾತ್ಯಾಗ

ಪ್ರಧಾನಿ ಮೋದಿ ಭಾಷಣ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷಗಳ ಸದಸ್ಯರು ಗಲಾಟೆ ಆರಂಭ ಮಾಡಿದರು. ಗದ್ದಲ. ಕೋಲಾಹಲದ ನಡುವೆಯೂ ಪ್ರಧಾನಿ ಮೋದಿ ಭಾಷಣ ಓದಿದರು. ವಿಪಕ್ಷ ನಾಯಕರು ಪ್ರಧಾನಿ ವಿರುದ್ಧ ಘೋಷಣೆ ಕೂಗಿದರು. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಮೋದಿ ಸರ್ವಾಧಿಕಾರಿ ಧೋರಣೆ ನಡೆಯುವುದಿಲ್ಲ ಎಂದು ಪ್ರತಿಪಕ್ಷಗಳ ಸದಸ್ಯರು ಘೋಷಣೆ ಕೂಗಿ ಸಭಾತ್ಯಾಗ ಮಾಡಿ ಸದನದಿಂದ ಹೊರನಡೆದರು.

ಮೊದಲ ಪುಟದಿಂದ

## ಪ್ರತಿಪಕ್ಷಗಳ ಸಭಾತ್ಯಾಗ

ಬಳಿಕ 3ನೇ ಸ್ಥಾನಕ್ಕೆ ಬಂದಿದ್ದೇವೆ. ಭಾರತ ಎಲ್ಲಾ ಕ್ಷೇತ್ರಗಳಲ್ಲಿ ಮುನ್ನುಗ್ಗುತ್ತಿದೆ. ದೊಡ್ಡ ದೊಡ್ಡ ಆರ್ಥಿಕತೆಯಲ್ಲಿ ಭಾರತದ ಬೆಳವಣಿಗೆಯೂ ಹೆಚ್ಚಿದೆ. ಹೆಚ್ಚಿನ ಬೆಳವಣಿಗೆ ಕಡಿಮೆ ಹಣದುಬ್ಬರ ಇದರ ಲಕ್ಷಣವಾಗಿದೆ ಎಂದರು. ಭಾರತವು ಹಲವಾರು ದೇಶಗಳೊಂದಿಗೆ ಭವಿಷ್ಯಕ್ಕೆ ಸಿದ್ಧವಾದ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕುತ್ತಿದೆ. ಕಳೆದ ಕೆಲವು ದಿನಗಳಲ್ಲಿ, ನಾವು ವಿಶ್ವದ 9 ದೊಡ್ಡ ಮತ್ತು ಪ್ರಮುಖ ದೇಶಗಳೊಂದಿಗೆ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಿದ್ದೇವೆ. 27 ದೇಶಗಳೊಂದಿಗೆ, ಯುರೋಪಿಯನ್ ಒಕ್ಕೂಟದೊಂದಿಗೆ ಮಾಡಿಕೊಂಡಿರುವ ಒಪ್ಪಂದವೂ ಒಪ್ಪಂದಗಳ ಮಹಾ ತಾಯಿ ಎಂದು ಬಣ್ಣಿಸಿದರು.

## ಯುವಕನಿಗೆ 49 ಕೋಟಿ ಬಹುಮಾನ

ಮುಖ್ಯ ಜಾಕ್ಪಾಟ್ ಜೊತೆಗೆ ಹಲವು ಹೆಚ್ಚುವರಿ ಬಹುಮಾನಗಳು ಇದ್ದ ಲಕ್ಕಿ ಡ್ರಾ ಇದಾಗಿತ್ತು. ನೇರ ಪ್ರಸಾರ ಡ್ರಾದಲ್ಲಿ ಬಹುಮಾನ ಘೋಷಣೆ ಮಾಡಲಾಯಿತು. ಓಮನ್‌ನಲ್ಲಿ ಚಿಲ್ಲರೆ ವ್ಯಾಪಾರ ಕ್ಷೇತ್ರದಲ್ಲಿ ಸೇಲ್ಸ್ ವಿಭಾಗದಲ್ಲಿ ಶಂತನು ಕೆಲಸ ಮಾಡುತ್ತಿದ್ದಾರೆ. ಸ್ನೇಹಿತನ ಜೊತೆ ಸೇರಿ ಟಿಕೆಟ್ ಖರೀದಿಸಿದ್ದರು. ಬಹುಮಾನವನ್ನು ಸ್ನೇಹಿತನ ಜೊತೆ ಹಂಚಿಕೊಳ್ಳುವುದಾಗಿ ನಿರ್ಧರಿಸಿದ್ದಾರೆ. ಬಹುಮಾನದ ಹಣವನ್ನು ಏನು ಮಾಡುವುದು ಎಂದು ನಿರ್ಧರಿಸಿಲ್ಲ ಎಂದು ತಿಳಿಸಿದ್ದಾರೆ.

## ರಾಯಭಾರಿ ಕಚೇರಿಗೆ ಬಾಂಬ್ ಬೆದರಿಕೆ

ಮಾಡುತ್ತೇವೆ ಎಂದು ಇ-ಮೇಲ್ ಮೂಲಕ ಬೆದರಿಕೆ ಒಡ್ಡಿದ್ದರು. ಇಟಾಲಿಯನ್ ಕಾನ್ಸುಲೇಟ್‌ನ ಸೆಕ್ಯೂರಿಟಿ ಮ್ಯಾನೇಜರ್ ಜಿಯೋಡೊಮೆನಿಕ್ ಒ ಮಿಲಾನೋ ಅವರು ಹಲಸೂರು ಪೊಲೀಸರಿಗೆ ದೂರು ನೀಡಿದ್ದಾರೆ.

## ನೀರಿನ ದರ ಏರಿಕೆ ಶಾಕ್

ಸಾಧ್ಯತೆಯಿದೆ. ಕಳೆದ ವರ್ಷದ ಏಪ್ರಿಲ್‌ನಲ್ಲಿ ಗೃಹ ಬಳಕೆದಾರರಿಗೆ ಪ್ರತಿ ಲೀಟರ್ ಗೆ ಕನಿಷ್ಠ 0.15 ಪೈಸೆ ಗರಿಷ್ಠ 1 ಪೈಸೆ ಹೆಚ್ಚಳ ಮಾಡಲಾಗಿತ್ತು. ವಾಣಿಜ್ಯ ಬಳಕೆಗೆ ಪ್ರತಿ ಲೀಟರ್ ಗರಿಷ್ಠ 1.90 ಪೈಸೆಯವರೆಗೆ ಏರಿಕೆ ಮಾಡಲಾಗಿತ್ತು.

# ಕಾಡಾನೆ ದಾಳಿಗೆ ವ್ಯಕ್ತಿ ಬಲಿ



ಸರಗೂರು: ಆಹಾರ ಅರಸಿ ಕಾಡಿನಿಂದ ಹೊರ ಬಂದ ಕಾಡಾನೆ ದಾಳಿಗೆ ಬಹಿರ್ದೆಸೆಗೆ ತೆರಳಿದ ರೈತನೊರ್ವ ಮೃತಪಟ್ಟಿರುವ ಘಟನೆ ಗುರುವಾರ ಬೆಳಗ್ಗೆ ನಡೆದಿದ್ದು, ಅರಣ್ಯ ಇಲಾಖೆ ವಿರುದ್ಧ ಸಾರ್ವಜನಿಕರು ಆಕ್ರೋಶವ್ಯಕ್ತಪಡಿಸಿದ್ದಾರೆ.

ತಾಲೂಕಿನ ಬಿ.ಮಟಕೆರೆ ಎಸ್ಟಿ ಕಾಲನಿ ಹಾಡಿ ನಿವಾಸಿ ರೈತ ಮಾದ (70) ಕಾಡಾನೆ ದಾಳಿಗೆ ಬಲಿಯಾದವ. ಈತ ಪ್ರತಿ ದಿನ ರಾತ್ರಿ ಹಾಡಿ ಸಮೀಪದ ವಾಟರ್ಟ್ಯಾಂ ಕ್ನಲ್ಲಿ ಮಲಗುತ್ತಿದ್ದ. ಎಂದಿ ನಂತೆ ಗುರು ವಾರವೂ ಮಲಗಿದ್ದಾನೆ. ಆದರೆ, ಗುರುವಾರ ಬೆಳಗ್ಗೆ 5.30ಕ್ಕೆ ಬಹಿರ್ದೆಸೆಗೆ ಬಂದಿದ್ದಾನೆ. ಆಗ ಕಾಡಾನೆ ದಾಳಿಗೆ ಸಿಲುಕಿ ಸಾವನ್ನಪ್ಪಿದ್ದಾನೆ. ಮೃತನಿಗೆ ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಇದ್ದಾರೆ.

### ಘಟನೆ ವಿವರ

ಮಂಗಳವಾರ ರಾತ್ರಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೊಳೆಯೂರು ಅರಣ್ಯ ವಲಯ ಪ್ರದೇಶದಿಂದ ಮೇವು ಅರಸಿ ಹೊರ ಬಂದ ಆನೆ ಹಳೇ ಹೆಗ್ಗುಡಿಲು, ಹಳೆಯೂರು, ಬೆದ್ದಲಪುರ, ದಡದಹಳ್ಳಿ ಗ್ರಾಮಗಳಲ್ಲಿ ಓಡಾಡಿಕೊಂಡು ಹಂಚೀಪುರ ಗ್ರಾಮದ ಕೆರೆಯ ಬಳಿ ಪೊದೆಯಲ್ಲಿ ತಂಗಿತ್ತು. ನಂತರ ಬುಧವಾರ ರಾತ್ರಿ ಅರಣ್ಯ ಇಲಾಖೆ ಸಿಬ್ಬಂದಿಗಳು ಆನೆ ಯನ್ನು ಮತ್ತೆ ಕಾಡಿಗೆ ಓಡಿಸಲು ಯತ್ನಿಸಿದ್ದರು. ಆಗ ಆನೆ ಮಸಹಳ್ಳಿ,



ದೇವಲಾಪುರ ಮಾರ್ಗ ವಾಗಿ ಕಲ್ಲಹಳ್ಳ ಗ್ರಾಮದ ಸಮೀಪದ ಮೊಳೆಂ ಯೂರು ಕಾಡಿನೊಳಗೆ ಹೋಗಿದೆ. ಇದರಿಂದ ಅರಣ್ಯ ಇಲಾಖೆ ನಿಟ್ಟುಸಿರು ಬಿಟ್ಟಿದೆ. ಮತ್ತೆ ಕಾಡಿನಿಂದ ಹೊರ ಬಂದ ಆನೆ ವಲ್ಲಹಳ್ಳಿ ಗ್ರಾಮದ ರಸ್ತೆ ಮಾರ್ಗವಾಗಿ ಬಿ. ಮಟಕೆರೆ ಎಸ್ಟಿ ಹಾಡಿ ಕಾಲನಿ ನೀರಿನ ಟ್ಯಾಂಕ್ ಬಳಿ ಹೋಗುವಾಗ ಗುರುವಾರ ಬೆಳಗ್ಗೆ 5.30ರ ವೇಳೆ ಬಹಿರ್ದೆಸೆಗೆ ಬಂದ ಮಾದ ಎಂಬುವರ ಮೇಲೆ ದಾಳಿ ನಡೆಸಿದ್ದು, ಸ್ಥಳದಲ್ಲೇ ಸಾವನ್ನಪ್ಪಿ ದ್ದಾರೆ. ಘಟನಾ ನಡೆದ ಒಂದು ತಾಸಿನ ಬಳಿಕ ರಸ್ತೆಯಲ್ಲಿ ಹೋಗುತ್ತಿದ್ದ ಸಾರ್ವಜನಿಕರು ಕಾಡಾನೆ ದಾಳಿಗೆ ಬಲಿಯಾದ ಮಾದ ಎಂಬುವರ ಮೃತದೇಹವನ್ನು ಕಂಡು ವಿಷಯವನ್ನು ಹಾಡಿ ಜನರಿಗೆ ತಿಳಿಸಿದ್ದಾರೆ. ಸ್ಥಳಕ್ಕಾಗಮಿಸಿದ ಹಾಡಿ ನಿವಾಸಿಗಳು ಖಚಿತಪಡಿಸಿಕೊಂಡರು. ನಿವಾಸಿ ಗಳ ಆಕ್ರಂದನ ಮುಗಿಲು ಮುಟ್ಟಿತ್ತು. ಸರಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೊ ತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ಮೃತದೇಹ ಒಪ್ಪಿಸಲಾಯಿತು. ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯಡಿಯಾಲ ಎಸಿಎಫ್ ಡಿ.ಪರಮೇಶ್, ಆರ್.ಎಫ್‌ಒಗಳಾದ ಮೊಳೆಯೂರು ನಾರಾಯಣ್, ಯಡಿಯಾಲ ಕೃಷ್ಣ, ನುಗು ಅನಿತ್ರಾಜ್, ಕಲ್ಲಕೆರೆ ರಾಜೇಶ್, ಸರಗೂರು ಡಾ.ಎಸ್.ಎಲ್.ಲೋಕೇಶ್, ಪಿಎಸ್‌ಐ ಕಿರಣ್, ಸಿಬ್ಬಂದಿವರ್ಗ ಇಲಾಖೆ ಸಿಬ್ಬಂದಿ ಇದ್ದರು.

### ಇಲಾಖೆ ವಿರುದ್ಧ ಆಕ್ರೋಶ

ಕಾಡಂಚಿನ ಗ್ರಾಮಗಳ ರೈತರಿಗೆ ಸೂಕ್ತ ರಕ್ಷಣೆ ಇಲ್ಲದಾಗಿದೆ. ಜಮೀನಿನಲ್ಲಿ ಜೀವ ಹಿಡಿದುಕೊಂಡು ಕೆಲಸ ಮಾಡಬೇಕಾದ ಪರಿಸ್ಥಿರಿ ಉಂಟಾಗಿದೆ. ಹೀಗಾಗಿ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ರೈತರಿಗೆ ರಕ್ಷಣೆ ನೀಡಬೇಕೆಂದು ಒತ್ತಾಯಿಸಿ ಹಲವಾರು ರೈತರು ಅರಣ್ಯ ಇಲಾಖೆ ವಿರುದ್ಧ ತಮ್ಮ ಅಸಮದಾನ ವ್ಯಕ್ತಪಡಿಸಿದರು. ಸ್ಥಳಕ್ಕೆ ಆಗಮಿಸಿದ ಸಿಎಫ್ ಎಸ್.ಪ್ರಭಾಕರನ್, ಇಲಾಖೆ ವತಿಯಿಂದ ಮೃತರ ಕುಟುಂಬಕ್ಕೆ ಸರ್ಕಾರದ 20 ಲಕ್ಷ ರೂ.ಪರಿಹಾರದ ಚೆಕ್ ವಿತರಿಸಿ, ಮೃತರ ಪತ್ನಿಗೆ ಐದು ವರ್ಷದವರೆಗೆ ಮಾಸಿಕ ವೇತನ 4 ಸಾವಿರ ರೂ.ನೀಡಲಾಗುವುದು. ಕುಟುಂಬದ ಒಬ್ಬ ಸದಸ್ಯರಿಗೆ ಇಲಾಖೆಯಲ್ಲಿ ಕೆಲಸ ನೀಡಲಾಗುವುದು. ಆನೆ ದಾಳಿಗೆ ಮಾದ ಎಂಬುವರು ಬಲಿಯಾಗಿರುವುದು ತುಂಬಾ ನೋವು ತಂದಿದೆ. ಆನೆಗಳು ಕಾಡಿನಿಂದ ಹೊರಬರದಂತೆ ಎಚ್ಚರಿಕೆ ಕ್ರಮವಾಗಿ ರೈಲ್ವೆ ಬ್ಯಾರಿಕೇಟ್, ಪಿಪಿಟಿ ಎತ್ತಲಾಗಿದೆ. ಇದರಿಂದ ಕಾಡುಪ್ರಾಣಿಗಳ ಹಾವಳಿ ತಡೆಗೆ ಅನುಕೂಲವಾಗಲಿದೆ ಎಂದು ಹೇಳಿದರು.

## ಸ್ಪೀಕರ್ ಹೇಳಿಕೆಗೆ ಕೋಲಾಹಲ

ವ್ಯಕ್ತಪಡಿಸಿದವು. ಈ ವೇಳೆ ಲೋಕಸಭೆಯಲ್ಲಿ ಗದ್ದಲ ಉಂಟಾಗಿದ್ದರಿಂದ ಸದನವನ್ನು ಮಧ್ಯಾಹ್ನ 2 ಗಂಟೆಗೆ ಮುಂದೂಡಲಾಯಿತು. ರಾಜ್ಯಸಭೆಯಲ್ಲೂ ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಖರ್ಗೆ ಸರ್ಕಾರದ ನಡೆಯನ್ನು ಖಂಡಿಸಿದರು. ಪ್ರಧಾನಿ ಮೋದಿ ಭಾಷಣ ರದ್ದುಗೊಂಡಿದ್ದಕ್ಕೆ ವಿರೋಧ ಪಕ್ಷದ ಸದಸ್ಯರು ಪ್ರತಿಭಟನೆ ನಡೆಸಿದರು. ಸದನದ ಬಾವಿಗಿಳಿದು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಳಿಕ ಸ್ಪೀಕರ್ ಸದನವನ್ನ ಮಧ್ಯಾಹ್ನಕ್ಕೆ ಮುಂದೂಡಿದರು.

ರಾಜ್ಯಸಭೆ ಕಲಾಪ ಆರಂಭವಾಗುತ್ತಿದ್ದಂತೆ ಮಾತನಾಡಿದ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯಲ್ಲಿ ಪ್ರಧಾನಿ ಮೋದಿ ಭಾಷಣ ಮಾಡುವುದಿಲ್ಲ, ವಿಪಕ್ಷ ನಾಯಕ ಮಾತನಾಡುತ್ತೇನೆ ಅಂದರೆ ಅದಕ್ಕೂ ಅವಕಾಶ ಕೊಡುತ್ತಿಲ್ಲ. ಸರ್ಕಾರದ ಈ ನಡೆ ಸಂವಿಧಾನ ಮತ್ತು ಪ್ರಜಾಪ್ರಭುತ್ವಕ್ಕೆ ಮಾಡಿದ ಅಪಚಾರ ಎಂದು ವಾಗ್ದಾಳಿ ನಡೆಸಿದರು.

## ಶಾಸಕ ನಂಜೇಗೌಡಗೆ 'ಗೆಲುವು'

ಅದರಲ್ಲಿ ಯಾರು ಹೆಚ್ಚು ಮತಗಳಿಸಿದವರು ಎಂದು ಕಂಡುಬರುತ್ತದೆಯೋ ಅಂಥವರ ಆಯ್ಕೆಯಾದ ಅಭ್ಯರ್ಥಿ ಎಂದು ಘೋಷಿಸಬೇಕು ಎಂದು ಹೈಕೋರ್ಟ್ ಚುನಾವಣಾ ಆಯೋಗಕ್ಕೆ ಆದೇಶಿಸಿತ್ತು. ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಎಲ್ಲ 15 ಸ್ಪರ್ಧಿಗಳ ಏಜೆಂಟರುಗಳಿಗೆ ಮತ ಎಣಿಕೆ ಕೇಂದ್ರದಲ್ಲಿ ಸಮರ್ಪಕ ವ್ಯವಸ್ಥೆ ಮಾಡಿರಲಿಲ್ಲ. ಮತಗಳ ಎಣಿಕೆ ಒಂದೇ ಕೊಠಡಿಯಲ್ಲಿ ನಡೆಯಬೇಕಿತ್ತು. ಆದರೆ, ಎರಡು ಪ್ರತ್ಯೇಕ ಕೊಠಡಿಗಳಲ್ಲಿ ನಡೆದಿದೆ. ಈ ಮೂಲಕ ಜನಪ್ರತಿನಿಧಿಗಳ ಕಾಯ್ದೆ-1951 ಮತ್ತು ಚುನಾವಣಾ ಆಯೋಗ ಪ್ರಕಟಿಸಿದ್ದ ನಿಯಮಗಳನ್ನು ಉಲ್ಲಂಘಿಸಲಾಗಿದೆ. ಆದ್ದರಿಂದ, ನಂಜೇಗೌಡ ಅವರನ್ನು ವಿಜೇತ ಅಭ್ಯರ್ಥಿಯಾಗಿ ಘೋಷಣೆ ಮಾಡಿದ ಚುನಾವಣಾ ಆಯೋಗದ ಕ್ರಮವನ್ನು ರದ್ದುಪಡಿಸಬೇಕು. ಮತಗಳ ಮರು ಎಣಿಕೆಗೆ ನಿರ್ದೇಶಿಸಬೇಕು ಎಂದು ಮಂಜುನಾಥ್ ಗೌಡ ಕೋರಿದ್ದರು.

## ಮಹಿಳೆ ಆತ್ಮಹತ್ಯೆ ಯತ್ನ

ನದಿಗೆ ಹಾರಿ ಮಹಿಳೆಯನ್ನು ರಕ್ಷಿಸಿದ್ದಾರೆ. ನಂತರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಪೊಲೀಸರು ಕುಟುಂಬ ಸದಸ್ಯರಿಗೆ ಮಾಹಿತಿ ನೀಡಿದ್ದಾರೆ. ಈ ಸಂಬಂಧ ಶ್ರೀರಂಗಪಟ್ಟಣ ಪಟ್ಟಣ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

## ಚಂದ್ರಶೇಖರ್ ಹಿನ್ನೆಲೆ ಏನು?

**ತಿ.ನರಸೀಪುರ ತಾಲ್ಲೂಕಿನ ಜೆಇ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಅಲ್ಲದೆ, ಇವರ ಮಗ ಹಾಗೂ ಸೊಸೆಯೂ ಸಹ ಜೂನಿಯರ್ ಇಂಜಿಯರ್ ಆಗಿದ್ದಾರೆ.**

## 7ಕ್ಕೆ ವಿಷ್ಣು ಗಾಯನ ಕಾರ್ಯಕ್ರಮ

ಮೈಸೂರು: ಶಾರದಾ ದೇವಿ ನಗರದ ಗಾನ ಚಂದನ ಕಲಾ ಬಳಗದ ವತಿಯಿಂದ ಫೆ.7 ರಂದು ಸಂ5 ರಿಂದ ರಾತ್ರಿ 9.30 ರವ ರೆಗೆ ನಗರದ ನಾದಬ್ರಹ್ಮ ಸಂಗೀತ ಸಭಾದಲ್ಲಿ ವಿಷ್ಣು ಗಾನ ಅಮೃತ ಪಾನ ಶೀರ್ಷಿಕೆಯ ಡಾ.ವಿಷ್ಣು ವರ್ಧನ್ ಚಿತ್ರಗಳ ಅತ್ಯಂತ ಅಪರೂಪದ ಹಾಡುಗಳ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವ್ಯವಸ್ಥಾಪಕ ಆರ್. ಸುಧೀಂದ್ರ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಡಾ. ವಿಷ್ಣುವ ರ್ಧನ್ ಅವರ 75 ನೇ ಹುಟ್ಟುಹಬ್ಬ ಅಂಗವಾಗಿ ಈ ಕರೋಕೆ ಕಾರ್ಯಕ್ರಮ ಆಯೋಜಿಸಿದ್ದು, ಸುಮಾರು 35 ಹಾಡುಗಳನ್ನು ಹಾಡಲಾಗುವುದು, ಎಲ್ಲವೂ ಡಾ. ವಿಷ್ಣುವರ್ಧನ್ ಅವರು ನಟಿಸಿರುವ ಕನ್ನಡ ಚಿತ್ರಗಳ ಹಾಡುಗಳೇ ಆಗಿವೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದರು. ಎಂ.ಡಿ. ಪಾರ್ಥಸಾರಥಿ, ವಿಶ್ವನಾಥ ಶಾಸ್ತ್ರಿ, ಎಚ್.ಎಸ್.ಗೋಪಾಲ್‌ಕೃಷ್ಣ, ಶಶಿಕಲಾ, ಅಶ್ವಿನಿ ಪ್ರಶಾಂತ್, ಪಲ್ಲವಿ ಅರುಣ್ ಇದ್ದರು.



# ಜಿಲ್ಲಾಧಿಕಾರಿ ಹಠಾವೋ-ರೈತ ಬಚಾವೋ

## ರಾಜ್ಯ ರೈತ ಸಂಘದ ಆಶ್ರಯದಲ್ಲಿ ವಿವಿಧ ಸಂಘಟನೆಗಳು, ರೈತರಿಂದ ಪ್ರತಿಭಟನೆ



ರಾಮನಗರ: ಬಿಡದಿ ಟೌನ್ ಶಿಪ್ ಯೋಜನೆಯ ಪ್ರಸ್ತಾವನೆಯನ್ನು ರಾಜ್ಯಪಾಲರಿಗೆ ಸಲ್ಲಿಸಿದಾಗ ಸರ್ಕಾರಿ ಜಾಗ 2600 ಎಕರೆ ಇದೆ ಎಂದು ತಿಳಿಸಲಾಗಿತ್ತು. ಆದರೆ ಈಗ 720 ಎಕರೆ ಇದೆ ಎಂದು ಹೇಳುತ್ತಿದ್ದಾರೆ. ಉಳಿದ 1880 ಎಕರೆ ಸರ್ಕಾರಿಭೂಮಿ ಏನಾಯಿತು ಎಂದು ರಾಜ್ಯ ರೈತ ಸಂಘದ ಆಶ್ರಯದಲ್ಲಿ ವಿವಿಧ ಸಂಘಟನೆಗಳು ನಗರದಲ್ಲಿ ನಡೆದ ಪ್ರತಿಭಟನೆಯ ವೇಳೆ ರೈತರು ಜಿಲ್ಲಾಡಳಿತ ಹಾಗೂ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

ಬಿಡದಿ ಟೌನ್ ಶಿಪ್ ನೆಪದಲ್ಲಿ ಕೃಷಿ ಭೂಮಿ ಕಸಿದು ಅಧಿಕಾರ ದರ್ಪ ಮೆರೆಯುತ್ತಿರುವ ಜಿಲ್ಲಾಧಿಕಾರಿ ನಡೆ ಖಂಡಿಸಿ ಹಾಗೂ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ರೈತರು ನಗರದಲ್ಲಿ ಬುಧವಾರ ಪೊರಕೆ ಚಳವಳಿ ನಡೆಸಿದ ವೇಳೆ ತಮ್ಮ ಆಕ್ರೋಶ, ಅಸಮಾಧಾನವನ್ನು ಪ್ರತಿಭಟನಾಕಾರರು ಹೊರ ಹಾಕಿದರು. ಜಿಲ್ಲಾಡಳಿತ ತಕ್ಷಣ ಈ ವಿಚಾರದಲ್ಲಿ ಸಾರ್ವಜನಿಕರಿಗೆ ಸ್ಪಷ್ಟನೆ ಕೊಡಬೇಕು. ದಿವ್ಯ ಮೌನ ವಹಿಸಿದರೆ ಅದರ ಹೊಣೆಗಾರಿಕೆಯ ಭಾಗವಾಗಿ ಜಿಲ್ಲಾಧಿಕಾರಿಗಳ ಮೇಲೆ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿ ಅಮಾನತುಗೊಳಿಸಿ ಉನ್ನತ ನ್ಯಾಯಾಧೀಶರ ಸಮಿತಿ ರಚಿಸಿ ತನಿಖೆ ನಡೆಸಬೇಕೆಂದು ಆಗ್ರಹಿಸಿದರು. ಬಿಡದಿ ಟೌನ್ ಶಿಪ್ ಯೋಜನೆ ಹೆಸರಿನಲ್ಲಿ ಫಲವತ್ತಾದ ಕೃಷಿ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು.

### ಜಿಲ್ಲಾಧಿಕಾರಿಗಳದ್ದು ಸರ್ವಾಧಿಕಾರಿ ಶೈಲಿ ಆಡಳಿತ

ಜಿಲ್ಲಾಧಿಕಾರಿಗಳು ಪ್ರಜಾಪ್ರಭುತ್ವ ಆಡಳಿತವನ್ನು ಕಡೆಗಣಿಸಿ, ಸರ್ವಾಧಿಕಾರಿ ಶೈಲಿಯಲ್ಲಿ ಆಡಳಿತ ನಡೆಸುತ್ತಿರುವುದು ಆತಂಕಕಾರಿ ಮಾತ್ರವಲ್ಲದೆ ಅಪಾಯಕಾರಿಯಾಗಿದೆ. ಭೂಸ್ವಾಧೀನದ ವಿಚಾರದಲ್ಲಿ ಸರ್ಕಾರ ತಕ್ಷಣ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ಹೊರಡಿಸಿ, ರೈತರೊಂದಿಗೆ ಕಡ್ಡಾಯವಾಗಿ ಸಾರ್ವಜನಿಕ ವಿಚಾರಣೆ ಮತ್ತು ಗ್ರಾಮ ಮಟ್ಟದ ರೈತ ಸಭೆಗಳನ್ನು ನಡೆಸುವಂತೆ ತಿಳಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳು ರೈತರ ಧ್ವನಿಯನ್ನು ಮೌನಗೊಳಿಸಲು ಜಿಲ್ಲಾಧಿಕಾರಿ ಕಚೇರಿ ಆವರಣವನ್ನು ಪೊಲೀಸ್ ರಾಜ್ಯದಂತೆ ಪರಿವರ್ತಿಸಿದ್ದಾರೆ. ಯಾವುದೇ ತುರ್ತು ಪರಿಸ್ಥಿತಿ ಇಲ್ಲದಿದ್ದರೂ ಶಾಶ್ವತ ಸ್ವರೂಪದಲ್ಲಿ ಸೆಕ್ಷನ್ 144 ಹೇರಲಾಗಿದೆ. ಇದು ಸಿಆರ್ ಪಿಸಿ ಸೆಕ್ಷನ್ 144ರ ಸ್ಪಷ್ಟ ದುರುಪಂಯೋಗವಾಗಿದ್ದು, ಚಳವಳಿಗಳನ್ನು ಹತ್ತಿಕ್ಕುವ ವ್ಯವಸ್ಥಿತ ಪಿತೂರಿ ಎಂದು ಪ್ರತಿಭಟನಾಕಾರರು ದೂರಿದರು.

ಹೆಚ್ಚುವರಿ ಪೊಲೀಸ್ ವರಿ?ಾಧಿಕಾರಿ ರಾಮಚಂದ್ರಯ್ಯ ಅವರಿಗೆ ಮನವಿ ಸಲ್ಲಿಸಿದ ರೈತರು ತಮ್ಮ ಬೇಡಿಕೆಗಳು ಈಡೇರದಿದ್ದರೆ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಯ ಕರ್ನಾಟಕ ಜನಪರ ವೇದಿಕೆ ರಾಜ್ಯ ಸಲಹೆಗಾರ ಕುಮಾರಸ್ವಾಮಿ, ತಾಪಂ ಮಾಜಿ ಸದಸ್ಯ ಪ್ರಕಾಶ್ , ರೈತಸಂಘ ರಾಜ್ಯ ಉಪಾಧ್ಯಕ್ಷ ಮಲ್ಲಯ್ಯ, ರಾಜ್ಯ ಸಂಚಾಲಕ ಚೀಲೂರು ಮುನಿರಾಜು, ಜಿಲ್ಲಾಧ್ಯಕ್ಷ ಕೃ?ಯ್ಯ, ಗೌರವ ಅಧ್ಯಕ್ಷ ತಿಮ್ಮೇಗೌಡ, ಕಾರ್ಯಾಧ್ಯಕ್ಷ ಪುಟ್ಟಸ್ವಾಮಿ, ಪ್ರಧಾನ ಕಾರ್ಯದರ್ಶಿ ನಾಗರಾಜು, ಕಾರ್ಯದರ್ಶಿ ರಮ್ಯಾ ರಾಮಣ್ಣ, ನೇತ್ರಾವತಿ, ಬೆಂಗಳೂರು ಘಟಕ ಅಧ್ಯಕ್ಷ ಚಂದ್ರಶೇಖರ್ , ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ರತ್ನಮ್ಮ, ಕೆಆರ್ ಎಸ್ ಪಕ್ಷದ ಉಸ್ತುವಾರಿ ಎಲ್.ಜೀವನ್, ಅಂಬೇಡ್ಕರ್ ಸೇನೆ ಜಿಲ್ಲಾಧ್ಯಕ್ಷ ಕಿರಣ್ ಸಾಗರ್ , ಯುವ ಕನ್ನಡಿಗರ ಸೇನೆ ರಾಜ್ಯಾಧ್ಯಕ್ಷ ರಾಮ್ ಪ್ರಸಾದ್ ಗೌಡ, ಜಯ ಕರ್ನಾಟಕ ಜನಪರ ವೇದಿಕೆ ಸಂಚಾಲಕ ಸೇಬೋ ರಾಧಾಕೃ?, ಕಾರ್ಯಾಧ್ಯಕ್ಷ ರಾಮಚಂದ್ರಯ್ಯ, ನಮ್ಮ ಕನ್ನಡಿಗರ ವಿಜಯ ಸೇನೆ ಮುಖಂಡ ವಿಜಯ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

### ಪ್ರತಿಭಟನಾ ಮೆರವಣಿಗೆ

**ರೈತ, ದಲಿತ ಹಾಗೂ ಕನ್ನಡ ಪರ ಸಂಘಟನೆಗಳ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರೈತರು ಹಾಗೂ ರೈತ ಮಹಿಳೆಯರು ನಗರದ ಹಳೇಯ ಕಂದಾಯ ಭವನ ಬಳಿಯಿಂದ ಪೊರಕೆ ಪ್ರದರ್ಶಿಸುತ್ತಾ ಜಿಲ್ಲಾಧಿಕಾರಿ ಹಠಾವೋ – ರೈತ ಬಚಾವೋ ಎಂದು ಘೋ?ಣೆ ಕೂಗಿಕೊಂಡು ಜಿಲ್ಲಾ ಕಚೇರಿಗಳ ಸಂಕೀರ್ಣಕ್ಕೆ ಮೆರವಣಿಗೆಯಲ್ಲಿ ಆಗಮಿಸಿ ಧರಣಿ ಕುಳಿತರು.**

## ತಂಬಾಕು ತೆರಿಗೆಯಿಂದ ಉದ್ಯೋಗ ನಷ್ಟ: ವರದಿ




ಮೈಸೂರು: ಲಕ್ಷಾಂತರ ರೈತರು ಮತ್ತು ಕೃಷಿ ಕಾರ್ಮಿಕರ ಹಿತರಕ್ಷಣೆಗಾಗಿ ಶ್ರಮಿಸುತ್ತಿರುವ ಲಾಭರಹಿತ ಸಂಸ್ಥೆಯಾದ ಫೆಡರೇಶನ್ ಆಫ್ ಆಲ್ ಇಂಡಿಯಾ ಫಾರ್ಮರ್ ಅಸೋಸಿಯೇಷನ್ಸ್ (ಎಫ್‌ಎಐಎಫ್‌ಎ), ತಂಬಾಕು ಕೃಷಿ ವಲಯದ ಮೇಲೆ ವಿಧಿಸಲಾದ ಅತಿಯಾದ ಅಬಕಾರಿ ಸುಂಕದ ಪರಿಣಾಮಗಳ ಕುರಿತು ತಜ್ಞರು ಸಿದ್ಧಪಡಿಸಿದ ವರದಿಯನ್ನು ಬಿಡುಗಡೆ ಮಾಡಿದೆ.

ವರದಿಯ ಪ್ರಕಾರ, ಸಿಗರೇಟ್ ಮೇಲಿನ ಹೊಸ ತೆರಿಗೆಯು ಎಫ್‌ಸಿವಿ ಬೆಳೆಗಳ ಮಾರಾಟವನ್ನು 20% ರಷ್ಟು ಕಡಿಮೆ ಮಾಡುತ್ತದೆ ಮತ್ತು ಕೃಷಿ ಹಾಗೂ ಸಂಬಂಧಿತ ಚಟುವಟಿಕೆಗಳಲ್ಲಿ ಸರಿಸುಮಾರು 2.6 ಮಿಲಿಯನ್ (26 ಲಕ್ಷ) ಮಾನವ ದಿನಗಳ ಉದ್ಯೋಗ ನಷ್ಟಕ್ಕೆ ಕಾರಣವಾಗಬಹುದು. ಭಾರತದಲ್ಲಿ ಉದ್ಯೋಗ ಪರಿಸ್ಥಿತಿಯು ಈಗಾಗಲೇ ಸಂಕಷ್ಟದಲ್ಲಿರುವ ಸಮಯದಲ್ಲಿ, ಇದು ಎಫ್‌ಸಿವಿ ತಂಬಾಕು ಬೆಳೆಗಾರರು, ಮಹಿಳೆಯರು ಸೇರಿದಂತೆ ಕೃಷಿ ಕಾರ್ಮಿಕರು ಮತ್ತು ಗೋದಾಮು, ಹರಾಜು, ಸಾರಿಗೆ ಮುಂತಾದ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ಭಾರಿ ಹೊಡೆತ ನೀಡಲಿದೆ. ಈ ಕುರಿತು ಎಫ್‌ಎಐಎಫ್‌ಎ ಜಂಟಿ ಕಾರ್ಯದರ್ಶಿ ವಿವೇಕ್ ಅರಸ್ ಅವರು ಮಾತನಾಡಿ, "ಹೊಸ ತೆರಿಗೆಯು ಭಾರತದ ತಂಬಾಕು ರೈತರನ್ನು, ವಿಶೇಷವಾಗಿ ದಕ್ಷಿಣ ಭಾರತದ ಎಫ್‌ಸಿವಿ ಬೆಳೆಗಾರರನ್ನು ಬಾಧಿಸಲಿದೆ. ಕಠಿಣ ಮತ್ತು ತಾರತ ಮ್ಯದ ತೆರಿಗೆ ಹಾಗೂ ಕಾನೂನುಬಾಹಿರ ತಂಬಾಕಿನ ಕ್ಷಿಪ್ರ ಬೆಳವಣಿಗೆಯಿಂದಾಗಿ ಒಟ್ಟಾರೆ ತಂಬಾಕು ಮಾರುಕಟ್ಟೆಯಲ್ಲಿ ಭಾರತೀಯ ಎಫ್‌ಸಿವಿ ರೈತರ ಪಾಲು ಈಗಾಗಲೇ 21% ರಿಂದ 10% ಕ್ಕೆ ಇಳಿದಿದೆ. ಈ ಪಾಲು ಇನ್ನು ಮುಂದಕ್ಕೆ ಮತ್ತಷ್ಟು ಕುಸಿಯಲಿದ್ದು, ಎಫ್‌ಸಿವಿ ಬೆಳೆಗಾರರಿಗೆ ಉದ್ಯೋಗ ಮುಂದುವರಿಸಲು ಜಾಗವೇ ಇಲ್ಲದಂತಾಗುತ್ತದೆ" ಎಂದು ಆತಂಕ ವ್ಯಕ್ತಪಡಿಸಿದರು. "ಈ ತೆರಿಗೆ ನೀತಿಯು ಗ್ರಾಹಕರನ್ನು ಅಗ್ಗದ, ಅನಿಯಂತ್ರಿತ ಮತ್ತು ಕಾನೂನುಬಾಹಿರ ತಂಬಾಕು ಉತ್ಪನ್ನಗಳ ಕಡೆಗೆ ತಳ್ಳುತ್ತದೆ. ಇದು ಸಾರ್ವಜನಿಕ ಆರೋಗ್ಯದ ಗುರಿಗಳನ್ನು ಹಳಿತಪ್ಪಿಸುತ್ತದೆ ಮತ್ತು ಮಾರುಕಟ್ಟೆಯನ್ನು ವಿರೂಪಗೊಳಿಸುತ್ತದೆ. ಇದನ್ನು ಸರಿಪಡಿಸದಿದ್ದರೆ, ದಕ್ಷಿಣ ಭಾರತದ ಎಫ್‌ಸಿವಿ ತಂಬಾಕು ರೈತರು ಶಾಶ್ವತವಾಗಿ ಅಂಚಿಗೆ ತಳ್ಳಲ್ಪಡುವ ಅಪಾಯವಿದೆ. ಈ ವೈಪರೀತ್ಯವನ್ನು ಸರಿಪಡಿಸುವಂತೆ ನಾವು ಒತ್ತಾಯಿಸುತ್ತೇವೆ" ಎಂದರು.

## ಸಾಲದ ಚೆಕ್ ವಿತರಣೆ



ಎಚ್.ಡಿ.ಕೋಟೆ: ಸ್ಟೇಫ್ ಯೋಜನೆಯಡಿ ಮೈಮುಲ್ ವತಿಯಿಂದ ನೀಡುವ 46 ಸಾವಿರ ರೂ, ಬಡ್ಡಿ ರಹಿತ ಸಾಲದ ಚೆಕ್ಕನ್ನು ಹುಣಸಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ 14 ಫಲಾನುಭವಿಗಳಿಗೆ ಮೈಮುಲ್ ಅಧ್ಯಕ್ಷ ಕೆ. ಈರೇಗೌಡ ವಿತರಿಸಿದರು.

ನಿರ್ದೇಶಕರಾದ ದ್ರಾಕ್ಷಾಯಿಣಿ ಬಸವರಾಜು, ವಿಸ್ತರಣಾಧಿಕಾರಿ ಜಗದಾಂಬ, ಯೋಗೇಶ್, ಮಹಿಳಾ ಸಹಕಾರ ಸಂಘ ಹುಣಸಹಳ್ಳಿ ಅಧ್ಯಕ್ಷೆ ಸರೋಜಮ್ಮ, ಉಪಾಧ್ಯಕ್ಷೆ ಮಂಗಳಮ್ಮ, ನಿರ್ದೇಶಕರಾದ ಲತಾ, ಸಣ್ಣತಾಯಮ್ಮ, ವಿಜಿ, ನಾಗಮ್ಮ, ಸುಂದರಮ್ಮ, ಮಲ್ಲಿಗಮ್ಮ, ಕಾರ್ಯದರ್ಶಿ ಸುನಂದ, ಕೆ.ಬೆಳತ್ತೂರು ಸಹಕಾರ ಪತ್ತಿನ ಉಪಾಧ್ಯಕ್ಷ ಎಚ್.ಬಿ ನಾಗರಾಜು, ಗ್ರಾ.ಪಂ.ಸದಸ್ಯರಾದ ಪವಿತ್ರಾ, ಬಸವಣ್ಣ, ಚೆನ್ನಮಲ್ಲಪ್ಪ, ಜಯಶಂಕರ್ ಗ್ರಾಮಸ್ಥರು, ಮುಖಂಡರು ಇದ್ದಾರೆ.

# ಕನ್ನಡಾಂಬೆ ರಕ್ಷಣಾ ವೇದಿಕೆಯ ವಿವಿಧ ಸೇವಾಕಾರ್ಯ




ಮೈಸೂರು: ಶ್ರೀ ಶೃಂಗೇರಿ ಶಾರದಾ ಪೀಠದ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ಅವರಿಂದ ಶ್ರೀ ಬಾಲ ಮಂಜುನಾಥಸ್ವಾಮಿಗಳಿಗೆ ಶ್ರೀ ವಿದ್ಯಾನಂದ ಸ್ವಾಮಿಗಳು ಎಂಬ ನಾಮವನ್ನು ಅನುಗ್ರಹಿಸಿದ ಸ್ಮರಣಾರ್ಥ ಕನ್ನಡಾಂಬೆ ರಕ್ಷಣಾ ವೇದಿಕೆಯಿಂದ ವಿವಿಧ ಸಾಮಾಜಿಕ ಸೇವಾ ಕಾರ್ಯಗಳು ಜರುಗಿದವು.

ಗುರುವಾರ ಬೆಳಗ್ಗೆ ಹೂಟಗಳ್ಳಿಯಲ್ಲಿರುವ ಕನ್ನಡಾಂಬೆ ರಕ್ಷಣಾ ವೇದಿಕೆ ಕಚೇರಿ ಎದುರು ಅಧ್ಯಕ್ಷ ಬಿ.ಬಿ.ರಾಜಶೇಖರ್ ನೇತೃತ್ವದಲ್ಲಿ ನಡೆದ ಸರಳ ಸಮಾರಂಭದಲ್ಲಿ ವಿವಿಧ ಸರ್ಕಾರಿ ಶಾಲೆಗಳ 500ಕ್ಕೂ ಹೆಚ್ಚು ಮಕ್ಕಳಿಗೆ ನೋಟ್‌ಬುಕ್ ವಿತರಣೆ ಮಾಡಲಾಯಿತು. ಅಲ್ಲದೇ ಎರಡು ವೃದ್ಧಾಶ್ರಮಗಳಿಗೆ ಆಹಾರ, ದಿನಸಿ ಕಿಟ್‌ಗಳ ವಿತರಣೆ, ಉಚಿತ ಆರೋಗ್ಯ ಮತ್ತು ಕಣ್ಣು ತಪಾಸಣಾ ಶಿಬಿರಗಳು ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮವೂ ನಡೆಯಿತು.

ಸಮಾರಂಭವನ್ನು ಹೆಸರಾಂತ ಸಾಹಿತಿ ಜಯಪ್ಪ ಹೊನ್ನಾಳಿ ಉದ್ಘಾಟಿಸಿ ಮಾತನಾಡಿ, ಶ್ರೀ ಶೃಂಗೇರಿ ಶಾರದಾ ಪೀಠದ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ಅವರಿಂದ ಶ್ರೀ ಬಾಲ ಮಂಜುನಾಥಸ್ವಾಮಿಗಳಿಗೆ ಶ್ರೀ ವಿದ್ಯಾನಂದ ಸ್ವಾಮಿಗಳು ಎಂಬ ಅಭಿದಾನ ಪ್ರಧಾನ ಕಾರ್ಯಕ್ರಮದ ಸ್ಮರಣಾರ್ಥ 500ಕ್ಕೂ ಹೆಚ್ಚು ಸರ್ಕಾರಿ ಶಾಲೆಯ ಬಡ ಮಕ್ಕಳಿಗೆ ನೋಟ್‌ಬುಕ್ ವಿತರಣೆ, ಆರೋಗ್ಯ ತಪಾಸಣೆ, ಕಣ್ಣು ತಪಾಸಣೆ, ವೃದ್ಧಾಶ್ರಮಗಳಿಗೆ ದಿನಸಿಕಿಟ್ ವಿತರಣೆ ಮತ್ತು ಸಾರ್ವಜನಿಕರಿಗೆ ಅನ್ನಸಂತರ್ಪಣೆ ಮಾಡುವ ಮೂಲಕ ಕನ್ನಡಾಂಬೆ ರಕ್ಷಣಾ ವೇದಿಕೆ ಅಧ್ಯಕ್ಷರಾದ ಬಿ.ಬಿ.ರಾಜಶೇಖರ್ ಅವರು ಇಂದು ಸಮಾಜಪರ, ಸಮಷ್ಠಿಪರ ಲೋಕೋಪಕಾರ, ಶಿಸ್ತುಬದ್ಧ ಕಾರ್ಯಕ್ರಮ ಆಯೋಜಿಸಿರುವುದು ಸಂತಸದ ವಿಷಯ, ಕನ್ನಡಾಂಬೆ ರಕ್ಷಣಾ ವೇದಿಕೆ ಕನ್ನಡಪರ ಸಂಘಟನೆಗಳಿಗೆ ಮಾದರಿ ಎನಿಸಿದೆ ಎಂದರು.

ಸಮಾರಂಭದ ಅಧ್ಯಕ್ಷತೆವಹಿಸಿದ್ದ ಸಮಾಜ ಸೇವಕ ರಘುರಾಮ್ ವಾಜಿಪೇಯಿ ಮಾತನಾಡಿ, ಶೃಂಗೇರಿ ಶ್ರೀಗಳ ಪ್ರೇರಣೆಯಿಂದ ಸನ್ಯಾಸ ಧೀಕ್ಷೆ ಪಡೆದ ಬಾಲ ಮಂಜುನಾಥ ಸ್ವಾಮಿಗಳು ಇದೀಗ ಶ್ರೀ ವಿಧುಶೇಖರ ಭಾರತೀ ಶ್ರೀಗಳಿಂದ ಶ್ರೀ ವಿದ್ಯಾನಂದ ಸ್ವಾಮಿ ಎಂಬ ಅಭಿದಾನ ಪಡೆದ ಹಿನ್ನಲೆ ಕನ್ನಡಾಂಬೆ ರಕ್ಷಣಾ ವೇದಿಕೆ ಯಾವುದೇ ಆಡಂಬರವಿಲ್ಲದೇ, ಹೋಮ ಹವನಕ್ಕೆ ಹಣ ಖರ್ಚು ಮಾಡದೆ, 500 ಮಕ್ಕಳಿಗೆ ನೋಟ್‌ಬುಕ್ ವಿತರಣೆ ಮಾಡಿದ್ದು ಅತ್ಯುತ್ತಮ ಕೆಲಸ ಎಂದರು. ವಿಸ್ತಾರ ಆಸ್ಪತ್ರೆ ಆರೋಗ್ಯ ತಪಾಸಣೆ, ವಾಸನ್ ಐ ಕೇರ್‌ನಿಂದ ಕಣ್ಣಿನ ತಪಾಸಣೆ ಮಾಡಲಾಯಿತು. ಮುಖ್ಯ ಅತಿಥಿ ಪೊಲೀಸ್ ಸೊಸೈಟಿ ಅಧ್ಯಕ್ಷ ಎಸ್.ರವಿ, ಹೂಟಗಳ್ಳಿ ಚಿಕ್ಕಣ್ಣ, ಲಲಿತಾ ನಾಗೇಶ್, ರವಿಗೌಡ, ಹರೀಶ್ ಯಾದವ್, ಕರೀಗೌಡ, ಮಹಿಳಾ ಘಟಕದ ಅಧ್ಯಕ್ಷರಾದ ತಾರ, ಸಿಂಧುವಳ್ಳಿ ಶಿವಕುಮಾರ್, ಕಿಕ್ಕೇರಿ ಕಿರಣ, ಮಂಜು ತೇಜೂರ್, ಹುಣಸೂರು ಪರಮೇಶ್, ಲೂಯೀಸ್, ಹೊನ್ನೇಗೌಡ, ರಶ್ಮೀಸಿಂಗ್, ಸೌಭಾಗ್ಯ, ವಿಷ್ಣು, ಶಿವಲಿಂಗಯ್ಯ, ಪುಟ್ಟಸ್ವಾಮಿ, ಜಯಲಕ್ಷ್ಮಿ, ಹರೀಶ್, ವತ್ಸಲ, ಮುಖ್ಯ ಶಿಕ್ಷಕರಾದ ಶಿವಪ್ಪ, ಸತೀಶ್, ಮಧು ಮುಂತಾದವರು ಇದ್ದರು.

**ಕನ್ನಡಾಂಬೆ ರಕ್ಷಣಾ ವೇದಿಕೆಯಿಂದ ಸರ್ಕಾರಿ ಶಾಲೆಯ 500 ಮಕ್ಕಳಿಗೆ ನೋಟ್‌ಬುಕ್ ವಿತರಣೆ, ಅನಾಥಾಶ್ರಮ, ವೃದ್ಧಾಶ್ರಮಗಳಿಗೆ ದಿನಸಿ ಕಿಟ್ ವಿತರಣೆ, ಆರೋಗ್ಯ ತಪಾಸಣೆ, ಕಣ್ಣು ತಪಾಸಣೆ ಮತ್ತು ಅನ್ನಸಂತರ್ಪಣೆ ಮಾಡುವ ಮೂಲಕ ಶ್ರೀ ಶೃಂಗೇರಿ ಶಾರದಾ ಪೀಠದ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ಅವರಿಂದ ಶ್ರೀ ಬಾಲ ಮಂಜುನಾಥಸ್ವಾಮಿಗಳಿಗೆ ಶ್ರೀ ವಿದ್ಯಾನಂದ ಸ್ವಾಮಿಗಳು ಎಂಬ ನಾಮವನ್ನು ಅನುಗ್ರಹಿಸಿದ ಪುಣ್ಯ ಕಾರ್ಯಕ್ರಮದ ಸ್ಮರಣೆ ಮಾಡಿದ್ದೇವೆ.**

**-ಬಿ.ಬಿ.ರಾಜಶೇಖರ್**
ಅಧ್ಯಕ್ಷ, ಕನ್ನಡಾಂಬೆ ರಕ್ಷಣಾ ವೇದಿಕೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ನಿಮ್ಮ ಆರೋಗ್ಯ ನಮ್ಮ ಆದ್ಯತೆ







- ಹೃದಯಾಘಾತ ತಡೆಗೆ **ಡಾ. ಪುನೀತ್ ರಾಜ್‌ಕುಮಾರ್ ಹೃದಯಜ್ಯೋತಿ** ಯೋಜನೆ ಜಾರಿ
- ಅಂಧತ್ವ ಮುಕ್ತ ಕರ್ನಾಟಕ ನಿರ್ಮಾಣಕ್ಕಾಗಿ **ಆಶಾಕಿರಣ** ಯೋಜನೆ
- ಬೆಂಗಳೂರು ನಗರದ ಸರ್ಕಾರಿ ಆಸ್ಪತ್ರೆಗಳಿಗೆ **ಪೌಷ್ಟಿಕ ಆಹಾರ ಪೂರೈಕೆ**
- ತಾಯಿ ಮತ್ತು ಶಿಶು ಮರಣ ಇಳಿಕೆಗೆ ತಾಲ್ಲೂಕು ಆಸ್ಪತ್ರೆಗಳಲ್ಲಿ ತ್ರಿವಳಿ ತಜ್ಞರ ನಿಯೋಜನೆ
- ಮೂತ್ರಪಿಂಡ, ಹೃದಯ, ಯಕೃತ್ ಮತ್ತು ಬಹು ಅಂಗಾಂಗ ವೈಫಲ್ಯಕ್ಕೆ **ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಉಚಿತ** ಕಸಿ ಚಿಕಿತ್ಸೆ
- ದೇಶದಲ್ಲೇ ಮೊದಲ ಬಾರಿಗೆ ರಾಜ್ಯದ ಎಲ್ಲಾ ಸರ್ಕಾರಿ ಇಲಾಖೆಗಳ ನೌಕರರು, ಗುತ್ತಿಗೆ, ಹೊರಗುತ್ತಿಗೆ ನೌಕರರಿಗೆ **₹. 5 ಲಕ್ಷದ ವರೆಗೆ ನಗದು ರಹಿತ ಚಿಕಿತ್ಸೆಯ** ಸೌಲಭ್ಯ
- ಎಲ್ಲ ತಾಲ್ಲೂಕು ಆಸ್ಪತ್ರೆಗಳಲ್ಲಿ 24x7 ಆರೋಗ್ಯ ಸೇವೆ
- ರಾಜ್ಯದ ಎಲ್ಲ ಜಿಲ್ಲಾಸ್ಪತ್ರೆಗಳು, ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ದೃಷ್ಟಿಕೇಂದ್ರಗಳ ಸ್ಥಾಪನೆ
- **ಗೃಹ ಆರೋಗ್ಯ :** ಆರೋಗ್ಯ ಸೇವೆ ಮನೆ ಬಾಗಿಲಿಗೆ ಯೋಜನೆ ಜಾರಿ
- ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್ ಅನ್ನು ತಡೆಗಟ್ಟಲು 14 ವರ್ಷದ ಹೆಣ್ಣು ಮಕ್ಕಳಿಗೆ **HPV ಲಸಿಕೆ**

## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ


ಬ್ರಾಹ್ಮಣ ಸಮುದಾಯ ಮಾಲೀಕತ್ವದ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ನ್ಯೂನ್ಯತೆ ಹಿನ್ನೆಲೆಯಲ್ಲಿ ನಾಲ್ವರು ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮಕ್ಕೆ ಸೂಚನೆ

**ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್. ಕೃಷ್ಣ ಹೇಳಿಕೆ । ಅಧಿಕಾರಿಗಳ ಸಭೆ**



ಚಾಮರಾಜನಗರ:– ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಭೇಟಿ ಹಮ್ಮಿಕೊಂಡು ವಿವಿಧೆಡೆ ಶಾಲೆ, ಅಂಗನವಾಡಿ, ನ್ಯಾಯಬೆಲೆ ಅಂಗಡಿ, ಆಸ್ಪತ್ರೆ, ಹಾಸ್ಟಲ್, ರೈತಸಂಪರ್ಕ ಕೇಂದ್ರಗಳ ಕಾರ್ಯವೈಖರಿಯನ್ನು ಪರಿಶೀಲಿಸಿದ್ದೇನೆ. ನ್ಯೂನ್ಯತೆ ಕಂಡುಬಂದ ಹಿನ್ನೆಲೆಯಲ್ಲಿ ನಾಲ್ವರು ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡಲಾಗಿದ್ದು, ಸಂಬಂಧಪಟ್ಟ ಇಲಾಖೆಯ ಹಿರಿಯ ಅಧಿಕಾರಿಗಳು ಅಗತ್ಯ ಕ್ರಮ ವಹಿಸಿದ್ದಾರೆ ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್. ಕೃಷ್ಣ ತಿಳಿಸಿದರು.

ಅಧಿಕಾರಿಗಳ ಸಭೆಯ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರು ಆಹಾರ ದಾಸ್ತಾನು ವ್ಯತ್ಯಾಸ, ವಹಿಗಳನ್ನು ನಿರ್ವಹಿಸದಿರುವುದು ಸೇರಿದಂತೆ ಇನ್ನಿತರ ನ್ಯೂನ್ಯತೆಗಳ ಕಾರಣದಿಂದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಓರ್ವ ಹಾಸ್ಟೆಲ್ ವಾರ್ಡನ್, ಸಮಾಜ ಕಲ್ಯಾಣ ಇಲಾಖೆ ಓರ್ವ ಹಾಸ್ಟೆಲ್ ವಾರ್ಡನ್, ಸರ್ಕಾರಿ ಶಾಲೆಯ ಮಧ್ಯಾಹ್ನದ ಬಿಸಿಯೂಟ ನಿರ್ವಹಣೆಗೆ ಸಂಬಂಧಿಸಿದಂತೆ ಓರ್ವರು, ಪೌಷ್ಠಿಕ ಆಹಾರವನ್ನು ಕೆಲ ಫಲಾನುಭವಿಗಳಿಗೆ ವಿತರಿಸದೇ ದಾಖಲು ಪುಸ್ತಕದಲ್ಲಿ ವಿತರಣೆ ಮಾಡಲಾಗಿದೆ ಎಂದು ನಮೂದಿಸಿರುವ ಓರ್ವ ಅಂಗನವಾಡಿ ಕಾರ್ಯಕರ್ತೆ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸೂಚಿಸಲಾಗಿದೆ. ಕಡ್ಡಾಯ ರಜೆಯಂತಹ ಕ್ರಮಗಳಿಗೆ ಅಧಿಕಾರಿಗಳು ಕ್ರಮವಹಿಸಿದ್ದಾರೆ. ಮಲ್ಲಯ್ಯನಪುರದಲ್ಲಿ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ಚೀಟಿದಾರರಿಗೆ ವಿತರಿಸಲಾಗಿರುವ ಪಡಿತರದಲ್ಲಿ ತೂಕ ವ್ಯತ್ಯಾಸ, ಬಯೋಮೆಟ್ರಿಕ್ ಪಡೆದು ಆಹಾರ ಪದಾರ್ಥ ವಿತರಣೆ ಮಾಡದೇ ತಡವಾಗಿ ಆಹಾರ ಧಾನ್ಯ ವಿತರಣೆ ಮಾಡುತ್ತಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಸದರಿ ನ್ಯಾಯಬೆಲೆ ಅಂಗಡಿಯನ್ನು ಅಮಾನತು ಮಾಡಲಾಗಿದೆ ಎಂದು ವಿವರಿಸಿದರು.

ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವ್ಯಾಪ್ತಿಯ ಹಾಸ್ಟಲ್‌ಗಳಲ್ಲಿ ಮುಖ್ಯವಾಗಿ ಸ್ವಚ್ಚತೆ ಕಾಪಾಡಿಕೊಳ್ಳಬೇಕು. ಮಕ್ಕಳಿಗೆ ಪೌಷ್ಠಿಕಾಂಶಯುಕ್ತ ಆಹಾರ ನೀಡಬೇಕು. ದಾಸ್ತಾನು ದಾಖಲೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಬೇಕು. ಮೆನು ಪ್ರಕಾರವೇ ಆಹಾರ ನೀಡಬೇಕು. ತಾಲೂಕು ಕಚೇರಿ ಭೇಟಿ ವೇಳೆ ಆಧಾರ್ ಲಿಂಕ್ ಸಮಸ್ಯೆಯಿಂದ ಹಲವಾರು ಜನರಿಗೆ ಸೌಲಭ್ಯಗಳು ತಲುಪಲು ವಿಳಂಬವಾಗಿರುವುದು ಕಂಡುಬಂದಿದೆ ಎಂದರು. ಜಿಲ್ಲಾಧಿಕಾರಿ ಶ್ರೀರೂಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರಾದ ಲಿಂಗರಾಜು ಕೋಟೆ, ಸುಮಂತ್ ರಾವ್, ಕೆ.ಎಸ್. ವಿಜಯಲಕ್ಷ್ಮೀ, ಎ. ರೋಹಿಣಿಪ್ರಿಯ, ಮಾರುತಿ ದೊಡ್ಡಣ್ಣನವರ್, ಆಹಾರ ಇಲಾಖೆಯ ಉಪನಿರ್ದೇಶಕ ವಸುಂಧರಾ ಹೆಗಡೆ, ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

## ವಿದ್ಯುತ್ ಸುರಕ್ಷತಾ ಅರಿವು ಸಪ್ತಾಹ

ಚಾಮರಾಜನಗರ: ಚಾಮರಾಜನಗರ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಸಂತೇ ಮರಳ್ಳಿ, ಗುಂಡ್ಲುಪೇಟೆ ಮತ್ತು ಬೇಗೂರು ಉಪವಿಭಾಗ ವ್ಯಾಪ್ತಿಯ ಎಲ್ಲಾ ಶಾಖೆಗಳಲ್ಲಿ ಅರಿವು ಸಪ್ತಾಹ ಕಾರ್ಯಕ್ರಮವನ್ನು ಫೆಬ್ರವರಿ 6 ರಿಂದ 9ರವರೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯ ಮತ್ತು ಪಾಲನಾ ಕ್ಷೇತ್ರ ಮಟ್ಟದಲ್ಲಿ ಗ್ರಾಹಕರಿಗೆ, ಸಾರ್ವಜನಿಕರಿಗೆ ಹಾಗೂ ಸಿಬ್ಬಂದಿಗಳಿಗೆ ವಿದ್ಯುತ್ ಸೇವೆಗಳ ಹಾಗೂ ವಿದ್ಯುತ್ ಸುರಕ್ಷತಾ ಅರಿವು ಸಪ್ತಾಹ ಕಾರ್ಯಕ್ರಮವನ್ನು ನಿಗಮದ ಎಲ್ಲಾ ಕ್ಷೇತ್ರ, ಶಾಖೆಗಳಲ್ಲಿ ಆಯೋಜಿಸಲಾಗಿದೆ. ಚಾಮರಾಜನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ಚಾಮರಾಜನಗರ ಶಾಖೆಯಲ್ಲಿ ಫೆಬ್ರವರಿ 7ರಂದು ಮಧ್ಯಾಹ್ನ 2 ಗಂಟೆಗೆ, ರಾಮಸಮುದ್ರ ಶಾಖೆಯಲ್ಲಿ ಹಾಗೂ ಸಂಜೆ 4 ಗಂಟೆಗೆ, ಫೆಬ್ರವರಿ 9ರಂದು ಬದನಗುಪ್ಪೆ ಶಾಖೆಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಹಾಗೂ ಮಾದಪುರದಲ್ಲಿ ಮದ್ಯಾಹ್ನ 2 ಗಂಟೆಗೆ, ಹರದನಹಳ್ಳಿ ಉಪವಿಭಾಗ ವ್ಯಾಪ್ತಿಗೆ ಒಳಪಡುವ ಹರವೆ ಶಾಖೆಯಲ್ಲಿ ಫೆಬ್ರವರಿ 6 ರಂದು ಮಧ್ಯಾಹ್ನ 2 ಗಂಟೆಗೆ, ಉಡಿಗಾಲ ಶಾಖೆಯಲ್ಲಿ ಸಂಜೆ 4 ಗಂಟೆಗೆ, ಫೆಬ್ರವರಿ 7ರಂದು ಬೆಳಿಗ್ಗೆ 10.30 ಗಂಟೆಗೆ ಅರಕಲವಾಡಿ ಶಾಖೆಯಲ್ಲಿ, ಸಂಜೆ 4 ಗಂಟೆಗೆ ಹರದನಹಳ್ಳಿ, ಶಾಖೆಯಲ್ಲಿ ಅರಿವು ಸಪ್ತಾಹ ಕಾರ್ಯಕ್ರಮ ನಡೆಯಲಿದೆ.

ಸಂತೇಮರಳ್ಳಿ ಉಪವಿಭಾಗ ವ್ಯಾಪ್ತಿಯ ಹೊಂಗನೂರು ಶಾಖೆಯಲ್ಲಿ ಫೆಬ್ರವರಿ 6ರಂದು ಬೆಳಿಗ್ಗೆ 10.30 ಗಂಟೆಗೆ, ಕಾಗಲವಾಡಿ ಶಾಖೆಯಲ್ಲಿ ಮಧ್ಯಾಹ್ನ 12 ಗಂಟೆಗೆ, ಕುದೇರು ಶಾಖೆಯಲ್ಲಿ ಫೆಬ್ರವರಿ 7ರಂದು ಬೆಳಿಗ್ಗೆ 10.30 ಗಂಟೆಗೆ, ಗಣಗನೂರು ಶಾಖೆಯಲ್ಲಿ ಮಧ್ಯಾಹ್ನ 12 ಗಂಟೆಗೆ, ಗುಂಡ್ಲುಪೇಟೆ ಉಪವಿಭಾಗ ವ್ಯಾಪ್ತಿಯ ಮಾಡ್ರಹಳ್ಳಿ ಶಾಖೆಯಲ್ಲಿ ಫೆಬ್ರವರಿ 6ರಂದು ಮಧ್ಯಾಹ್ನ 12 ಗಂಟೆಗೆ, ಗುಂಡ್ಲುಪೇಟೆ ಶಾಖೆಯಲ್ಲಿ ಮಧ್ಯಾಹ್ನ 2 ಗಂಟೆಗೆ, ಬೊಮ್ಮಲಾಪುರ ಶಾಖೆಯಲ್ಲಿ ಫೆಬ್ರವರಿ 7ರಂದು ಬೆಳಿಗ್ಗೆ 10.30 ಗಂಟೆಗೆ, ತೆರಕಣಾಂಬಿ ಶಾಖೆಯಲ್ಲಿ ಮಧ್ಯಾಹ್ನ 2 ಗಂಟೆಗೆ, ಹಂಗಳ ಶಾಖೆಯಲ್ಲಿ ಸಂಜೆ 4 ಗಂಟೆಗೆ ಹಾಗೂ ಬೇಗೂರು ಉಪವಿಭಾಗದಲ್ಲಿ ಬೇಗೂರು ಶಾಖೆಯಲ್ಲಿ ಫೆಬ್ರವರಿ 6ರಂದು ಬೆಳಿಗ್ಗೆ 10.30 ಗಂಟೆಗೆ, ಕಬ್ಬಳ್ಳಿ ಶಾಖೆಯಲ್ಲಿ ಮಧ್ಯಾಹ್ನ 2 ಗಂಟೆಗೆ ಅರಿವು ಸಪ್ತಾಹ ಕಾರ್ಯಕ್ರಮ ನಡೆಯಲಿದೆ.

# ವಿದ್ಯಾರ್ಥಿಗಳಲ್ಲಿ ಸಮಯ ಪ್ರಜ್ಞೆ ಬಹಳ ಮುಖ್ಯ: ಪುಟ್ಟರಂಗಶೆಟ್ಟಿ



ಚಾಮರಾಜನಗರ: ವಿದ್ಯಾರ್ಥಿ ದೆಸೆಯಲ್ಲಿ ಸಮಯ ಪ್ರಜ್ಞೆ ಮಹತ್ವವಾದದ್ದು ಎಂದು ಶಾಸಕ ಹಾಗೂ ಎಂಎಸ್‌ಐಎಲ್‌ನ ಅಧ್ಯಕ್ಷ ಸಿ.ಪುಟ್ಟರಂಗಶೆಟ್ಟಿ ಹೇಳಿದರು.

ತಾಲ್ಲೂಕಿನ ವೆಂಕಟಯ್ಯನಛತ್ರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಆವರಣದಲ್ಲಿ ರಾಷ್ಟ್ರೀಯ ಹಸಿರು ಪಡೆ, ಗ್ರೀನ್ ಬರ್ಡ್, ಇಕೋಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ವಿಜ್ಞಾನ ಪ್ರಯೋಗ ಶಾಲೆ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು. ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಯಾಗಬೇಕು, ಪ್ರಾಥಮಿಕ ಹಾಗೂ ಪ್ರೌಢಶಾಲಾ ಹಂತದಲ್ಲಿ ಸಮಯಪ್ರಜ್ಞೆ ಅತಿ ಮುಖ್ಯ, ಈ ಸಮಯದಲ್ಲಿ ಸ್ವಲ್ಪ ಮೈಮರೆತರೂ ಮುಂದಿನ ಭವಿಷ್ಯ ಕಷ್ಟ ಆದ್ದರಿಂದ ಈ ಹಂತದಲ್ಲಿ ನೀವು ಜಾಗೃತಿಯಿಂದ ಇರಬೇಕು ಎಂದು ಸಲಹೆ ನೀಡಿದರು. ಇದು ಸ್ಪರ್ಧಾತ್ಮಕ ಯುಗ ಚೆನ್ನಾಗಿ ಓದುವುದರ ಜೊತೆ ಕೌಶಲ್ಯ ತರಬೇತಿಗಳು ಮುಖ್ಯ, ಯಾವುದೇ ನೌಕರಿ ಪಡೆಯಬೇಕಾದರೆ ಕೌಶಲ್ಯ ತರಬೇತಿಯು ಮುಖ್ಯ ಇದನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಅರಿಯಬೇಕು ಎಂದರು.

ಈಗ ಜಿಲ್ಲೆಯಲ್ಲಿ ವೈದ್ಯಕೀಯ, ಇಂಜಿನಿಯರಿಂಗ್, ಕೃಷಿ ಸೇರಿದಂತೆ ಎಲ್ಲ ತರಹದ ವಿದ್ಯಾಭ್ಯಾಸ ಮಾಡಲು ಅನುಕೂಲತೆ? ಇದೆ, ಆದರೆ ಚೆನ್ನಾಗಿ ಓದುವುದರ ಮೂಲಕ ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಶಿಕ್ಷಣಕ್ಕೆ ಹೆಚ್ಚು ತೊಡಗಿಸಿಕೊಳ್ಳುವುದರ ಜೊತೆ ಪಠ್ಯೇತರ ಚಟುವಟಿಕೆಗಳನ್ನೂ ತೊಡಗಿಸಿಕೊಂಡು ಜ್ಞಾನಾರ್ಜನೆಗೂ ಹೆಚ್ಚಿನ ಒತ್ತು ಕೊಡಬೇಕು, ತಂದೆ, ತಾಯಿ ಪೋಷಕರು ಸಹ ಮಕ್ಕಳ ವಿದ್ಯಾಭ್ಯಾಕ್ಕೆ ಹೆಚ್ಚಿನ ಪ್ರೋತ್ಸಾಹ ಕೊಡಬೇಕು ಎಂದರು. ವಿದ್ಯಾರ್ಥಿದೆಸೆಯಲ್ಲಿ ಆದಷ್ಟು ಮೊಬೈಲ್ ಬಳಕೆ ಕಡಿಮೆ ಮಾಡಬೇಕು, ಅಗತ್ಯವಿರುವಷ್ಟು ಮಾತ್ರ ಉಪಯೋಗಿಸಬೇಕು, ಅದು ಅತಿಯಾಗಬಾರದು, ಇದಕ್ಕೆ ಸ್ಪಷ್ಟ ಉದಾಹರಣೆ ನಿನ್ನೆ ಮೂವರು ಸಹೋದರಿಯರು ಆತ್ಮಹತ್ಯೆ ಮಾಡಿಕೊಂಡಿರುವುದೇ ಸಾಕ್ಷಿ ಎಂದರು.

ಇದೇ ಸಂಧರ್ಭದಲ್ಲಿ ಶಾಸಕರು ವಿದ್ಯಾರ್ಥಿಗಳೇ ನಡೆಸಿಕೊಟ್ಟ ವಿಜ್ಞಾನ ಪ್ರಯೋಗಶಾಲೆಯಲ್ಲಿ ರಕ್ತದೊತ್ತಡ ಪರೀಕ್ಷಿಸಿಕೊಂಡರು. ಈ ವಿಜ್ಞಾನ ಪ್ರಯೋಗಾಲಯದಲ್ಲಿ ಪವಾಡ ರಹಸ್ಯ ಬಯಲು, ರಂಗೋಲಿ ಮೂಲಕ ವಿಜ್ಞಾನಕ್ಕೆ ಸಂಬಂಧಪಟ್ಟ ಚಿತ್ರಗಳನ್ನು ಬಿಡಿಸುವುದು, ಮೆಂದಿ ಮೂಲಕ ವಿಜ್ಞಾನಕ್ಕೆ ಸಂಬಂಧಪಟ್ಟ ಚಿತ್ರಗಳನ್ನು ಬಿಡಿಸಲಾಗಿತ್ತು, ಶಾಸಕರು ಪ್ರಯೋಗಾಲಯ ಉದ್ಘಾಟಿಸಿ, ವೀಕ್ಷಿಸಿ ಮಕ್ಕಳಿಂದ ಇದರ ಬಗ್ಗೆ ಮಾಹಿತಿ ಪಡೆದುಕೊಂಡರು

ಈ ಪ್ರಯೋಗಶಾಲೆಯಿಂದ ಮುಂಬರುವ ಪರೀಕ್ಷೆಗೂ ಅನುಕೂಲವಾಗಲಿದೆ ಎಂದು ಪ್ರಾಯೋಜಕರು ತಿಳಿಸಿದರು. ಈ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾ.ಪಂ. ಅಧ್ಯಕ್ಷ ಲಾವಣ್ಯ ಮಹೇಶ್, ರೋಟರಿ ಸಿಲ್ಕ್‌ಸಿಟಿ ಅಧ್ಯಕ್ಷ ಶಮೀತ್ ಕುಮಾರ್ ಬಿಪಿ ಹನುಮಂತಶೆಟ್ಟಿ, ಎಪಿಎಂಸಿ ಅಧ್ಯಕ್ಷ ಸೋಮೇಶ್, ಗ್ರಾ.ಪಂ. ಮಾಜಿ ಅಧ್ಯಕ್ಷ ಕೃಷ್ಣಮೂರ್ತಿ, ಬಿಸಿಯೂಟ ಸಹಾಯಕ ನಿರ್ದೇಶಕ ಶ್ರೀನಿವಾಸ್, ಪ್ರಾಂಶುಪಾಲ ಮಹೇಶ್, ಉಪಪ್ರಾಂಶುಪಾಲರಾದ ನಾಗರತ್ನ, ಜ್ಞಾನ ಶಿಕ್ಷಕ ಕಿರಣ್‌ರಾಜ್, ಮಹದೇವಯ್ಯ, ಹೆಚ್. ಎಂ. ಕೃಷ್ಣಮೂರ್ತಿ, ಮುಖಂಡರಾದ ಜಯಸ್ವಾಮಿ, ವಿ. ಹೊಸೂರು ರಾಜು, ಶಿಕ್ಷಕ ವರ್ಗ, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗು ಸದಸ್ಯರು, ವಿದ್ಯಾರ್ಥಿಗಳು ಇದ್ದರು.

**ಎಸ್‌ಎಸ್‌ಎಲ್‌ಸಿ ಪರೀಕ್ಷೆ ಹಿನ್ನೆಲೆ**

# ದಿನಕ್ಕೊಂದು ಅಂಕಕ್ಕೆ ಇಲಾಖೆ ಗುರಿ

## ಸಿಎಂ ತವರಿನಲ್ಲಿ ಶಿಕ್ಷಣ ಇಲಾಖೆ ಸಕಲ ತಯಾರಿ, ಮಿಷನ್ ಗರಿಗೆ ಹಗಲಿರುಳು ಯತ್ನ

**ವರ್ತಮಾನ ವಿಶೇಷ**

ಮೈಸೂರು: ದಿನಕ್ಕೊಂದು ಅಂಕದ ಗುರಿ ಹೌದು ಈ ಬಾರಿ ಮೈಸೂರು ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆ ವಿಷನರಿ ಇದಾಗಿದೆ. ರಾಜ್ಯದಲ್ಲಿ ಮೈಸೂರು ಎಸ್‌ಎಸ್‌ಎಲ್‌ಸಿಯಲ್ಲಿ ಎಷ್ಟನೇ ಸ್ಥಾನ ಬರುತ್ತದೆ ಎಂಬುದಕ್ಕಿಂತಲೂ ಮುಖ್ಯವಾಗಿ ಎಲ್ಲಾ ಮಕ್ಕಳನ್ನು ಪಾಸ್ ಮಾಡಿಸಲೇಬೇಕೆಂದು ಪಣ ತೊಟ್ಟಿರುವ ಇಲಾಖೆ ಹಗಲಿರುಳು ಶಿಕ್ಷಕರ ತಂಡ ಶ್ರಮವಹಿಸಲು ಮುಂದಾಗಿದ್ದಾರೆ.

ಮೈಸೂರು ಜಿಲ್ಲೆಯಲ್ಲಿ ಒಟ್ಟಾರೆ 694 ಶಾಲೆಗಳಿದ್ದು, ಈಗಾಗಲೇ ನಡೆಸಿದ ಪೂರ್ವಸಿದ್ಧತಾ ಪರೀಕ್ಷೆಯಲ್ಲಿ 250 ಶಾಲೆಗಳು ಶೇ.50ಕ್ಕಿಂತ ಕಡಿಮೆ ಸಾಧನೆ ಮಾಡಿವೆ. ಹೀಗಾಗಿ ಪರೀಕ್ಷೆ ಸಮೀಪ ಇರುವ ಈ ಹೊತ್ತಿನಲ್ಲಿ ದಿನಕ್ಕೊಂದು ಅಂಕ ಬರಲು ಕ್ರಮ ವಹಿಸಿದ್ದಾರೆ. ಅದರಲ್ಲೂ ಶೇ.50ಕ್ಕಿಂತ ಕಡಿಮೆ ಸಾಧನೆ ಮಾಡಿರುವ ಶಾಲೆಗಳನ್ನು ಗುರಿಯಾಗಿಸಿಕೊಂಡು ಪ್ರತಿ ದಿನ ಮೂರು ತಾಲ್ಲೂಕಿನಲ್ಲೂ ಪ್ರತಿ ವಿಷಯಕ್ಕೆ ಸಂಬಂಧಿಸಿದಂತೆ ಬಿಇಒ, ನೋಡೆಲ್ ಅಧಿಕಾರಿ ಹಾಗೂ ತಾಲ್ಲೂಕಿನ ವಿಷಯವಾರು ಶಿಕ್ಷಕರ ಸಭೆ ಆನ್‌ಲೈನ್ ಮೂಲಕ ಮಾಡಲಾಗುತ್ತಿದೆ. ಸಭೆಯಲ್ಲಿ ಹಿನ್ನಡೆಇರುವುದಕ್ಕೆ ಕಾರಣವನ್ನು ತಿಳಿದು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಲು ಸೂಚಿಸುವ ಯೋಜನೆ ರೂಪಿಸಿದ್ದಾರೆ.

| | |
|---|---|
| ಒಟ್ಟು ಸಂಖ್ಯೆ | 36090 |
| ಬಾಲಕರು | 18290 |
| ಬಾಲಕಿಯರು | 17800 |
| ಒಟ್ಟು ಶಾಲೆ | 694 |

> **ಕಳೆದ ಬಾರಿ 15ಕ್ಕೂ ಹೆಚ್ಚು ಶಾಲೆ ಕಡಿಮೆ ಫಲಿತಾಂಶ ಬಂದ ಶಾಲೆಗಳನ್ನು ಗುರುತಿಸಿ ಈ ಬಾರಿಯೂ ಅವುಗಳ ಫಲಿತಾಂಶ ಬಾರದಿದ್ದರೆ ಇಲಾಖೆ ಕ್ರಮ ಜರುಗಿಸಲಾಗುವುದು. ನ ಓದಲು ಬರುವವರು ಅಂಕಗಳಿಸಬೇಕು. ಕಳೆದ ಬಾರಿಯ ಶೇ.67.05ಕ್ಕಿಂತಲೂ ಹೆಚ್ಚಿನ ಶೇಖಡವಾರು ಫಲಿತಾಂಶ ತರುವ ನಿಟ್ಟಿನಲ್ಲಿ ಹಗಲಿರುಳು ಪ್ರಯತ್ನ ನಡೆಸಲಾಗುತ್ತಿದೆ.**
>
> **–ಉದಯಕುಮಾರ್** ಡಿಡಿಪಿಐ






ಇನ್ನೂ ಇದರಲ್ಲಿ ಸಿ ಗ್ರೇಡ್(35 ಅಂಕ ಪಡೆಯವವರು) ಅಂಕಗಳಿಸುವವರನ್ನು ಗುರುಸಿ ಉತ್ತೇಜಿಸಲಾಗುತ್ತಿದೆ. ಇನ್ನೂ ಪಾಸ್ ಆಗದಿರುವ ಮಕ್ಕಳಿಗಾಗಿ ಅಂತಹವರ ಮನೆ ಭೇಟಿ, ಗುಂಪು ಸಭೆ ಹಾಗೂ ತಾಯಂದಿರ ಸಭೆ ನಡೆಸಿ ಅವರನ್ನು ಪಾಸ್ ಆಗುವಂತಹ ವಾತಾವರಣ ಸೃಷ್ಠಿಸುವ ನಿಟ್ಟನಲ್ಲಿ ಹಗಲಿರುಳು ಶ್ರಮಿಸುತ್ತಿದ್ದಾರೆ. ಇನ್ನಾ

ಶಿಕ್ಷಕರ ವೇದಿಕೆಯೂ ಸಹ ಪರೀಕ್ಷೆ ಸುಲಭೀಕರಣ ವಿಷಯ ಹಂಚಿಕೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಯಾವೆಲ್ಲಾ ರೀತಿ ಓದಲು ಪ್ರೇರೆಪಿಸಬಹುದಾದ ತಂತ್ರಗಾರಿಕೆ ರೂಪಿಸುತ್ತಿದ್ದಾರೆ. ಜತೆಗೆ ಅಗತ್ಯವಿರುವ ಕಡೆಗಳಲ್ಲಿ ಭಾನುವಾರವೂ ತರಗತಿ ನಡೆಸುವ ಕಾರ್ಯ ಹಮ್ಮಿಕೊಂಡಿದ್ದಾರೆ.

### ಮಕ್ಕಳ ಮೂಲ ಟ್ರ್ಯಾಪ್

**ಮೈಸೂರು ನಗರದ ಆಶ್ರಯಮನೆ, ಪೌರಕಾರ್ಮಿಕರ ಕಾಲೋನಿಗಳಾದ ಏಕಲವ್ಯನಗರ, ಅಂಬೇಡ್ಕರ್ ನಗರ, ಭಾರತ್ ನಗರ ಸೇರಿ ನಗರದ ಸುತ್ತಲಿನ ಬಹುತೇಕ ವಿದ್ಯಾರ್ಥಿಗಳು ಶಾಲಾ ಪಠ್ಯದಿಂದಲೇ ಹೊರಗುಳಿದಿದ್ದಾರೆ. ಅದರಲ್ಲೂ ಪೌರ ಕಾರ್ಮಿಕರ ಮಕ್ಕಳನ್ನು ಪತ್ತೆ ಹಚ್ಚಲು ಶಿಕ್ಷಕರು ಇನ್ನಿಲ್ಲದ ಸರ್ಕಸ್ ನಡೆಸಿದ್ದಾರೆ. ಬೆಳಿಗ್ಗೆ 6ಕ್ಕೆ ಪೋಷಕರು ಕೆಲಸಕ್ಕೆ ಹೋಗುವುದರಿಂದ ಹಾಗೂ ರಾತ್ರಿ ಸದರಿ ಬಡಾವಣೆಗಳಿಗೆ ಹೋಗಲು ಶಿಕ್ಷಕರೇ ಭಯ ಪಡುತ್ತಿರುವುದರಿಂದ ಮೊಬೈಲ್‌ಗೂ ಪೋಷಕರು ಸಿಗದ ಸ್ಥಿತಿ ಇದೆ. ಅಂತಹವರನ್ನು ಭಾನುವಾರದಂದು ಟ್ರ್ಯಾಪ್ ಮಾಡುತ್ತಿರುವ ಶಿಕ್ಷಕರು ಮಕ್ಕಳ ಕಲ್ಯಾಣ ಸಮಿತಿ ಸಹಾಯದಿಂದ ಅವರನ್ನು ಹಿಡಿದು ತಂದು ಕೌನ್ಸಿಲಿಂಗ್ ಮಾಡುವ ಮೂಲಕ ಅವರನ್ನು ಪಾಸ್ ಮಾಡಿಸಲು ಇನ್ನಿಲ್ಲದ ಕಸರತ್ತು ಕೈಗೊಂಡಿದ್ದಾರೆ. ಇಂತಹ 20ಕ್ಕೂ ಹೆಚ್ಚು ಮಕ್ಕಳನ್ನು ಟ್ರ್ಯಾಪ್ ಮಾಡಲಾಗಿದೆ.**

### ಮಾ.18ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

**ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಅನ್ನು ಮಾರ್ಚ್ 18 ರಿಂದ ಏಪ್ರಿಲ್ 2, 2026 ರವರೆಗೆ ನಡೆಸಲು ನಿರ್ಧರಿಸಿದೆ. ಪರೀಕ್ಷೆಗಳು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ನಡೆಯಲಿದ್ದು, ಅಂತಿಮ ವೇಳಾಪಟ್ಟಿಯನ್ನು ಅಧಿಕೃತ ಕೆಎಸ್‌ಇಎಬಿ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗಿದೆ. 2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೈಸೂರು ಜಿಲ್ಲೆ ಶೇ. 68.39 ತೇರ್ಗಡೆ ಪ್ರಮಾಣದೊಂದಿಗೆ ರಾಜ್ಯದಲ್ಲಿ 15ನೇ ಸ್ಥಾನ ಪಡೆದಿದೆ. 2023ರಲ್ಲಿ 19ನೇ ಸ್ಥಾನದಲ್ಲಿದ್ದ ಫಲಿತಾಂಶ 2024ರಲ್ಲಿ 7ನೇ ಸ್ಥಾನಕ್ಕೆ ಏರಿತ್ತು. ಕಳೆದ ಬಾರಿ 35,264 ವಿದ್ಯಾರ್ಥಿಗಳಲ್ಲಿ 24,116 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಹಿನ್ನಡೆ ಅನುಭವಿಸಿತ್ತು.**

ಮಾತ್ರವಲ್ಲದೆ, ವಿದ್ಯಾರ್ಥಿಗಳಿಗೆ ಅನೂಕೂಲ ಆಗಲಿ ಎಂಬ ನಿಟ್ಟಿನಲ್ಲಿ ವಿಶೇಷವಾಗಿ ಒಪನ್ ಬುಕ್ ಪರೀಕ್ಷೆ ನೀಡಲಾಗುತ್ತಿದೆ.

ಕಾಂಡಂಚಿನ ಭಾಗದಲ್ಲಿ ಪ್ರಮುಖವಾಗಿ ಹೆಣ್ಣು ಮಕ್ಕಳು ನಾನಾ ಕಾರಣದಿಂದ ಅನೇಕ ದಿನಗಳವರೆಗೂ ಶಾಲೆಯಿಂದ ಹೊರಗುಳಿದಿರುತ್ತಾರೆ. ಅಂತಹವರ ಮನವೊಲಿಸಿ ವಿದ್ಯಾರ್ಥಿನಿಲಯಗಳ ವಾರ್ಡನ್‌ಗಳ ಸಭೆ ನಡೆಸಿ ಅಲ್ಲಿ ಅವರಿಗೂ ಕಲಿಸುವ ಕೆಲಸ ನಿರಂತರವಾಗಿ ನಡೆಯುತ್ತಿದೆ. ಆದರೆ, ಮುಖ್ಯಮಂತ್ರಿ ಆದಿಯಾಗಿ ಅನೇಕರಿಗೆ ಮೈಸೂರು ಜಿಲ್ಲೆ ಎಸ್ ಎಸ್ ಎಲ್‌ಸಿಯಲ್ಲಿ ಸಾಧಿಸಿದ ಟಾಪ್ 10ರಲ್ಲಿ ಇರಬೇಕೆಂಬ ಬಯಕೆ ಈಡೇರುವುದೇ ಎಂಬುದನ್ನು ಫಲಿತಾಂಶದ ಬಳಿಕವಷ್ಟೇ ಕಾದು ನೋಡಬೇಕಿದೆ.



ಎಚ್.ಡಿ.ಕೋಟೆ: ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಕ್ಷೇತ್ರ ಧರ್ಮಸ್ಥಳ ಪಾದಯಾತ್ರೆ ಸಮಿತಿಯ ಭಜರಂಗಿ ವಿನಯ್, ಮಿಲ್ ನಾಗರಾಜು, ವೆಂಕಟೇಶ್, ವೀರೇಶ್, ದೇವಮ್ಮ, ನಿಂಗೇಗೌಡ ನಿಂಗರಾಜು ಅವರು ಪಟ್ಟಣದ ವರದರಾಜಸ್ವಾಮಿ, ಚಾಮುಂಡೇಶ್ವರಿ, ಮಾರಮ್ಮ, ಗಣೇಶ ದೇವಾಲಯಕ್ಕೆ ಪೂಜೆ ಸಲ್ಲಿಸಿ ಕಾಲ್ನಡಿಗೆ ಮೂಲಕ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ತೆರಳಿದರು.

## ವಾತ್ಸಲ್ಯ ಕಿಟ್ ವಿತರಣೆ



ಗುಂಡ್ಲುಪೇಟೆ.:–ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಂಸ್ಥೆಯಿಂದ ತಾಲೂಕಿನಾದ್ಯಂತ ವಾತ್ಸಲ್ಯ ಕಿಟ್ ವಿತರಣೆ ಮಾಡಲಾಯಿತು.

ಡಾ ವೀರೇಂದ್ರ ಹೆಗ್ಗಡೆ ಹಾಗೂ ಹೇಮಾವತಿ ಅಮ್ಮನವರ ಕನಸಿನತೆ ಗುಂಡ್ಲುಪೇಟೆ ತಾಲೂಕಿನಾದ್ಯಂತ ಇರುವ 58 ಫಲಾನುಭವಿಗಳಿಗೆ ಒಂದು ಸಾವಿರ ಜೊತೆಗೆ ವರ್ಷದಲ್ಲಿ ಒಮ್ಮೆ ವಾತ್ಸಲ್ಯ ಕಿಟ್ ಅನ್ನು ನೀಡುತ್ತಿದ್ದಾರೆ ಬನ್ನಿತಾಳಪುರ ಗ್ರಾಮದ ಫಲಾನುಭವಿ ಚಿಕ್ಕಮಾದಶೆಟ್ಟಿಗೆ ವಾತ್ಸಲ್ಯ ಕಿಟ್ ನೀಡಿದ್ದು ಇದರಲ್ಲಿ ದಿನಬಳಕೆ ಸಾಮಗ್ರಿಗಳು ಮತ್ತು ಅರೋಗ್ಯಕರ ಪೌಷ್ಟಿಕ ಆಹಾರ ವಿತರಣೆ ಮಾಡಲಾಯಿತು. ಉಳಿದ ಫಲಾನುಭಿಗಳಿಗೆ ಗ್ರಾಮದ ಮುಖಂಡರು ಹಾಗು ಗಣ್ಯರು ಮತ್ತು ಗ್ರಾಮಸ್ಥರಿಂದ ವಿತರಿಸಲಾಯಿತು ಕಾರ್ಯಕ್ರಮದಲ್ಲಿ ತಾಲೂಕಿನ ಯೋಜನಾಧಿಕಾರಿ ಎಂ ಎಸ್ ಚಂದ್ರಶೇಖರ್ ಯೋಜನಾಧಿಕಾರಿ. ಆರತಿ ವಲಯ ಮೇಲ್ವಿಚಾರಕ ಆದರ್ಶ್.ಮತ್ತು ಸೇವಾಪ್ರತಿನಿಧಿಗಳು ಕಾರ್ಯಕ್ರಮ ದಲ್ಲಿ ಬಾಗವಹಿಸಿದ್ದರು

## ಚಿನ್ನಾಭರಣಗಳ ಇರುವಿಕೆ ಕುರಿತು ಮಾಹಿತಿ ಒದಗಿಸುವಂತೆ ಆಗ್ರಹ

ಚಾಮರಾಜನಗರ:, ಮೈಸೂರು ಮಹಾರಾಜರು ಚಾಮರಾಜೇಶ್ವರಸ್ವಾಮಿ ದೇವಾಲಯಕ್ಕೆ ಬೆಲೆಬಾಳುವ ಚಿನ್ನಾಭರಣವನ್ನು ಉಡುಗೊರೆಯಾಗಿ ನೀಡಿದ್ದು. ಅವುಗಳನ್ನು ಎಲ್ಲಿ ಇಡಲಾಗಿದೆ ಎಂಬ ಮಾಹಿತಿಯನ್ನು ಮುಜರಾಯಿ ಇಲಾಖೆಯವರು ಜನತೆಗೆ ತಿಳಿಸಬೇಕು ಎಂದು ಚಾಮರಾಜೇಶ್ವರ



ಸ್ವಾಮಿ ದೇವಾಲಯದ ಮಾಜಿ ಧರ್ಮದರ್ಶಿ , ಯುವ ರೆಡ್ ಕ್ರಾಸ್ ಸೊಸೈಟಿ ಅಧ್ಯಕ್ಷ ಎಲ್.ಸುರೇಶ್ ಆಗ್ರಹಿಸಿದರು.

ನಾನು 6 ವರ್ಷಗಳ ಕಾಲ ಚಾಮರಾಜೇಶ್ವರಸ್ವಾಮಿ ದೇವಾಲಯದ ಧರ್ಮದರ್ಶಿ ಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ. ಪ್ರತಿವರ್ಷ ಮುಜರಾಯಿ ಇಲಾಖೆ ವತಿಯಿಂದ ಜರುಗುವ ಗಿರಿಜಕಲ್ಯಾಣ ಮಹೋತ್ಸವದಂದು ಚಾಮರಾಜೇಶ್ವರಸ್ವಾಮಿ ವಿಗ್ರಹಕ್ಕೆ ಚಿನ್ನಾಭರಣ ತೊಡಿಸಿ, ಪೂಜೆ ನೆರವೇರಿಸಿ, ಕಾರ್ಯಕ್ರಮ ಮುಗಿದ ನಂತರ ತಾಲ್ಲೂಕು ಆಡಳಿತದ ಖಜಾನೆಗೆ ಇಡಲಾಗುತ್ತಿತ್ತು. ಆದರೆ ಕಳೆದ 40 ವರ್ಷಗಳಿಂದ ಗಿರಿಜಕಲ್ಯಾಣ ಮಹೋತ್ಸವದಂದು ಚಾಮರಾಜೇಶ್ವರಸ್ವಾಮಿಗೆ ಆಭರಣ ತೊಡಿಸುವ ಪ್ರಕ್ರಿಯೆ ನಡೆಯುತ್ತಿಲ್ಲ. ಸುಮಾರು 50 ಕೋಟಿ ರೂ.ಗಳಿಗಿಂತ ಹೆಚ್ಚು ಬೆಲೆಬಾಳುವ ಚಿನ್ನ, ವಜ್ರ, ವೈಡೂರ್ಯಗಳು ಏನಾದವು ಎಂಬುದೇ ಜನತೆಗೆ ತಿಳಿಯದಾಗಿದೆ. ಮುಜರಾಯಿ ಇಲಾಖೆ ಅಧಿಕಾರಿಗಳು ಕೂಡಲೇ ಚಾಮರಾಜೇಶ್ವರಸ್ವಾಮಿಗೆ ಧರಿಸುತ್ತಿದ್ದ ಚಿನ್ನ ವಜ್ರ, ವೈಡೂರ್ಯಗಳನ್ನು ಎಲ್ಲಿ ಇಡಲಾಗಿದೆ ಎಂಬ ವಿಚಾರವನ್ನು ಜನತೆಯ ಮುಂದಿಡಬೇಕು ಎಂದು ಆಗ್ರಹಿಸಿದರು.

## ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ

ಕಾರ್ಯದರ್ಶಿಗಳ ಕಾರ್ಯಾಲಯ, ಚಾಮುಂಡಿಬೆಟ್ಟ, ಮೈಸೂರು–570010.
Phone: 0821-2590027, e-mail: beerecochamunditemple@gmail.com

ಸಂ.: ಶ್ರೀಚಾಕ್ಷೇಅಪ್ರಾ(05)ಸಿಆರ್:/2025–26 ದಿನಾಂಕ: 04.02.2026

**ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ (ದ್ವಿ ಲಕೋಟೆ)**

**ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ**

ಮೈಸೂರು ಚಾಮುಂಡಿಬೆಟ್ಟ ಶ್ರೀ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಕಛೇರಿಯಿಂದ ಸೂಚಿತ ಅವಧಿಗೆ ಈ ಕೆಳಕಂಡ ವಿವಿಧ ಬಾಬ್ತುಗಳಿಗೆ ಟೆಂಡರ್ ಕರೆಯಲಾಗಿದೆ. ಆಸಕ್ತರು ಟೆಂಡರ್ ನಮೂನೆಗಳನ್ನು ಇ–ಪ್ರೊಕ್ಯೂರ್‌ಮೆಂಟ್ (https://kppp.karnataka.gov.in) ಮೂಲಕ ಸಲ್ಲಿಸಬಹುದಾಗಿದೆ. ಟೆಂಡರ್ ದಾಖಲೆಯಲ್ಲಿ ತಿಳಿಸಿರುವಂತೆ (Technical qualification criteria)ದ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಈ ಕೆಳಕಂಡಂತೆ ನಿಗದಿಪಡಿಸಿದ ಇ.ಎಂ.ಡಿ.ಯನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನಮೂದಿಸಿದ ಯಾವುದಾದರು ಒಂದು ರೀತಿಯಲ್ಲಿ ಸಲ್ಲಿಸತಕ್ಕದ್ದು. ಇ.ಎಂ.ಡಿ.ಯು ಟೆಂಡರ್‌ನ ನ್ಯಾಯ ಸಮ್ಮತಾ ಮಾನ್ಯತಾ ಅವಧಿಗಿಂತ (Validity period) 45 ದಿನಗಳ ನಂತರದ ವರೆಗೆ ಮಾನ್ಯತೆ ಇರತಕ್ಕದ್ದು. ಹೆಚ್ಚಿನ ಮಾಹಿತಿಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

| ಕ್ರ ಸಂ | ಟೆಂಡರ್ ವಿವರ | ಅಂದಾಜು ಮೊತ್ತ (ರೂ.ಗಳಲ್ಲಿ) | ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ಶ್ರೀ ಚಾಮುಂಡೇಶ್ವರಿ ಹಾಗೂ ಸಮೂಹ ದೇವಸ್ಥಾನಗಳಿಗೆ ಲಾಡು ಪ್ರಸಾದ, ತಯಾರಿಸಿ ಪ್ಯಾಕ್ ಮಾಡಿಕೊಡಲು ಒಂದು ಲಾಡು ಪ್ರಸಾದ ತಯಾರಿಕೆಗೆ ಮಜೂರಿಯ ಗುತ್ತಿಗೆ (ಒಂದು ವರ್ಷದ ಅವಧಿಗೆ) | 40,00,000/- | 80,000/- |
| 2 | ಲಾಡು ಪ್ರಸಾದ ಪ್ಯಾಕ್ ಮಾಡಲು ಆಯಿಲ್ ಪ್ರೂಫ್ ಪೇಪರ್‌ಕವರ್ ಗಳನ್ನು ಸರಬರಾಜು ಮಾಡುವ ಗುತ್ತಿಗೆ (ಒಂದು ವರ್ಷದ ಅವಧಿಗೆ) | 30,00,000/- | 60,000/- |

**ಇ–ಪ್ರೊಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ಷೆಡ್ಯೂಲ್ ದಿನಾಂಕಗಳು ಈ ಕೆಳಕಂಡಂತಿದೆ.**

| ಕ್ರ ಸಂ | ವಿವರ | ದಿನಾಂಕ | ಸಮಯ |
|---|---|---|---|
| 1 | ಇ–ಪೋರ್ಟಲ್‌ನಲ್ಲಿ ಟೆಂಡರ್ ದಾಖಲೆಗಳು ಚಾಲ್ತಿಗೆ ಬರುವುದು | 04.02.2026 | ಸಂಜೆ 5:00 ಗಂಟೆಯ ನಂತರ |
| 2 | ಟೆಂಡರ್ ಡೌನ್‌ಲೋಡ್ ಮಾಡಲು ಮತ್ತು ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 19.02.2026 | ಸಂಜೆ 5.30 ಗಂಟೆವರೆಗೆ |
| 3 | ತಾಂತ್ರಿಕ ಟೆಂಡರ್‌ಗಳನ್ನು ತೆರೆಯುವ ದಿನಾಂಕ: | 20.02.2026 | ಬೆಳಿಗ್ಗೆ 11.00 ಗಂಟೆ ನಂತರ |
| 4 | ಹಣಕಾಸಿನ ಟೆಂಡರ್‌ನ್ನು ತೆರೆಯುವ ದಿನಾಂಕ : | 24.02.2026 | ಬೆಳಿಗ್ಗೆ 11.00 ಗಂಟೆ ನಂತರ |

ಸಹಿ/– **ಕಾರ್ಯದರ್ಶಿ**
ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಚಾಮುಂಡಿಬೆಟ್ಟ

DIPR/MYS/1611/SA/2025-26

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

**ಕರವೇ ಸ್ವಾಭಿಮಾನ ಬಣ ಪ್ರತಿಭಟನೆ**

# ರೈಲ್ವೆ ನೇಮಕಾತಿ ಪರೀಕ್ಷೆ: ಕನ್ನಡಕ್ಕೆ ಅವಕಾಶ ಕೊಡಿ



ರಾಮನಗರ: ರೈಲ್ವೆ ನೇಮಕಾತಿ ಪ್ರವೇಶ ಪರೀಕ್ಷೆಗಳನ್ನು ಕನ್ನಡ ಭಾಷೆಯಲ್ಲಿಯೇ ಬರೆಯಲು ಅವಕಾಶ ಕಲ್ಪಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ನಗರದ ಐಜೂರು ವೃತ್ತದಲ್ಲಿ ಸಂಘಟನೆಯ ರಾಜ್ಯ ಉಸ್ತುವಾರಿ ಅಧ್ಯಕ್ಷ ಶಿವುಗೌಡ ನೇತೃತ್ವದಲ್ಲಿ ಕಾರ್ಯಕರ್ತರು ಕನ್ನಡ ವಿರೋಧಿ ಧೋರಣೆ ಅನುಸರಿಸುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿರವರು ರಾಜ್ಯದ ಪ್ರಾಂತೀಯ ಭಾಷೆಗಳನ್ನು ಕಡೆಗಣಿಸುತ್ತಿದ್ದಾರೆ. ಹಿಂದಿ ಹೇರಿಕೆಗೆ ಪ್ರಯತ್ನಿಸುತ್ತಿದ್ದಾರೆ. ಕನ್ನಡ ಭಾಷೆಯಲ್ಲಿಯೂ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಸಂಘಟನೆಯ ರಾಜ್ಯ ಉಸ್ತುವಾರಿ ಅಧ್ಯಕ್ಷ ಶಿವುಗೌಡ ಮಾತನಾಡಿ, ಕೇಂದ್ರದಲ್ಲಿ ಅಧಿಕಾರ ನಡೆಸಿದ ಎಲ್ಲ ಸರ್ಕಾರಗಳು ಕನ್ನಡ ಭಾಷೆಗೆ, ಕನ್ನಡಿಗರಿಗೆ ಅಪಮಾನ ಮಾಡಿವೆ. ನಮ್ಮ ಮಾತೃ ಭಾಷೆಯಲ್ಲಿ ಪರೀಕ್ಷೆ ಬರೆಯುವ ಹಕ್ಕನ್ನು ಕಸಿಯುವ ಕೆಲಸ ನಿರಂತರವಾಗಿ ಮಾಡುತ್ತಿದೆ ಎಂದರು.

ಕರ್ನಾಟಕದಿಂದ ಆಯ್ಕೆಯಾದ ಸಂಸದರು, ಕೇಂದ್ರ ಸಚಿವರು ಕಣ್ಣು ಬಾಯಿಮುಚ್ಚಿ ಕುಳಿತಿದ್ದಾರೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ಸೋಮಣ್ಣ ಹಾಗೂ ಸಂಸದ ಡಾ.ಸಿ.ಎನ್. ಮಂಜುನಾಥ್ ಸೇರಿದಂತೆ ರಾಜ್ಯದಿಂದ ಆಯ್ಕೆಯಾಗಿರುವ ಸಂಸದರು ಈ ಬಗ್ಗೆ ಎಚ್ಚೆತ್ತುಕೊಂಡು ರಾಜ್ಯದ ಗ್ರಾಮೀಣ ಭಾಗದ ಪ್ರತಿಭಾನ್ವಿತರು ಸಹ ಕನ್ನಡದಲ್ಲಿ ಪರೀಕ್ಷೆಯನ್ನು ಎದುರಿಸಿ ಉದ್ಯೋಗ ಪಡೆಯುವ ಅವಕಾಶಕ್ಕೆ ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದರು.

ನಮ್ಮ ಮನವಿಯನ್ನು ನಿರ್ಲಕ್ಷಿಸಿದರೆ ರಾಜ್ಯದಿಂದ ಕೇಂದ್ರವನ್ನು ಪ್ರತಿನಿಧಿಸುವ ಸಚಿವರು, ಸಂಸದರಿಗೆ ಕಪ್ಪು ಬಾವುಟ ತೋರಿಸುವ ಜೊತೆಗೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಶಿವುಗೌಡ ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಜಿಲ್ಲಾಧ್ಯಕ್ಷ ಕಿರಣ್‌ಗೌಡ, ಜಿಲ್ಲಾ ಗೌರವಾಧ್ಯಕ್ಷ ರಾಜು ಚನ್ನಮಾನಹಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅದ್ದೂರಿ ಲಿಂಗೇಶ್, ತಾಲೂಕು ಗೌರವಾಧ್ಯಕ್ಷ ಸಿದ್ದರಾಜು, ಯುವ ಘಟಕದ ಜಿಲ್ಲಾಧ್ಯಕ್ಷ ಸ್ವಾಮಿ, ಜಿಲ್ಲಾ ಜಂಟಿ ಕಾರ್ಯದರ್ಶಿ ರಮೇಶ್, ಹೋಟೆಲ್ ಘಟಕದ ಜಿಲ್ಲಾಧ್ಯಕ್ಷ ಮನು, ಪದಾಧಿಕಾರಿಗಳಾದ ಕುಮಾರ ಬಿಡದಿ, ಆಟೋ ರಾಮು. ಲಕ್ಷ್ಮೀಶ್ ಸುನೀಲ್, ಬಾಬು, ಸ್ವಾಮಿ, ಪ್ರಶಾಂತ್, ಮಯೂರ, ಮಧು, ಕಾರ್ತಿಕ, ಅರುಣ, ಚಂದು, ರೋಹನ, ಶರತ, ನಿತೀನ್, ನಂದೀಶ್, ವಿನೋದ, ಚೇತು ಮತ್ತಿತರರು ಭಾಗವಹಿಸಿದ್ದರು.

# ಸಂಕ್ಷಿಪ್ತ ಸುದ್ದಿ

## ರೇಷ್ಮೆ ಕೃಷಿ ಪ್ರಶಸ್ತಿಗಾಗಿ ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನ

**ಮೈಸೂರು:** ಜಿಲ್ಲೆ ರೇಷ್ಮೆ ಇಲಾಖೆಯ ವತಿಯಿಂದ 2023–24 ಹಾಗೂ 2024–25ನೇ ಸಾಲಿನ ರೇಷ್ಮೆ ಕೃಷಿ ಪ್ರಶಸ್ತಿಗಾಗಿ ಉತ್ತಮ ಪ್ರಗತಿ ಸಾಧಿಸಿರುವ ರೇಷ್ಮೆ ಬೆಳೆಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಕನಿಷ್ಠ 1 ಎಕರೆ ಹಿಪ್ಪುನೇರಳೆ ತೋಟ ಹಾಗೂ ಪ್ರತ್ಯೇಕ ಹುಳು ಸಾಕಾಣಿಕಾ ಮನೆ ಹೊಂದಿರಬೇಕು. 100 ಮೊಟ್ಟೆಗೆ ಸರಾಸರಿ ರೇಷ್ಮೆ ಗೂಡಿನ ಇಳುವರಿ 65 ಕೆ.ಜಿ ಹಾಗೂ ಒಂದು ಎಕರೆಗೆ ರೇಷ್ಮೆ ಗೂಡಿನ ಉತ್ಪಾದನೆ 500 ಕೆ.ಜಿ ಗಿಂತ ಕಡಿಮೆ ಇರಬಾರದು. ರೇಷ್ಮೆ ಬೆಳೆಗಾರರು ರೇಷ್ಮೆ ಪಾಸ್ ಬುಕ್, ರೇಷ್ಮೆ ಮೊಟ್ಟೆ/ಚಾಕಿ ಖರೀದಿಸಿರುವ ಬಗ್ಗೆ ಹಾಗೂ ರೇಷ್ಮೆ ಗೂಡು ಮಾರಾಟ ಮಾಡಿರುವ ಬಗ್ಗೆ ದಾಖಲಾತಿಗಳನ್ನು ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ರೇಷ್ಮೆ ವಿಸ್ತರಣಾಧಿಕಾರಿಗಳು/ರೇಷ್ಮೆ ಸಹಾಯಕ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ದಾಖಲಾತಿಗಳೊಂದಿಗೆ ಒದಗಿಸಿ ಅರ್ಜಿ ನಮೂನೆಗಳನ್ನು ಫೆಬ್ರವರಿ 9 ರೊಳಗೆ ಸಲ್ಲಿಸಬಹುದಾಗಿದೆ ಎಂದು ರೇಷ್ಮೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಅಹವಾಲು ಸಭೆ

**ಮೈಸೂರು:** ಮೈಸೂರು ಜಿಲ್ಲೆಯ ಹುಣಸೂರು ತಾಲ್ಲೂಕಿನ ಧರ್ಮಪುರ ತೋಟಗಾರಿಕೆ ಕ್ಷೇತ್ರದಲ್ಲಿ ಕರ್ನಾಟಕ ಸರ್ಕಾರದ ಆದೇಶದ ಮೇರೆಗೆ, ತಾಳೆ ಬೀಜೋತ್ಪಾದನಾ ಕೇಂದ್ರವನ್ನು (Oil Palm Seed Garden) ಸ್ಥಾಪನೆ ಮಾಡುವ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತದೆ.

ಸದರಿ ಕ್ಷೇತ್ರದಲ್ಲಿ ತಾಳೆ ಬೀಜೋತ್ಪಾದನೆ ಕಾರ್ಯಕ್ರಮ ಕೈಗೊಳ್ಳಲು ಕಾಡು ಜಾತೀಯ 1100 ಸಂಖ್ಯೆಯ ಆಕೇಶಿಯಾ ಮರಗಳು ಅಡ್ಡ ಬರುತ್ತಿದ್ದು, ಹುಣಸೂರು ವಿಭಾಗ, ಸಹಾಯಕ ಸಂರಕ್ಷಣಾ ಅಧಿಕಾರಿಗಳು ತೋಟಗಾರಿಕೆ ಕ್ಷೇತ್ರದಲ್ಲಿ ಇರುವ ಆಕೇಶಿಯಾ ಮರಗಳನ್ನು ತೆರವುಗೊಳಿಸಿ ಕೊಡುವಂತೆ ಕೋರಲಾಗಿರುತ್ತದೆ. ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ –1976 ರ ಕಲಂ 08(3), (ಗಿಖಖ), ರೆಡಿ 50 ಕ್ಕಿಂತ ಹೆಚ್ಚು ಮರಗಳನ್ನು ಕತರಾವಣೆ ಮಾಡಬೇಕಾದಲ್ಲಿ ಸಾರ್ವಜನಿಕ ಅಹವಾಲನ್ನು ಸ್ವೀಕರಿಸಿ ಕ್ರಮ ಕೈಗೊಳ್ಳಬೇಕಾಗಿರುವುದರಿಂದ ಸಹಾಯಕ ಸಂರಕ್ಷಣಾಧಿಕಾರಿಗಳು, ಹುಣಸೂರು ವಿಭಾಗ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:–16–02–2026 ರಂದು ಪೂರ್ವಾಹ್ನ 11.00 ಗಂಟೆಗೆ ವಲಯ ಅರಣ್ಯಾಧಿಕಾರಿಗಳು, ಹುಣಸೂರು ವಿಭಾಗ, ಹುಣಸೂರು ಕಛೇರಿ ಆವರಣದಲ್ಲಿ ಸಾರ್ವಜನಿಕ ಅಹವಾಲು ಸಭೆಯನ್ನು ಕರೆಯಲಾಗಿದೆ.

## ಅರ್ಜಿ ಆಹ್ವಾನ



**ತುಮಕೂರು:** ಕರ್ನಾಟಕ ಬಾಲ ವಿಕಾಸ ಅಕಾಡೆಮಿಯಿಂದ 2024–25 ಹಾಗೂ 2025–26ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರ್‌ರಾಷ್ಟ್ರ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದೊಳಗಿನ ಮಕ್ಕಳಿಗೆ ಬಾಲಗೌರವ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ನಟನೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನೆ ಯಾವುದಾದರೂ ಒಂದು ಕ್ಷೇತ್ರದಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿ ಪ್ರಶಸ್ತಿ ಪಡೆದ ಪುರಸ್ಕೃತ ಮಗುವಾಗಿರಬೇಕು. ಆಸಕ್ತ ಮಕ್ಕಳು ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳೊಂದಿಗೆ ಸ್ವವಿವರಗಳನ್ನೊಳಗೊಂಡ ಮನವಿ ಅರ್ಜಿಯನ್ನು ಫೆಬ್ರವರಿ 20ರೊಳಗಾಗಿ ಯೋಜನಾಧಿಕಾರಿಗಳು, ಚಂದ್ರಿಕಾ ಲೇಔಟ್ ಹಿಂಭಾಗ, ಕೆ.ಎಚ್.ಬಿ. ಕಾಲೋನಿ, ಲಕಮನಹಳ್ಳಿ, ಧಾರವಾಡ–580004 ಇವರಿಗೆ ಸಲ್ಲಿಸಬಹುದು. ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ವಾ.ಸಂ. 0836–2465490, ಮೊ.ಸಂ. 8050392209, 7204396275, 9448981944ನ್ನು ಸಂಪರ್ಕಿಸಬುದಾಗಿದೆ ಎಂದು ಅಕಾಡೆಮಿಯ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ತುಮಕೂರು:** ಬೆಸ್ಕಾಂ ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗದ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಂಡಿರುವುದರಿಂದ ಫೆಬ್ರವರಿ 7 ಮತ್ತು 8ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಫೆಬ್ರವರಿ 7ರಂದು ಅಂತರಸನಹಳ್ಳಿ, ಬೆಳ್ಳಾವಿ, ಹೆಗ್ಗೆರೆ, ಮಲ್ಲಸಂದ್ರ, ದೊಡ್ಡಸಾರಂಗಿ, ಬೆಳಧರ, ಊರ್ಡಿಗೆರೆ, ಸಿ.ಟಿ.ಕೆರೆ, ವಿಪ್ರೋ ಲೈನ್, ಚೇಳೂರು, ಒಸಕೆರೆ, ಹಾಗಲವಾಡಿ, ಮೆಳೆಕೋಟೆ, ನಂದಿಹಳ್ಳಿ, ಬಡ್ಡಿಹಳ್ಳಿ ಹಾಗೂ ಫೆ.8ರಂದು ನಿಟ್ಟೂರು, ಗುಬ್ಬಿ, ಬಿದರೆ, ಜಿ.ಹೊಸಹಳ್ಳಿ, ದೊಡ್ಡಗುಣಿ, ಕಡಬ, ಕಲ್ಲೂರು, ಕೆ.ಜಿ.ಟೆಂಪಲ್, ಉಂಗ್ರಾ, ಸೋಮಲಾಪುರ, ಸೌತ್–ವೆಸ್ಟರ್ನ್ ರೈಲ್ವೆ ಲೈನ್ಸ್(ಟ್ರಾಕ್ಷನ್), ಟಿ.ಎಂ.ಟಿ.ಪಿ., ವಸಂತನರಸಾಪುರ ಸ್ವೀಕರಣಾ ಕೇಂದ್ರ, ತುಮಕೂರು ಉಪಸ್ಥಾವರಗಳಿಂದ ಹೊರಹೊಮ್ಮುವ ಎಲ್ಲಾ 11 ಕೆ.ವಿ. ಪೂರಕಗಳಿಗೆ ಒಳಪಡುವ ಗ್ರಾಮ ಹಾಗೂ ಕೈಗಾರಿಕಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ತಿಪಟೂರು ನಗರಸಭೆ : ಇಂದು 2ನೇ ಸುತ್ತಿನ ಸಭೆ

**ತುಮಕೂರು:** ತಿಪಟೂರು ನಗರಸಭೆಯ 2026–27ನೇ ಸಾಲಿನ ಆಯವ್ಯಯ ಅಂದಾಜು ಪಟ್ಟಿ ತಯಾರಿಸಲು ಫೆಬ್ರವರಿ 6ರಂದು ಮಧ್ಯಾಹ್ನ 3 ಗಂಟೆಗೆ ನಗರಸಭೆ ಸಭಾಂಗಣದಲ್ಲಿ ಎರಡನೇ ಸುತ್ತಿನ ಸಾರ್ವಜನಿಕ ಸಮಾಲೋಚನಾ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ. ಸಭೆಗೆ ತಿಪಟೂರು ನಗರದ ಸಂಘ ಸಂಸ್ಥೆಗಳ ಪದಾಧಿಕಾರಿ, ಹೋಟೆಲ್ ಅಸೋಸಿಯೇಷನ್, ಛತ್ರಗಳ ಮಾಲೀಕರ ಸಂಘ, ಸಿನಿಮಾ ಮಂದಿರಗಳ ಮಾಲೀಕರ ಸಂಘ, ನರ್ಸಿಂಗ್ ಹೋಮ್ಸ್ ಸಂಘ, ಶಿಕ್ಷಣ ಸಂಸ್ಥೆಯ ಸಂಘಗಳ ಪದಾಧಿಕಾರಿಗಳು, ವಕೀಲರ ಅಸೋಸಿಯೇಷನ್, ನಾಗರೀಕ ಹಿತರಕ್ಷಣಾ ಸೇವಾ ಸಮಿತಿ, ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕೋದ್ಯಮ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅಮೂಲ್ಯವಾದ ಸಲಹೆಗಳನ್ನು ನೀಡಬೇಕೆಂದು ಅವರು ಮನವಿ ಮಾಡಿದ್ದಾರೆ.

# ಮನೆ ಮನೆಗೆ ಗ್ಯಾರಂಟಿ ತಲುಪಿಸಿ: ಹರೀಶ್ ಗೌಡ

**ಮೈಸೂರು:** ಇಂದಿನಿಂದಲೇ ನಿತ್ಯ ಮನೆ ಮನೆ ತಲುಪುವ ಕೆಲಸ ಕಾರ್ಯಕರ್ತರು ಮಾಡಿದಾಗ ಮಾತ್ರವೇ ಮುಂದೆಯೂ ನನ್ನ ಗೆಲುವು ಸಾಧ್ಯ ಎಂದು ಶಾಸಕ ಹರೀಶ್ ಗೌಡ ತಿಳಿಸಿದರು.

ಚಾಮರಾಜ ವಿಧಾನಸಭಾ ಕ್ಷೇತ್ರದ ದೇವರಾಜ ಬ್ಲಾಕ್ ಅಧ್ಯಕ್ಷರಾಗಿ ಡಿ.ನಾಗಭೂಷಣ್ ಪುನರ್ ನೇಮಕಗೊಂಡ ಹಿನ್ನೆಲೆಯಲ್ಲಿ ಅವರಿಗೆ ಪಕ್ಷದ ಧ್ವಜ ನೀಡಿ ಜವಾಬ್ದಾರಿ ವಹಿಸಿ ಅವರು ಮಾತನಾಡಿದರು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಹೇಳಿದಂತೆ ಚಾಮರಾಜ ಕ್ಷೇತ್ರ ಕಾಂಗ್ರೆಸ್ ಗೆಲುವಿಗೆ ಸುಲಭವಾಗಿಲ್ಲ. ಕಳೆದ ಬಾರಿ ಒಬ್ಬನೇ ಕಾಂಗ್ರೆಸ್ ಪಾಲಿಕೆ ಸದಸ್ಯನಿದ್ದದ್ದು, ನನ್ನ ಇಬ್ಬರೂ ಸೇರಿ ಮೂವರಿದ್ದರು. ಹೀಗಿರುವಾಗ ಹಾಲಿ ಶಾಸಕರ ಸೋಲಿಸಿ ಗೆದ್ದಿರುವ ಕಷ್ಟ ನಮಗೆ ಗೊತ್ತಿದೆ ಎಂದರು. ಕ್ಷೇತ್ರದಲ್ಲಿ ಗೆದ್ದಿದ್ದೇನೆಂದು ಮೈಮರಿಯುವಂತಿಲ್ಲ ಎಂಬ ಸ್ಥಿತಿಯಿದೆ. ಹೀಗಾಗಿ ನಿತ್ಯ ಕಾರ್ಯಕ್ರಮ ಕೊಡುವ ಮೂಲಕ ಕಾರ್ಯಕರ್ತರನ್ನು ಎಚ್ಚರವಾಗಿರಸಬೇಕಿದೆ. ಹಿಂದಿನ ವಾರ್ಡ್ ಅಧ್ಯಕ್ಷರಾಗಿದ್ದ ಶಿವಮಾಧು, ಕುಮಾರ ಚುನಾವಣೆಯಲ್ಲಿ ಸಾಕಷ್ಟು ಕೆಲಸ ಮಾಡಿದ್ದರ ಫಲ ನಾನು ಶಾಸಕನಾಗಲು ಸಹಕಾರಿಯಾಯಿತು. ಬಿಜೆಪಿ, ಜೆಡಿಎಸ್ ಪ್ರಬಲವಾಗಿ ಬೇರೂರಿರುವ ಕ್ಷೇತ್ರ ನನ್ನದಾಗಿದೆ. ಇದಾಗಿಯೂ ನಾಲ್ಕು ಬಾರಿ ಶಂಕರಲಿಂಗೇಗೌಡ, ಅನಂತರ ವಾಸಣ್ಣ ಬಳಿಕ ಮತ್ತೆ ಬಿಜೆಪಿ ಬಂದಿತ್ತು. ಈ ವೇಳೆ ನನ್ನ ಸ್ಪರ್ಧೆ ಬಳಿಕ 15 ಸಾವಿರ ಮತಗಳ ಅಂತರದಿಂದ ಗೆಲ್ಲುತ್ತೇನೆಂಬ ನಿರೀಕ್ಷೆಯಿತ್ತು. ಆದರೆ, 4500 ಮತಗಳಿಂದ ಗೆದ್ದಿದ್ದೇವೆ. ಹೀಗಾಗಿ ಗೆದ್ದಿದ್ದೇವೆಂದು ಹಿಗ್ಗುವ ಕೆಲಸ ಮಾಡುವಂತಿಲ್ಲ.




1500 ಕೋಟಿ ಕಾಮಗಾರಿ ನನ್ನ ಕ್ಷೇತ್ರದಲ್ಲಿ ನಡೆಯುತ್ತಿದೆ. ಆಸ್ಪತ್ರೆ, ಕಾಲೇಜು ಎನೇ ಆದರೂ ನಮಗೆ ಅನೂಕೂಲ ಆಗುತ್ತಿದೆ. ಕಾಲೇಜಿಗೆ 200 ಕೋಟಿ ಯಷ್ಟು ಮೂಲಭೂತ ಸೌಕರ್ಯ ಕೆಲಸ ಸರ್ಕಾರ ನೀಡಿದೆ ಎಂದರು.

ಬಹುಶಃ ಮುಂದಿನ ನಾಲ್ಕು ತಿಂಗಳಲ್ಲಿ ಗ್ರೇಟರ್ ಮೈಸೂರು ಆಗಬಹುದು. ಈ ವರ್ಷದಲ್ಲೇ ನೂರಕ್ಕೆ ನೂರು ಚುನಾವಣೆ ಆಗಲಿದೆ. ಕ್ಷೇತ್ರದ 20 ವಾರ್ಡ್ ನಲ್ಲಿ 15 ಮಂದಿ ಗೆಲ್ಲಲೇ ಬೇಕಿದೆ. ಹೀಗಾಗಿ ವಾರ್ಡ್ ವಾರು ನಿಷ್ಕ್ರಿಯ ಅಧ್ಯಕ್ಷರನ್ನು ಅರಿತು, ಮಹಿಳಾ ವಾರ್ಡ್ ಅಧ್ಯಕ್ಷರೊಂದಿಗೆ ಸಮಾಲೋಚನೆ ನಡೆಸಬೇಕಿದೆ. ನಾನು ನಗರಾಧ್ಯಕ್ಷನಾಗಿದ್ದಾಗ 12 ವಾರ್ಡ್ ಗೆಲ್ಲಿಸಿದ್ದೇನು. ಪ್ರಮುಖವಾಗಿ ಮನೆ ಮನೆಗೆ ತೆರಳಿ ಕಾಂಗ್ರೆಸ್ ಗ್ಯಾರಂಟಿ ಯೋಜನೆ ಹಾಗೂ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಬಗ್ಗೆ ತಿಳಿಸುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಮಾಜಿ ಮಹಾಪೌರರಾದ ಪುಷ್ಪಲತಾ ಚಿಕ್ಕಣ್ಣ, ಪುಷ್ಪವಲ್ಲಿ, ಮೋದಾಮಣಿ, ನಗರ ಪ್ರಧಾನ ಕಾರ್ಯದರ್ಶಿ ಈಶ್ವರ ಚಕ್ಕಡಿ,

ಮಹಿಳಾ ಅಧ್ಯಕ್ಷರಾದ ಸುಶೀಲಾ ಮರಿಗೌಡ, ಚಂದ್ರಕಲಾ, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಲ್ಲಿಗೆ ವೀರೇಶ್, ಹಿಂದುಳಿದ ವರ್ಗಗಳ ಬ್ಲಾಕ್ ಅಧ್ಯಕ್ಷ ಕೆ.ನಾಗೇಶ್, ಮುಖಂಡರಾದ ಹರೀಶ್, ರವಿ, ಅಶೋಕ್ ಇನ್ನಿತರರು ಉಪಸ್ಥಿತರಿದ್ದರು.

### ತಂತ್ರ, ಪ್ರತಿತಂತ್ರಕ್ಕೆ ಜಯ ನಿಶ್ಚಿತ

ಮಾಜಿ ಶಾಸಕ ಎಲ್.ನಾಗೇಂದ್ರರಿಗೆ 6 ತಿಂಗಳ ಮುಂಚೆಯೇ ಅವರ ಸೋಲಿನ ಬಗ್ಗೆ ಹೇಳಿದ್ದೇನು. ರಾಜಕೀಯದಲ್ಲಿ ತಂತ್ರ, ಪ್ರತಿತಂತ್ರ ಕಲಿತವರಷ್ಟೇ ಮುಂದೆ ಬರಲು ಸಾಧ್ಯ. ಇದು ಮಾಡದಕ್ಕೆ ನಾನು ಎಂ.ಕೆ.ಸೋಮಶೇಖರ್ ಮಾಜಿಗಳಾಗಿ ಬಲಿಯಾಗಿದ್ದೇವೆ. 2028ಕ್ಕೆ ಇನ್ನಾ ಬಹಳ ದಿನವಿದೆ. ಈಗಾಗಲೇ ಶಾಸಕರು ಯಾರೆಂಬ ಬಗ್ಗೆ ಗೊಂದಲ ಸೃಷ್ಠಿಯಾಗಿದೆ. ಇದು ಜೀವಂತವಾಗಿ ಇರಿಸಿ, ಜನರ ಭಾವನೆಗೆ ಸ್ಪಂದಿಸುವ ಮೂಲಕ 2028ಕ್ಕೂ ನೀವೇ ಶಾಸಕರಾಗಿ ಮುಂದುವರೆಯಬೇಕು. ಈ ದಿಸೆಯಲ್ಲಿ ಇಂದಿನಿಂದಲೇ ಕಾರ್ಯಕರ್ತರು ಕೆಲಸ ಮಾಡಲಿ.

। **ನಂಜುಂಡಸ್ವಾಮಿ,** ನಗರ ಕಾಂಗ್ರೆಸ್ ಸಮಿತಿ

# ನಾನು ಕಾಫಿರ ಪುಸ್ತಕ ಬಿಡುಗಡೆ ಸಮಾರಂಭ

**ಮಂಡ್ಯ:** ಅಖಿಲ ಭಾರತ ಸಾಹಿತ್ಯ ಪರಿಷದ್ ಮತ್ತು ಸ್ವರಾಷ್ಟ್ರ ಪ್ರಕಾಶನ ಸಹಯೋಗದಲ್ಲಿ ನಾನು ಕಾಫಿರ ಪುಸ್ತಕ ಬಿಡುಗಡೆ ಸಮಾರಮಭವನ್ನು ಫೆ.7ರಂದು ಬೆಳಿಗ್ಗೆ 10.30ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕೃತಿಯ ಕರ್ತೃ ಡಾ.ಸುಧಾಕರ್ ಹೊಸಳ್ಳಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತವನ್ನು ವಿಭಜಿಸಲು ಅಂಬೇಡ್ಕರ್‌ರನ್ನು ಹಿಂದೂ ಧರ್ಮದ ವಿರುದ್ಧ ಗುರಾಣೀಯಾಗಿ ಬಳಸಲಾಗುತ್ತಿದೆ. ಈ ಸಂಬಂಧ ಹಿಂದೂ ಸಮಾಜದ ಜಾಗೃತಿ ಭಾಗವಹಿ 'ನಾನೂ ಕಾಫಿರ' ಕೃತಿ ಬಿಡುಗಡೆ ಮಾಡಲಾಗುತ್ತಿದೆ ಎಂದರು.

ಬಿಜೆಪಿ ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಕಾರ್ಯಕ್ರಮ ಉದ್ಘಾಟಿಸಿ, ಪುಸ್ತಕ ಬಿಡುಗಡೆ ಮಾಡುವರು. ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಧ್ಯಕ್ಷತೆ ವಹಿಸುವರು. ಎಸ್‌ಬಿಇಟಿ ಕಾರ್ಯದರ್ಶಿ ಡಾ.ಮೀರಾಶಿವಲಿಂಗಯ್ಯ ಹಾಗೂ ಸ್ವರಾಷ್ಟ್ರ ಪ್ರಕಾಶನದ ಮಹಾಪೋಷಕ ಚಂದ್ರಶೇಖರ್ ದಡದಪುರ ಭಾಗವಹಿಸಲಿದ್ದಾರೆ. ಸಂವಿಧಾನ ತಜ್ಞ, ಲೇಖಕ ಡಾ.ಸುಧಾಕರ ಹೊಸಳ್ಳಿ ಉಪಸ್ಥಿತರಿರುವರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ, ಪುಸ್ತಕ ಪ್ರೇಮಿ ಎಂ.ಅಂಕೇಗೌಡ ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಇದೇ ವೇಳೆ ಮಾಹಿತಿ ನೀಡಿದರು. ಗೋಷ್ಠಿಯಲ್ಲಿ ಅಖಿಲ ಭಾರತ ಸಾಹಿತ್ಯ ಪರಿಷದ್‌ನ ಜಿಲ್ಲಾಧ್ಯಕ್ಷ ಎಚ್.ಪದ್ಮನಾಭ, ವಿಭಾಗ ಪ್ರಭಾರಿ ಬಿ.ಎಸ್.ಅನುಪಮ ಇದ್ದರು.




# ಹಾಲು ಉತ್ಪಾದಕರ ಸಂಘದ ನೂತನ ಅಧ್ಯಕ್ಷ ಜಯಣ್ಣ ಮತ್ತು ಉಪಾಧ್ಯಕ್ಷ ಚಂದ್ರ ಆಯ್ಕೆ

**ಕೆ.ಆರ್.ನಗರ:** ಸಾಲಿಗ್ರಾಮ ತಾಲೂಕಿನ ಹಳಿಯೂರು ಬಡಾವಣೆಯ ಹಾಲು ಉತ್ಪಾದಕರ ಸಹಕಾರಸಂಘದ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತರಾದ ಹೆಚ್.ಬಿ.ಜಯಣ್ಣ ಮತ್ತು ಉಪಾಧ್ಯಕ್ಷರಾಗಿ ಟೈಲರ್ ಚಂದ್ರು ಬುಧವಾರ ಅವಿರೋಧವಾಗಿ ಆಯ್ಕೆಯಾದರು

ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಎಚ್.ಬಿ.ಜಯಣ್ಣ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಟೈಲರ್ ಚಂದ್ರು

ಅವರನ್ನ ಹೊರತು ಪಡಿಸಿ ಬೇರೆಯಾರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾದರು

ಸಂಘದ ಹಾಲಿ ಅಧ್ಯಕ್ಷ ಎಚ್.ಆರ್.ಕೃಷ್ಣಮೂರ್ತಿ, ಉಪಾಧ್ಯಕ್ಷ ಸ್ಥಾನಕ್ಕೆ ವಿಕ್ರಮ್ ಗೌಡ ಅವರು ನೀಡಿದ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕಾಗಿ ಈ ಚುನಾವಣೆ ನಡೆಯಿತು

ಚುನಾವಣಾ ಸಭೆಯಲ್ಲಿ ನಿರ್ದೇಶಕರಾದ ಹಳಿಯೂರು ಮಧುಚಂದ್ರ, ಎಚ್.ಆರ್. ಕೃಷ್ಣಮೂರ್ತಿ, ಎಚ್.ಕೆ.ವಿಕ್ರಮ್ ಗೌಡ, ಎಚ್.ಎಸ್. ಅಜಯ್,ಗಾರೆಕೃಷ್ಣ, ಎಚ್.ಟಿ.ಪ್ರಮೋದ್, ಸುಭದ್ರಮ್ಮ,



ಲಕ್ಷ್ಮಿ, ಹೇಮಾ, ಮಾರ್ಗ ವಿಸ್ತರಣಾಧಿಕಾರಿ ಸಿ.ಜಿ.ಅಭಿಷೇಕ್, ಸಂಘದ ಕಾರ್ಯದರ್ಶಿ ಎಚ್.ಪಿ.ರಾಜೇಶ್ ಇದ್ದರು ನಂತರ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನ ತಾಲೂಕು ಒಕ್ಕಲಿಗರ ಸಂಘದ ಉಪಾಧ್ಯಕ್ಷ ಎ.ಕುಚೇಲ್, ಹೊಸೂರು ಸಹಕಾರ ಸಂಘದ ಮಾಜಿ ಅಧ್ಯಕ್ಷರಾದ ಎಸ್.ಟಿ.ಕೀರ್ತಿ, ಎಚ್. ಅರ್.ಮಹೇಶ್, ಎಚ್.ಅರ್ .ದಿನೇಶ್ ಎಚ್.ಎಸ್. ಜಗದೀಶ್ ಹಳಿಯೂರು ಗ್ರಾ.ಪಂ.ಮಾಜಿ ಉಪಾಧ್ಯಕ್ಷ ಮಂಜುನಾಥ್, ಕಾಂಗ್ರೆಸ್ ಮುಖಂಡ ಡೈರಿ ಮಾದು ವಕೀಲ ಉದಯ್, ಗ್ಯಾರಂಟಿ ಅನುಷ್ಠಾನ ನಿರ್ದೇಶಕ ಮಹಾಲಿಂಗಣ್ಣ, ಮುಖಂಡರಾಣ ವಿಜಿಯಣ್ಣ, ದಿನೇಶ್, ಬಾಲಣ್ಣ, ಸಣ್ಣತಮ್ಮಣ್ಣ, ಸತೀಶ್, ಮೂಗ ರಾಘವೇಂದ್ರ, ಸ್ವೀಟ್ ಭದ್ರ, ಲಯನ್ ರಾಜ್, ಮುರುಳಿ, ಅಬ್ಬು ಸೇರಿದಂತೆ ಮತ್ತಿತರರು ಅಭಿನಂಧಿಸಿದರು

## ಅರ್ಜಿ ಆಹ್ವಾನ

**ರಾಮನಗರ:** ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಯಮದ 2025–26ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸಫಾಯಿ ಕರ್ಮಚಾರಿಗಳಿಗೆ ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ 'ಸ್ಕ್ಯಾವೆಂಜರ್ಸ್ ಮತ್ತು ಅವರ ಅವಲಂಬಿತರಾಗಿರುವ ಫಲಾಪೇಕ್ಷಿಗಳಿಗೆ ಲ್ಯಾಪ್‌ಟಾಪ್ ಯೋಜನೆಯಡಿ' ಸೌಲಭ್ಯ ಒದಗಿಸಲು ಅರ್ಹರಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಫೆ.16ರೊಳಗೆ ಪೌರ ಕಾರ್ಮಿಕ/ಸಫಾಯಿ ಕರ್ಮಚಾರಿ ಹಾಗೂ 'ಮ್ಯಾನುಯಲ್ 'ಸ್ಕ್ಯಾಯವೆಂಜರ್ಸ್ ಮತ್ತು ಅವರ ಅವಲಂಬಿತರುಗಳು ಷರತ್ತು ಮತ್ತು ನಿಬಂಧನೆಗಳನ್ನು ಒಳಪಟ್ಟಂತೆ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ದಕ್ಷಿಣ ಜಿಲ್ಲೆ, ಕೊಠಡಿ ಸಂಖ್ಯೆ: 403, 3ನೇ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಗೌಸಿಯಾ ಕಾಲೇಜು ಎದುರು, ಬಿ.ಎಂ. ರಸ್ತೆ, ರಾಮನಗರ–562159 ಈ ಕಚೇರಿಗೆ ಅರ್ಜಿದಾರರ ಭಾವಚಿತ್ರ, 'ಮ್ಯಾನುಯಲ್ ಸ್ಕ್ಯಾವೆಂಜರ್ಸ್ ರವರ ಐ.ಡಿ.ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರೇಷನ್ ಕಾರ್ಡ್ ಹಾಗೂ ಪ್ರಸ್ತುತ ವ್ಯಾಸಾಂಗ ಪ್ರಮಾಣ ಪತ್ರವನ್ನು ನಿಗಧಿತ ಅವಧಿಯೊಳಗೆ ಸಲ್ಲಿಸಬೇಕು.

# ಫೆ 7 ರಂದು ಬೆಂಗಳೂರಿನಲ್ಲಿ ಮಡಿಕೇರಿ ನಾಗೇಂದ್ರ ಸಾಂಸ್ಕೃತಿಕ ಸಂಜೆ

**ಬೆಂಗಳೂರು:** ಸಂಗೀತ ಸಂಭ್ರಮ ಸಂಗೀತ ಸಂಜೆ ಸುಗಮ ಸಂಗೀತ ಕಲಾವಿದ ಮಡಿಕೇರಿ ನಾಗೇಂದ್ರ ಅವರ 75ನೇ ಜನ್ಮವಾರ್ಷಿಕೋತ್ಸವದ ಸಮಾರಂಭ ಫೆ. 7 ಸಂಜೆ 5.30 ಕ್ಕೆ ಜಯನಗರದ ಜೆ ಎಸ್‌ಎಸ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕಿರುತೆರೆ, ಹಿರಿತೆರೆ ಕಲಾವಿದೆ ದೀಪಾ ಪತ್ರಿಕಾ ಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದರು.

(1950ರ ಸೆಪ್ಟೆಂಬರ್ 16) ಮಡಿಕೇರಿಯಲ್ಲಿ ಜನಿಸಿದ ನಾಗೇಂದ್ರರ ಸಂಗೀತಯಾನವು ಅವರ ತಂದೆ, ಖ್ಯಾತ ಗಮಕ ಕಲಾವಿದರಾಗಿದ್ದ ಎಂ. ಎಸ್. ಅನಂತಪದ್ಮನಾಭ ರಾವ್ ಮತ್ತು ಬಾಲ್ಯದಿಂದಲೇ ಅವರ ಸುತ್ತಲಿದ್ದ ಸಾಹಿತ್ಯ ವಲಯದಿಂದ ಪ್ರೇರಿತವಾಯಿತು. ಸೊಗಸಾದ ಗಾಯನ, ಗಂಭೀರ ಕಂಠಶ್ರೀ ಮತ್ತು ಕರ್ನಾಟಕ ಹಾಗೂ ಸುಗಮ ಸಂಗೀತದ ಅನನ್ಯ ಸಂಯೋಜನೆಯ ಮೂಲಕ, ಅವರು ಕನ್ನಡ ಸುಗಮ ಸಂಗೀತದಲ್ಲಿ ವಿಶಿಷ್ಟ ಸ್ಥಾನವನ್ನು ನಿರ್ಮಿಸಿಕೊಂಡರು. ಸ್ವಯಂ ಕಲಿಕೆಯಿಂದ ಕಲಿತು ಸಂಗೀತಗಾರರು ಮತ್ತು ಗಮಕ ಕಲಾವಿದರಾಗಿದ್ದ ಅವರು, ಭಾವಪೂರಿತ ಕಾವ್ಯವಾಚನ ಗಾಯನಕ್ಕೆ, ತಮ್ಮ ವಿಶಿಷ್ಟ ಶೈಲಿಯ ಸಂಗೀತ ಸಂಯೋಜನೆಗಳಲ್ಲಿ ಸಂಗೀತದ ಮೂಲಕ ಕಾವ್ಯಾಭಿವ್ಯಕ್ತಿಗೆ ಪ್ರಸಿದ್ಧರಾಗಿದ್ದರು. ಅವರು ಅನೇಕ ಪ್ರಸಿದ್ಧ ಕಲಾವಿದರೊಂದಿಗೆ ಜೊತೆಗೂಡಿ ವಿಭಿನ್ನ ಸುಗಮ ಸಂಗೀತ ಕಾರ್ಯಾಕ್ರಮಗಳನ್ನು, ಕಾರ್ಯಾಗಾರಗಳನ್ನು ಹಾಗೂ ಸಂಗೀತ ರೂಪಕಗಳನ್ನು ಆಯೋಜಿಸಿ, ಸಂಯೋಜಿಸಿ, ನಿರ್ದೇಶಿಸಿದ್ದಾರೆ. ನಂತರ ಗುರುಕೃಪಾ ಸಂಗೀತ ಕೇಂದ್ರವನ್ನು ಸ್ಥಾಪಿಸಿ ಮುಂದಿನ ಪೀಳಿಗೆಗೆ ತರಬೇತಿ ನೀಡಿದ್ದಾರೆ. 2005ರಲ್ಲಿ ಅವರು ಅನಿರೀಕ್ಷಿತವಾಗಿ ಅಗಲಿದರೂ, ಅವರ ಕಂಠ ಮತ್ತು ಅವರ ಸಂಯೋಜನೆಗಳು ಇಂದಿಗೂ ಶ್ರೋತೃಗಳ ಹೃದಯದಲ್ಲಿ ಪ್ರತಿಧ್ವನಿಸುತ್ತಿವೆ.ಎ0ದು ನಟಿ ದೀಪಾ ವಿವರ ನೀಡಿದರು.

ಮಡಿಕೇರಿ ನಾಗೇಂದ್ರ ಯಶೋಗಾಥೆ ಎನ್ನುವ ನಾಗೇಂದ್ರ ಅವರ ಸಾಧನೆ ವಿವರಿಸುವ ಕೃತಿ ಬಿಡುಗಡೆ ಆಗಲಿದೆ ಡಾ॥ ಎಂ. ಎ. ಜಯರಾಮ್ ರಾವ್ ಈ ಕೃತಿಯನ್ನು ರಚಿಸಿದ್ದಾರೆ.

ಪ್ರೊ॥ ಕೆ. ರಾಮಮೂರ್ತಿ ರಾವ್ ಮತ್ತು ಭರತ್ ನಾಗೇಂದ್ರ ಅವರ ಸಹರಚನೆಯಲ್ಲಿ ಈ ಕೃತಿ ಮೂಡಿಬಂದಿದೆ. ಅರಳುಮಲ್ಲಿಗೆ ಪಾರ್ಥಸಾರಥಿ ಇದನ್ನು ಲೋಕಾರ್ಪಣೆ ಮಾಡುವರು.

ಮಡಿಕೇರಿ ನಾಗೇಂದ್ರ ಅವರ ಸಂಗೀತ ಸಂಯೋಜನೆಯನ್ನೊಳಗೊಂಡ 11 ಮೂಲ ಕೃತಿಗಳ ಸಂಗ್ರಹ ಗೀತವೆನ್ನ ಧ್ವನಿ ಮುದ್ರಿಕೆ ಕೂಡಾ ಬಿಡುಗಡೆ ಆಗಲಿದೆ. ಇದರ ಸಂಗೀತ ನಿರ್ದೇಶನ ಮತ್ತು ವಾದ್ಯಸಂಯೋಜನೆ ಪಂಡಿತ್ ಪ್ರವೀಣ್ ಡಿ. ರಾವ್ ಅವರದು. ಎಚ್. ಆರ್. ಲೀಲಾವತಿ ಅವರು ಬಿಡುಗಡೆಗೊಳಿಸಲಿದ್ದಾರೆ

ಸಾನಿಧ್ಯ? ಎಂಬ ಅಂತರ್ಜಾಲ ತಾಣ (ವೆಬ್‌ಸೈಟ್) ಅನಾವರಣಗೊಳ್ಳಲಿದೆ. ಈ ಪೋರ್ಟಲ್ ಸುಗಮ ಸಂಗೀತದ ಇತಿಹಾಸ, ಅದರ ಪರಂಪರೆ, ಕಲಾವಿದರು ಮತ್ತು ಅದರ ಪ್ರಭಾವವನ್ನು ದಾಖಲಿಸುವ ಉದ್ದೇಶ ಹೊಂದಿದೆ. ಇದನ್ನು ರಾಡೆಲ್ ಎಲೆಕ್ಟ್ರಾನಿಕ್ಸ್ ಕಂಪನಿಯ ಸಂಸ್ಥಾಪಕರು, ಕಲಾಪ್ರೇಮಿಗಳು, ಪಿಟೀಲು ವಾದಕರು ಹಾಗೂ ಭಾರತೀಯ ಸಂಗೀತ ಪರಂಪರೆಯ ಪ್ರಮುಖ ಹಿತೈಷಿಗಳಾದ ರಾಜ್ ನಾರಾಯಣ್ ಬಿಡುಗಡೆಗೊಳಿಸಲಿದ್ದಾರೆ.


ಮಡಿಕೇರಿ ನಾಗೇಂದ್ರರ ಸಂಯೋಜನೆಗಳನ್ನೊಳಗೊಂಡ ಭಾವಗೀತೆಗಳು ಅಲ್ಲಿ ಜೀವಂತಗೊಳ್ಳಲಿವೆ.!!ಇದಕ್ಕೆ ಜೀವ ತುಂಬಿ ರಸಿಕರ ಮನಮುಟ್ಟಿಸುವ ನಿಟ್ಟಿನಿಂದ ಗಾಯನಕ್ಕೆ ದನಿಯಾಗವವರು ಪ್ರಸಿದ್ಧ, ನುರಿತ ಯುವಕಲಾವಿದರಾದ ಸುಪ್ರಿಯಾ ರಘುನಂದನ್, ಮೇಘನಾ ಭಟ್, ಶ್ರೀಲಕ್ಷ್ಮಿ ಬೆಳ್ಮಣ್ಣು, ಕೀರ್ತನ್ ಹೊಳ್ಳಾ, ನಿಶ್ಚಯ ವಿಶ್ವಸೇನ ಮತ್ತು ಭಾರ್ಗವ್ ಎಚ್.ಸಿ. ವಾದ್ಯಸಹಕಾರದಲ್ಲಿ ವಿ॥ ಗುರುಮೂರ್ತಿ ವೈದ್ಯ ಮತ್ತು ವಿ॥ ಪ್ರದ್ಯುಮ್ನ ಸೊರಬ (ತಬಲಾ), ವಿ॥ ಪದ್ಮನಾಭ ಕಾಮತ್ (ರಿದಮ್ ಪ್ಯಾಡ್), ವಿ॥ ಶ್ರುತಿ ಕಾಮತ್ (ಸಿತಾರ್), ವಿ॥ ಸಮೀರ್ ರಾವ್ (ಬಾಂಸುರಿ), ಮತ್ತು ವಿ॥ ಕೃಷ್ಣ ಉಡುಪ (ಕೀಬೋರ್ಡ್) ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಸಂಯೋಜನೆ ಮತ್ತು ವಾದ್ಯನಿರ್ದೇಶನವನ್ನು ಪಂಡಿತ್ ಪ್ರವೀಣ್ ಡಿ. ರಾವ್ ನಿರ್ವಹಿಸುತ್ತಾರೆ. ಕಾರ್ಯಕ್ರಮವನ್ನು ಪ್ರಸಿದ್ಧ ಗಾಯಕ ಹಾಗೂ ಸಾಮಾಜಿಕ ಜಲತಾಣದಲ್ಲಿ ಕಂಟೆಂಟ್ ಕ್ರಿಯೇಟರ್ ಆಗಿರುವ ಶ್ರೀ ಗಣೇಶ್ ಕಾರಂತ್ ನಿರೂಪಿಸಲಿದ್ದಾರೆ. ತಮ್ಮ ಹಾಸ್ಯಮಯ ಶೈಲಿ ಮತ್ತು ಸಂವೇದನಾಶೀಲ ನಿರೂಪಣೆಯಿಂದ ಅವರು ಪ್ರೇಕ್ಷಕರನ್ನು ಸಂಗೀತಯಾನದ ಮೂಲಕ ನಡೆಸಲಿದ್ದಾರೆ.

ಸಂಗೀತ ಸಂಭ್ರಮ ಕಾರ್ಯಕರಮವು ಶ್ರೀ ಭರತ್ ನಾಗೇಂದ್ರ ಅವರ ಪರಿಕಲ್ಪನೆಯಲ್ಲಿ ಮೂಡಿ ಬರಲಿದೆ

ಶ್ರೀಮತಿ ಗೀತಾ ನಾಗೇಂದ್ರ, ಭರತ್ ನಾಗೇಂದ್ರ ಮತ್ತು ಕಿರುತೆರೆ ನಟಿ, ರಂಗಭೂಮಿ ಕಲಾವಿದೆಯಾದ ಶ್ರೀಮತಿ ದೀಪಾ ಬಿ. ಅವರ ಸಹಯೋಗದಲ್ಲಿ ನಿರ್ಮಿಸಿ ಪ್ರಸ್ತುತಪಡಿಸಿಲಾಗುತ್ತಿದೆ.

ಜಯನಗರ ಜೆಎಸ್‌ಎಸ್ ಸಭಾಂಗಣದಲ್ಲಿ 7 ಶನಿವಾರ ಸಂಜೆ 5 ಗಂಟೆಗೆ ಕಾರ್ಯಕ್ರಮ ನಡೆಯಲಿದೆ ಯೆಂದು ದೀಪಾ ತಿಳಿಸಿದರು.

# ಕ್ಯಾನ್ಸರ್ ಬಗ್ಗೆ ಜಾಗೃತಿ ಅಗತ್ಯ: ಡಾ ಮಾರುತಿ



**ಚಾಮರಾಜನಗರ:** ಇತ್ತೀಚಿನ ದಿನಗಳಲ್ಲಿ ಕ್ಯಾನ್ಸರ್ ಹೆಚ್ಚುತ್ತಿದ್ದು, 4 ಜನರಲ್ಲಿ ರಲ್ಲಿ ಒಬ್ಬರಿಗೆ ಸ್ತನ ಕ್ಯಾನ್ಸರ್ ಮತ್ತು 8 ಜನರಲ್ಲಿ ಒಬ್ಬರಿಗೆ ಗರ್ಭಕಂಠ ಕ್ಯಾನ್ಸರ್ ಪತ್ತೆಯಾಗುತ್ತಿದೆ ಎಂದು ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧನಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ, ಅಸ್ತಿ ಚಿಕಿತ್ಸಾ ವಿಭಾಗದ ಪ್ರಾಧ್ಯಾಪಕ ಹಾಗೂ ವಿಭಾಗ ಮುಖ್ಯಸ್ಥ ಡಾ. ಸಿ.ವಿ. ಮಾರುತಿ ತಿಳಿಸಿದರು.

ಚಾಮರಾಜನಗರದ ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಿರಿಯ ವಿದ್ಯಾರ್ಥಿಗಳ ಸಂಘ ಹಾಗೂ ವಿಜ್ಞಾನ ಸಂಘದ ವತಿಯಿಂದ ನಡೆದ ವಿಶ್ವ ಕ್ಯಾನ್ಸರ್ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆರೋಗ್ಯಕರ ದಿನಚರಿ ಅತ್ಯವಶ್ಯಕ. ಉತ್ತಮ ಆಹಾರ, ಹೆಚ್ಚು ನೀರು ಕುಡಿಯುವುದು ಹಾಗೂ ವ್ಯಾಯಾಮ ಆರೋಗ್ಯಕ್ಕೆ ಮುಖ್ಯ. ಇಂದು 100 ರಲ್ಲಿ 15 ಮಂದಿಗೆ ಕ್ಯಾನ್ಸರ್ ಕಾಣಿಸಿಕೊಳ್ಳುತ್ತಿದೆ. ಮದ್ಯಪಾನ, ಧೂಮಪಾನ, ಎಣ್ಣೆಯಲ್ಲಿ ಕರಿದ ತಿಂಡಿಗಳನ್ನು ಹೆಚ್ಚಾಗಿ ಸೇವಿಸುವುದು ಹಾಗೂ ಅನಾವಶ್ಯಕ ಎಕ್ಸ್ ರೇ ಮತ್ತು ಸಿಟಿ ಸ್ಕ್ಯಾನ್ ಮಾಡಿಸುವುದನ್ನು ಆದಷ್ಟು ತಡೆಯಬೇಕು ಎಂದರು. ತೀವ್ರ ನೋವು, ದೇಹದ ವಿವಿಧ ಭಾಗಗಳಲ್ಲಿ ಗಂಟುಗಳು, ಊತ, ಸುಲಭವಾಗಿ ಮೂಳೆ ಮುರಿಯುವಿಕೆ, ತೀವ್ರ ಕಾಲದವರೆಗೆ ಜ್ವರ, ಹಸಿವುವಾಗದಿರುವುದು ಹಾಗೂ ತೂಕದಲ್ಲಿ ಭಾರಿ ಇಳಿಕೆಯಾಗುವುದು ಕ್ಯಾನ್ಸರ್‌ನ ಪ್ರಮುಖ ಲಕ್ಷಣಗಳಾಗಿದ್ದು, ಇವು ಕಾಣಿಸಿಕೊಂಡ ಕೂಡಲೇ ವೈದ್ಯರನ್ನು ಸಂಪರ್ಕಿಸಬೇಕು ಎಂದು ಹೇಳಿದರು.

ಇಂದು ಇರುವ ನವೀನ ವೈದ್ಯಕೀಯ ಸೌಲಭ್ಯಗಳಿಂದ ಹಲವು ಕ್ಯಾನ್ಸರ್‌ಗಳನ್ನು ಪ್ರಾರಂಭದ ಹಂತದಲ್ಲೇ ವಾಸಿ ಮಾಡುವುದರ ಜೊತೆಗೆ ರೋಗಿಗಳು ತಮ್ಮ ಮುಂಚಿನ ಜೀವನಕ್ಕೆ ಮರಳಬಹುದು ಎಂದರು. ಒಂದು ಅಥವಾ ಎರಡು ವರ್ಷಗಳಿಗೊಮ್ಮೆ ಕ್ಯಾನ್ಸರ್ ಪರೀಕ್ಷೆ ಮಾಡಿಸಿಕೊಳ್ಳುವುದು ಮತ್ತು ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಹೆಚ್ಚುತ್ತಿರುವುದರಿಂದ ಸ್ವಪರೀಕ್ಷೆ ಮಾಡಿಕೊಳ್ಳುವುದು, ಕ್ಯಾನ್ಸರ್ ಮುನ್ನೆಚ್ಚರಿಕಾ ಕ್ರಮಗಳೆಂದು ತಿಳಿಸಿದರು.

ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ನಾಗರಾಜು ಮಾತನಾಡಿ, ಕ್ಯಾನ್ಸರ್ ಹೆಚ್ಚುತ್ತಿರುವ ಕಾರಣ ಜಾಗೃತಿ ಅವಶ್ಯ. ಈ ನಿಟ್ಟಿನಲ್ಲಿ ನಮ್ಮ ಜೆಎಸ್‌ಎಸ್ ಮಹಾವಿದ್ಯಾಲಯವು ಹಿರಿಯ ವಿದ್ಯಾರ್ಥಿಗಳ ಸಂಘದೊಂದಿಗೆ ಏರ್ಪಡಿಸಿರುವ ಈ ಕಾರ್ಯಕ್ರಮವನ್ನು ಎಲ್ಲಾ ಪ್ರಶಿಕ್ಷಣಾರ್ಥಿಗಳು ಸದುಪಯೋಗ ಪಡಿಸಿಕೊಂಡು ಪರಿಚಿತರಿಗೆ ಜಾಗೃತಿ ಮೂಡಿಸಬೇಕೆಂದರು. ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಕೆ. ಸಿ. ಬಸವಣ್ಣ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೇಲ್ವಿಚಾರಕ ಮಹದೇವಪ್ರಸಾದ್, ಪ್ರಾಧ್ಯಾಪಕರಾದ ರಾಜು, ಸುರೇಶ್, ಯೋಗೇಶ್, ಸಿದ್ದರಾಜು, ಶಿವರಾಜ ಅರಸ್, ಶಿವಕುಮಾರ್, ಅರುಣಾಶ್ರೀ, ಉಪಸ್ಥಿತರಿದ್ದರು.

## ಸಂವಿಧಾನ ದಿನಾಚರಣೆ ಕಾರ್ಯಕ್ರಮ

**ಮಂಡ್ಯ:** ಕರ್ನಾಟಕ ಸಂವಿಧಾನ ಸೇನೆಯ ವತಿಯಿಂದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಫೆ.8ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಸೇನೆಯ ರಾಜ್ಯಾಧ್ಯಕ್ಷ ಎಚ್.ಎನ್.ನರಸಿಂಹಮೂರ್ತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉರಿಲಿಂಗಿ ಪೆದ್ದಿ ಮಹಾಸಂಸ್ಥಾನ ಮಠದ ಶ್ರೀಜ್ಞಾನಪ್ರಕಾಶ ಸ್ವಾಮೀಜಿ ವಹಿಸಲಿದ್ದಾರೆ. ಕರ್ನಾಟಕ ಸರಕಾರದ ಯೋಜನೆ ಇಲಾಖೆಯ ನಿರ್ದೇಶಕ ಡಿ.ಚಂದ್ರಶೇಖರಯ್ಯ ಉದ್ಘಾಟಿಸುವರು ಎಂದರು.

ಹಿರಿಯ ದಲಿತ ಹೋರಾಟಗಾರ ಬಿ.ಗೋಪಾಲ್ ಜಿಲ್ಲಾಧಿಕಾರಿ ಡಾ.ಕುಮಾರ, ಕರ್ನಾಟಕ ಸಂವಿಧಾನ ಸೇನೆಯ ರಾಜ್ಯಾಧ್ಯಕ್ಷ ನರಸಿಂಹಮೂರ್ತಿ, ಲೋಕೋಪಯೋಗಿ ಇಲಾಖೆಯ ನಿವೃತ್ತ ಕಾರ್ಯಪಾಲಕ ಅಭಿಯಂತರ ಟಿ.ಆರ್.ಶಿವರಾಮು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ವಿವಿಧ ಕ್ಷೇತ್ರ ಸಾಧನೆಗೈದ 10 ಸಾಧಕರಿಗೆ ಸನ್ಮಾನ ಆಯೋಜಿಸಲಾಗಿದೆ ಎಂದು ಹೇಳಿದರು.

ಗೋಷ್ಠಿಯಲ್ಲಿ ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಲೋಕೇಶ್, ಜಿಲ್ಲಾಧ್ಯಕ್ಷ ಜಿ.ಕೆ.ಕುಮಾರ್, ಪ್ರಧಾನ ಕಾರ್ಯದರ್ಶಿ ಎಚ್.ಡಿ.ಪ್ರದೀಪ್, ನಾವು ದ್ರಾವಿಡರು ಸಂಘಟನೆಯ ಅಭಿಗೌಡ, ಪ್ರಮೋದ್ ಇದ್ದರು.





ಸಿನಿಮಾ ವರದಿ: ಬಿ.ಜಿ.ರವಿಕುಮಾರ್





# ಟ್ರೇಲರ್ ನಲ್ಲೇ ಕುತೂಹಲ ಮೂಡಿಸಿದ `ಸರಳ ಸುಬ್ಬರಾವ್'

ರಿಯಾನ್ ಕ್ರಿಯೇಷನ್ಸ್ ಲಾಂಛನದಲ್ಲಿ ಲೋಹಿತ್ ನಂಜುಂಡಯ್ಯ ನಿರ್ಮಿಸಿರುವ, ಸದಭಿರುಚಿ ಚಿತ್ರಗಳ ನಿರ್ದೇಶಕ ಮಂಜು ಸ್ವರಾಜ್ ನಿರ್ದೇಶನದಲ್ಲಿ ಅಜೇಯ್ ರಾವ್ ಹಾಗೂ ಮಿಶಾ ನಾರಂಗ್ ನಾಯಕ, ನಾಯಕಿಯಾಗಿ ನಟಿಸಿರುವ ಮತ್ತು 1970 ರ ಕಾಲಘಟ್ಟದ ಪ್ರೇಮ ಕಥಾನಕ ಹೊಂದಿರುವ "ಸರಳ ಸುಬ್ಬರಾವ್" ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ನಿರೀಕ್ಷೆಗೂ ಮೀರಿ ಟ್ರೇಲರ್ ಗೆ ಮೆಚ್ಚುಗೆಯಾಗುತ್ತಿದೆ. ಫೆಬ್ರವರಿ 12 ರಂದು ಚಿತ್ರ ಬಿಡುಗಡೆಯಾಗಲಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

"ಸರಳ ಸುಬ್ಬರಾವ್" 1970 ರ ಕಾಲಘಟ್ಟದ ಪ್ರೇಮಕಥೆ. ಇಂದು ಟ್ರೇಲರ್ ಬಿಡುಗಡೆಯಾಗಿದೆ. ಚಿತ್ರ ಫೆಬ್ರವರಿ 12 ರಂದು ತೆರೆಗೆ ಬರಲಿದೆ. ತ್ರಿವೇಣಿ ಅವರ ಕಾದಂಬರಿ ಆಧರಿಸಿದ ಕಥೆ ಇದು. ಈವರೆಗೂ ಕನ್ನಡದಲ್ಲಿ ತ್ರಿವೇಣಿ ಅವರ ಕಾದಂಬರಿಗಳನ್ನು ಆಧರಿಸಿ ಬಂದಿರುವ ಚಿತ್ರಗಳೆಲ್ಲಾ ಗೆದ್ದಿದೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಕಥೆ ಕೂಡ. ನಮ್ಮ ಚಿತ್ರ ಎಲ್ಲರಿಗೂ ಮೆಚ್ಚುಗೆಯಾಗುವ ಭರವಸೆ ಇದೆ. ಹೆಚ್ಚು ಕಡಿಮೆ ನೂರು ವರ್ಷಗಳ ಇತಿಹಾಸವಿರುವ ಮೈಸೂರಿನ ಮನೆಯೊಂದರಲ್ಲಿ ನಮ್ಮ ಚಿತ್ರದ ಚಿತ್ರೀಕರಣ ನಡೆದಿದೆ. ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ನಮ್ಮ ಚಿತ್ರ ನೋಡುಗರ ಮನ ಗೆದ್ದಿದೆ. ಅಜೇಯ್ ರಾವ್ ನಾಯಕರಾಗಿ ನಟಿಸಿರುವ ಈ ಚಿತ್ರದ ನಾಯಕಿ ಪಂಜಾಬಿನ ಮಿಶಾ ನಾರಂಗ್. ರಂಗಾಯಣ ರಘು, ವೀಣಾ ಸುಂದರ್, ಶ್ರೀ, ರಘು ರಾಮನಕೊಪ್ಪ, ವಿಜಯ್ ಚಂಡೂರ್ ಹೀಗೆ ದೊಡ್ಡ ತಾರಾಬಳಗವೇ ಈ ಚಿತ್ರದಲ್ಲಿದೆ. ಅಂತರಾಷ್ಟ್ರೀಯ ಖ್ಯಾತಿಯ ಅಜನೀಶ್ ಲೋಕನಾಥ್ ಸಂಗೀತ ನೀಡಿದ್ದಾರೆ. ಪ್ರದೀಪ್ ಪದ್ಮಕುಮಾರ್ ಛಾಯಾಗ್ರಹಣ ಹಾಗೂ ಬಸವರಾಜ್ ಅರಸ್ ಸಂಕಲನ "ಸರಳ ಸುಬ್ಬರಾವ್" ಚಿತ್ರಕ್ಕಿದೆ ಎಂದು ನಿರ್ದೇಶಕ ಮಂಜು ಸ್ವರಾಜ್ ತಿಳಿಸಿದರು.

ನಾನು ಹುಟ್ಟಿದ್ದು 1980ರಲ್ಲಿ. ಈ ಚಿತ್ರದ ಕಥೆ ನಡೆಯುವುದು 1970ರ ಕಾಲಘಟ್ಟದಲ್ಲಿ ಎಂದು ಮಾತನಾಡಿದ ನಾಯಕ ಅಜೇಯ್ ರಾವ್, ಕನ್ನಡದಲ್ಲಿ ಅಪರೂಪ ಎನ್ನಬಹುದಾದ ಕಥೆಯನ್ನು ನಿರ್ದೇಶಕ ಮಂಜು ಸ್ವರಾಜ್ ಹಾಗೂ ನಿರ್ಮಾಪಕ ಲೋಹಿತ್ ಆಯ್ಕೆ ಮಾಡಿಕೊಂಡಿದ್ದಾರೆ. ರೆಟ್ರೊ ಶೈಲಿಯಲ್ಲಿ ಕಾಣಿಸಿಕೊಂಡಿರುವಿದಕ್ಕೆ ಖುಷಿಯಿದೆ. ಟ್ರೇಲರ್ ಎಲ್ಲರ ಗಮನ ಸೆಳೆದಿದೆ. ಪ್ರೇಮಿಗಳ ದಿನದ ಸಂದರ್ಭದಲ್ಲಿ ನಮ್ಮ ಚಿತ್ರ ತೆರೆಗೆ ಬರಲಿದೆ. ಎಲ್ಲರೂ ಚಿತ್ರಮಂದಿರಗಳಲ್ಲಿ ಕುಟುಂಬ ಸಮೇತ ನಮ್ಮ ಚಿತ್ರ ನೋಡುವ ಮೂಲಕ ಪ್ರೋತ್ಸಾಹಿಸಿ ಎಂದರು. ಈ ಚಿತ್ರದಲ್ಲಿ ನಟಿಸಿದ್ದು ಬಹಳ ಖುಷಿಯಾಗಿದೆ. ನನ್ನ ಪಾತ್ರ ಕೂಡ ಚೆನ್ನಾಗಿದೆ ಎಂದರು ನಾಯಕಿ ಮಿಶಾ ನಾರಂಗ್.

ನಿರ್ದೇಶಕರು ಹೇಳಿದ ಈ ಕಥೆ ಬಹಳ ಇಷ್ಟವಾಯಿತು. ಹಾಗಾಗಿ ನಿರ್ಮಾಣಕ್ಕೆ ಮುಂದಾದೆ. ಅಜೇಯ್ ರಾವ್ ಸೇರಿದಂತೆ ಚಿತ್ರತಂಡದ ಎಲ್ಲರ ಸಹಕಾರದಿಂದ ನಮ್ಮ ಚಿತ್ರ ಚೆನ್ನಾಗಿ ಮೂಡಿಬಂದಿದೆ.

ಫೆಬ್ರವರಿ 12 ರಂದು ನಮ್ಮ ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಎಲ್ಲರೂ ನೋಡಿ. ಪ್ರೋತ್ಸಾಹ ನೀಡಿ ಎಂದು ನಿರ್ಮಾಪಕ ಲೋಹಿತ್ ನಂಜುಂಡಯ್ಯ ಹೇಳಿದರು. ಚಿತ್ರದಲ್ಲಿ ನಟಿಸಿರುವ ರಘು ರಾಮನಕೊಪ್ಪ, ವೀಣಾ ಸುಂದರ್, ಚಿತ್ಕಲಾ ಬಿರಾದಾರ್ ಮುಂತಾದ ಚಿತ್ರತಂಡದ ಸದಸ್ಯರು "ಸರಳ ಸುಬ್ಬರಾವ್" ಚಿತ್ರದ ಕುರಿತು ಮಾತನಾಡಿದರು.



ಚಲುವಿ ಗೊಂದು ಭಾಷ್ಯ ಬರೆದ ಮಾನಸಿ ನೃತ್ಯ ತಯಾರಿಗೆ ಮುನ್ನ ಪೋಸ್ ಕೊಡುವ ಮೂಲಕ ಅಭಿಮಾನಿಗಳ ನಿದ್ದೆಗೊಂದು ವಿರಾಮ ಹಾಕಿದ್ದು ಹೀಗೆ

# ಚಿತ್ರರಂಗದಿಂದ ನನಗೆ ಎಂದಿಗೂ ನಷ್ಟ ಆಗಿಲ್ಲ: ಹೆಬ್ಬುಲಿ ಮತ್ತು ರಾಬರ್ಟ್ ನಿರ್ಮಾಪಕ



ಹೊಸಬರ ಸುಖೀಭವ ಚಿತ್ರದ ಮುಹೂರ್ತ ಸಮಾರಂಭಕ್ಕೆ ಆಗಮಿಸಿ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿ ಶುಭಹಾರೈಸಿದ್ದ ಹೆಬ್ಬುಲಿ ಮತ್ತು ರಾಬರ್ಟ್ ಚಿತ್ರಗಳ ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡ ಮತ್ತೆ ಟ್ರೇಲರ್ ಬಿಡುಗಡೆ ಸಮಾರಂಭಕ್ಕೆ ಆಗಮಿಸಿದ್ದರು.

ನಂತರ ಅವರು ಮಾತನಾಡುತ್ತಾ, ಸಿನಿಮಾ ಜವಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಿ ಜನಗಳ ಮುಂದೆ ತಂದಿಟ್ಟರೆ ಅವರು ಎಂದಿಗೂ ಕೈ ಬಿಡುವುದಿಲ್ಲ. ಮನೇಲಿ ದುಡ್ಡು ಎಲ್ಲಿ ಇಡಬೇಕು ಅನ್ನುವಷ್ಟರ ಮಟ್ಟಿಗೆ ಸಿನಿಮಾದಿಂದ ಹಣ,ಕೀರ್ತಿ ಸಂಪಾದಿಸಿದ್ದೇನೆ. ಕೆಲವರು ಸಿನಿಮಾ ಉದ್ಯಮದ ಬಗ್ಗೆ ನಕರಾತ್ಮಕ ಟೀಕೆಗಳನ್ನು ಮಾಡುತ್ತಿರುತ್ತಾರೆ. ಪರಿಪೂರ್ಣ ಶ್ರಮದಿಂದ ಸರಿಯಾಗಿ ಚಿತ್ರ ಮಾಡಿದ್ದಲ್ಲಿ ದಡ ಸೇರುವುದು ಖಚಿತ. ಚಿತ್ರ ಗಲ್ಲಿಸುವುದು ಜನಗಳ ಜವಬ್ದಾರಿಯಾಗಿರುವುದಿಲ್ಲ. ತಂಡದವರದು ಆಗಿರುತ್ತದೆ. ಪ್ರಸ್ತುತ ವೆಬ್‌ಸೈಟ್‌ದಲ್ಲಿ ರಾ ಕಂಟೆಂಟ್ ನೋಡುತ್ತಿರುವುದರಿಂದ ಸಿನಿಮಾದ ಮೇಲೆ ಜನರು ಮೃದು ಧೋರಣೆ ಹೊಂದಿರುತ್ತಾರೆ. ಜನರಿಗೆ ಎಲ್ಲಾ ರೀತಿಯ ಮನರಂಜನೆ ಬೇಕು. ನಮ್ಮಲ್ಲಿ ಕನ್ನಡ ಚಿತ್ರಗಳಿಗಿಂತ ಇತರೆ ಭಾಷೆಯ ಚಿತ್ರಗಳು ಜಾಸ್ತಿ ವ್ಯಾಪಾರ ಮಾಡುತ್ತಿದೆ. ಕೇವಲ ಯಾರೋ ಯುಟ್ಯೂಬ್, ಎಫ್‌ಬಿನಲ್ಲಿ ವಿಮರ್ಶೆ ಹಾಕಿದ ಮಾತ್ರಕ್ಕೆ ಯಾರ ಹಣೆಬರೆಹ ಬರೆಯೋದಿಕ್ಕೆ ಆಗೋದಿಲ್ಲ. ನೀವುಗಳು ಸಿನಿಮಾ ನೋಡಿ ನಿಮ್ಮ ಅಭಿಪ್ರಾಯ ತಿಳಿಸಿದಾಗ ಮಾತ್ರ ಎಲ್ಲರಿಗೂ ತಲುಪುವಲ್ಲಿ ಸಹಕಾರಿಯಾಗುತ್ತದೆ. ನಿಮ್ಮಗಳ ಚಪ್ಪಾಳೆ, ಸೆಲ್ಫಿ ಟಿಕೆಟ್‌ಗೆ ಪರಿವರ್ತನೆಯಾಗಲೆಂದು ಉಮಾಪತಿ ಶ್ರೀನಿವಾಸಗೌಡ ಮೈಕ್‌ನ್ನು ಹಸ್ತಾಂತರಿಸಿದರು.

ದಂಪತಿಗಳಾದ ಸಂತೋಷ್ ಕುಮಾರ್– ಭಾರ್ಗವಿ ಸಂತೋಷ್, ಮಗನ ಹೆಸರಾದ ವೇದ್ ಆರ್ಯನ್ ಫಿಲಂಸ್ ಬ್ಯಾನರ್ ಅಡಿಯಲ್ಲಿ ಬಂಡವಾಳ ಹೂಡಿದ್ದಾರೆ. ಎನ್.ಕೆ.ರಾಜೇಶ್‌ನಾಯ್ಡು ಕಥೆ,ಚಿತ್ರಕಥೆ,ಸಂಭಾಷಣೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ.

ಮಹೇಂದ್ರ ನಾಯಕ. ಸುಶ್ಮಿತ ನಾಯಕ್ ಹಾಗೂ ವಿಯಾನ್‌ಶಿ ಗ್ದೆ ನಾಯಕಿಯರು. ಉಳಿದಂತೆ ಗೌರವ್ ಶೆಟ್ಟಿ, ಶೋಭರಾಜ್, ರವಿಶಂಕರ್ ಗೌಡ, ಸುನಿಲ್ ಪುರಾಣಿಕ್, ತುಕಾಲಿಸಂತು, ಮೈತ್ರಿ ಜಗ್ಗಿ ಮುಂತಾದವರು ಅಭಿನಯಿಸಿದ್ದಾರೆ. ಮೂರು ಹಾಡುಗಳಿಗೆ ಪ್ರಮೋದ್ ಮರವಂತೆ, ಕೊನೆಯ ಗೀತೆಗೆ ಸಂತೋಷ್‌ಕುಮಾರ್ ಮತ್ತು ಎನ್.ಕೆ.ರಾಜೇಶ್ ನಾಯ್ಡು ಸಾಹಿತ್ಯ ಒದಗಿಸಿದ್ದಾರೆ. ಬಿ.ಜೆ.ಭರತ್– ಶುಭಮ್–ವಿಯಾನ್.ಎಸ್.ಎ ಸಂಗೀತ ಸಂಯೋಜಿಸಿದ್ದಾರೆ. ಈ ಪೈಕಿ ನಟ ಶರಣ್ ?ಬೇಡ ಮಚ್ಚಾ ಬೇಡ? ಸಾಲಿನ ಗೀತೆಗೆ ಧ್ವನಿಯಾಗಿರುವುದು ವಿಶೇಷ. ಛಾಯಾಗ್ರಹಣ ಎಸ್.ಬಿ.ಮಂಜುನಾಥ್ ನಾಯಕ್, ಕಾರ್ಯಕಾರಿ ನಿರ್ಮಾಪಕ ವಿನಯ್.ಎನ್, ಸಂಕಲನ ಮಧುತುಂಬುಕೆರೆ, ಸಾಹಸ ನರಸಿಂಹ ಅವರದಾಗಿದೆ. ಬೆಂಗಳೂರು, ಉಡುಪಿ, ಸಕಲೇಶಪುರ, ಕಳಸ ಮುಂತಾದ ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.

# ನಟಿ ಸೋನಾಲ್ ಮೊಂತೆರೊ ಅವರಿಂದ `ಲೋ ನವೀನ' ಚಿತ್ರದ ಎರಡನೇ ಹಾಡಿನ ಅನಾವರಣ

ಗಾಯಕನಾಗಿ ಜನಪ್ರಿಯರಾಗಿರುವ ನವೀನ್ ಸಜ್ಜು ನಾಯಕನಾಗಿ ನಟಿಸಿರುವ ಮೊದಲ ಚಿತ್ರ "ಲೋ ನವೀನ". ಈಗಾಗಲೇ ಈ ಚಿತ್ರದ ಜನಪದ ಶೈಲಿಯ "ಕೋಣಾಣೆ" ಹಾಡು ಬಿಡುಗಡೆಯಾಗಿ ಎಲ್ಲರ ಮನ ಗೆದ್ದಿದೆ. ಇತ್ತೀಚೆಗೆ "ಲೋ ನವೀನ" ಚಿತ್ರದ "ಕೈ ತೊಳ್ಕೊಂಡ್ ಮುಟ್ಟಂಗವ್ಳೆ ನನ್ ಹುಡುಗಿ" ಎಂಬ ಹಾಡು ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. ನಟಿ ಸೋನಾಲ್ ಮೊಂತೆರೊ ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಮಾಜಿ ಸಂಸದ ಪುಟ್ಟರಾಜು, ರಾಮಮೂರ್ತಿ, ಮಾದೇಶ್ ಮುಂತಾದ ಗಣ್ಯರು ಹಾಡು ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಾನು ಮೂಲತಃ ಮಳವಳ್ಳಿಯವನು. ಹಳ್ಳಿ ಪರಿಸರದಲ್ಲೇ ಬೆಳೆದವನು. ಗಾಯಕನಾಗಿದ್ದ ನಾನು ಈ ಚಿತ್ರದ ಮೂಲಕ ನಾಯಕನಾಗಿದ್ದೇನೆ. ಇದಕ್ಕೆ ಕಾರಣರಾದವರು ನಮ್ಮ ಚಿತ್ರದ ನಿರ್ಮಾಪಕರಾದ ಬೆನ್ ಚಿಕ್ಕಸ್ವಾಮಿ ಹಾಗೂ ಕೀರ್ತಿಸ್ವಾಮಿ. ನಾನು ಕಾರ್ಯಕ್ರಮದ ನಿಮಿತ್ತ ಅಮೇರಿಕಾಗೆ ಹೋದಾಗ ಅವರನ್ನು ಮಾದೇಶ್ ಅವರು ಭೇಟಿ ಮಾಡಿಸಿದರು. ಗ್ರಾಮೀಣಾ ಸೊಗಡಿನ ಕಥೆ ಕೇಳಿ ಇಷ್ಟಪಟ್ಟ ಬೆನ್ ಚಿಕ್ಕಸ್ವಾಮಿ ಹಾಗೂ ಕೀರ್ತಿಸ್ವಾಮಿ ನಿರ್ಮಾಣಕ್ಕೆ ಮುಂದಾದರು. ಅವರಿಗೆ ನನ್ನ ಅನಂತ ಧನ್ಯವಾದ. ಇನ್ನೂ, ಈ ಚಿತ್ರಕ್ಕ ನಾನೇ ಸಂಗೀತ ನೀಡಿದ್ದೇನೆ. ಈಗಾಗಲೇ ಚಿತ್ರದ ಮೊದಲ ಹಾಡು "ಕೋಣಾಣೆ" ನಿರೀಕ್ಷೆಗೂ ಮೀರಿ ಜನಪ್ರಿಯವಾಗಿದೆ. ಏಳು ಮಿಲಿಯನ್ ಗೂ ಅಧಿಕ ವೀಕ್ಷಣೆಯಾಗಿದೆ. ಈಗ ಚಿತ್ರದ ಎರಡನೇ ಹಾಡು "ಕೈ ತೊಳ್ಕೊಂಡ್ ಮುಟ್ಟಂಗವ್ಳೆ ನನ್ ಹುಡುಗಿ" ಅನಾವರಣವಾಗಿದೆ. ಇದು ನಾಯಕಿಯನ್ನು ಪರಿಚಯಿಸುವ ಗೀತೆ ಕೂಡ. ಈ ಹಾಡನ್ನು ಜನಪ್ರಿಯ ನಾಯಕಿ ಸೋನಾಲ್ ಅವರು ಬಿಡುಗಡೆ ಮಾಡಿ ಕೊಟ್ಟಿದ್ದಾರೆ. ಅಂದಾನಿ ಅವರು ಹಾಡನ್ನು ಬರೆದಿದ್ದಾರೆ. ಸಾಕಷ್ಟು ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಸಮಾರಂಭಕ್ಕೆ ಆಗಮಿಸಿದ್ದಾರೆ. ಆನಂದ್ ಆಡಿಯೋ ಮೂಲಕ ಈ ಹಾಡು ಬಿಡುಗಡೆಯಾಗಿದೆ. ಉಳಿದ ಹಾಡುಗಳು ಸದ್ಯದಲ್ಲೇ ಬಿಡುಗಡೆಯಾಗಲಿದೆ ಎಂದರು ಚಿತ್ರದ ನಾಯಕ ಹಾಗೂ ಸಂಗೀತ ನಿರ್ದೇಶಕ ನವೀನ್ ಸಜ್ಜು.

ನಾನು ಮಳವಳ್ಳಿಯವನು. ಚಿಕ್ಕವಯಸ್ಸಿನಲ್ಲೇ ಗ್ರಾಮೀಣ ಜನಪದ ಹಾಡುಗಳನ್ನು ಕೇಳುತ್ತಾ ಬೆಳೆದವನು ಎಂದು ಮಾತನಾಡಿದ ನಿರ್ಮಾಪಕ ಬೆನ್ ಚಿಕ್ಕಸ್ವಾಮಿ, ನಲವತ್ತು ವರ್ಷಗಳಿಂದ ಅಮೇರಿಕಾದಲ್ಲಿದ್ದರೂ ಕನ್ನಡವನ್ನೇ ಮಾತನಾಡುತ್ತೇನೆ. ದಿನ ಮುದ್ದೆ , ಉಪ್ಸಾರು ತಿನ್ನುತ್ತೇನೆ. ನವೀನ್ ಸಜ್ಜು ಹೇಳಿದ ಗ್ರಾಮೀಣ ಸೊಗಡಿನ ಕಥೆ ಇಷ್ಟವಾಯಿತು. ಹಾಗಾಗಿ ನಿರ್ಮಾಣಕ್ಕೆ ಮುಂದಾದೆವು ಎಂದರು.

ಚಿಕ್ಕಂದಿನಿಂದಲೂ ನಟಿಯಾಗಬೇಕೆಂಬ ಕನಸು. ಆ ಕನಸು ಈಗ ನನಸಾಗಿದೆ. ಅವಕಾಶ ನೀಡಿದ ನವೀನ್ ಸಜ್ಜು ಅವರಿಗೆ, ನಿರ್ಮಾಪಕರಿಗೆ ಹಾಗೂ ನಿರ್ದೇಶಕರಿಗೆ ಧನ್ಯವಾದ ಎಂದರು ನಾಯಕಿ ವರ್ಷ.

ಇದು ನನ್ನ ಮೊದಲ ನಿರ್ದೇಶನದ ಚಿತ್ರ. "ಲೋ ನವೀನ" ಚಿತ್ರ ಉತ್ತಮವಾಗಿ ಮೂಡಿಬರಲು ಚಿತ್ರತಂಡದ ಸಹಕಾರ ಅಪಾರ ಎಂದು ನಿರ್ದೇಶಕ ಧನುರ್ಧಾರಿ ಪವನ್ ತಿಳಿಸಿದರು.

ಛಾಯಾಗ್ರಾಹಕ ರಿಷಿಕೇಶ್, ನೃತ್ಯ ನಿರ್ದೇಶಕ ವಿನಾಯಕ್ ಆಚಾರ್ಯ, ಗೀತರಚನೆಕಾರ ಅಂದಾನಿ ಮುಂತಾದ ಚಿತ್ರತಂಡದ ಸದಸ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.



# ಎವರಿಒನ್ ವಾಂಟ್ಸ್ ದಿಸ್ ಹಾಡು ಬಿಡುಗಡೆ

ಬಣ್ಣದಲೋಕಕ್ಕೆ ಹೊಸ ಪ್ರತಿಭೆಗಳ ಆಗಮನ ಆರೋಗ್ಯಕರ ಬೆಳವಣಿಗೆಯಾಗಿದೆ. ಆ ಸಾಲಿಗೆ ಬೆಂಗಳೂರು ಮೂಲದ ಯುವ ಉದ್ಯಮಿ ನಹೇಶ್ ಪೋಲ್ ಕನ್ನಡ ಚಿತ್ರರಂಗಕ್ಕೆ ಏನಾದರೂ ಕೊಡುಗೆ ಕೊಡಬೇಕೆಂಬ ಅಭಿಲಾಷೆಯಿಂದ ಎವರಿಒನ್ ವಾಂಟ್ಸ್ ದಿಸ್ ಚಿತ್ರದ ಮೂಲಕ ಸಿನಿಮಾ ಪ್ರೇಮಿಗಳಿಗೆ ಒಂದು ಸುಂದರ ಸಿನಿಮ್ಯಾಟಿಕ್ ಅನುಭವ ನೀಡುವ ಅಭಿಲಾಷೆ ಹೊಂದಿದ್ದಾರೆ. ಈ ಚಿತ್ರವನ್ನು ತಮ್ಮದೇ ರಯಾಡಿಕಲ್ ಕಾನ್ಸೆಪ್ಟ್ಸ್ ಸ್ಟುಡಿಯೋ (Radical Concepts Studios) ಬ್ಯಾನರ್ ಅಡಿಯಲ್ಲಿ ನಿರ್ಮಾಣ, ಸಂಗೀತ, ನಿರ್ದೇಶನ ಅಲ್ಲದೆ ನಾಯಕನಾಗಿ ಅಭಿನಯಿಸುತ್ತಿದ್ದಾರೆ. ಛಾಯಾಗ್ರಹಣ ಮತ್ತು ನೃತ್ಯ ಸಾಗರ್‌ಮೂರ್ತಿ, ಕಾರ್ಯಕಾರಿ ನಿರ್ಮಾಪಕ ಕೆ.ಬಾಲಸುಬ್ರಮಣ್ಯಂ, ಕಲೆ ದೀಪಿಕಾ ಮಾಚ್‌ಮೊಂಡ, ಕಾಸ್ಟ್ಯೂಮ್ ಶ್ರೀಧರ್‌ವೀರ್ ಅವರದಾಗಿದೆ.

ಪ್ರಚಾರದ ಮೊದಲ ಹಂತವಾಗಿ ಹಾಡಿನ ಬಿಡುಗಡೆ ಕಾರ್ಯಕ್ರಮ ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು 2026ರಲ್ಲಿ ಮೂರು ಸಿನಿಮಾಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಿದ್ದೇವೆ. ಈಗಿನ ಸಿನಿಮಾವು ತೊಂಬತ್ತು ನಿಮಿಷವಾಗಿರುತ್ತದೆ. ದುಡ್ಡಿನ ಆಸೆಗಾಗಿ ವಜ್ರ ದರೋಡೆ ಮಾಡಿದಾಗ, ಅದರಿಂದ ಮುಂದಾಗುವ ಅನಾಹುತಗಳನ್ನು ಕಾಮಿಡಿ ಹಾಗೂ ಥ್ರಿಲ್ಲರ್ ಮಾದರಿಯಲ್ಲಿ ಮನರಂಜನೆಯೊಂದಿಗೆ ತೋರಿಸಲಾಗುತ್ತಿದೆ ಎಂದು ನಹೇಶ್ ಪೋಲ್ ಮಾಹಿತಿ ನೀಡಿದರು.

ಅಕ್ಷರ ಸುರೇಶ್ ನಾಯಕಿ ಹಾಗೂ ಸಿನಿಮಾಕ್ಕೆ ಕಥೆ ಬರೆದು ಕ್ರಿಯೇಟೀವ್ ನಿರ್ದೇಶಕಿಯಾಗಿ ಗುರುತಿಸಿಕೊಂಡಿದ್ದಾರೆ. ಇವರು ಹೇಳುವಂತೆ ಇದೊಂದು ಲವ್ ಸಾಂಗ್ ಆಗಿದ್ದು, ಕನ್ನಡ, ಇಂಗ್ಲೀಷ್, ಹಿಂದಿ, ತೆಲುಗು ಮತ್ತು ತಮಿಳು ಭಾಷೆಯ ಸಾಹಿತ್ಯ ಬಳಸಿಕೊಳ್ಳಲಾಗಿದೆ. ಒಟ್ಟು ಆರು ಹಾಡುಗಳು ಇರಲಿದೆ. ಪೇಪರ್ ವರ್ಕ್‌ನಂತೆ ಚಿತ್ರೀಕರಣ ನಡೆಸಿ, ಅಲ್ಲಿಯೇ ಸಂಕಲನ ವನ್ನು ಒಟ್ಟಿಗೆ ಮಾಡ ಲಾಗುವು ದರಿಂದ ಸಮಯ ಉಳಿತಾಯ ವಾಗುತ್ತದೆ. ?ಮನರಂಜನೆ ಎಲ್ಲಾ ಕಡೆ? ಎನ್ನುವ ಪರಿಕಲ್ಪನೆಯಲ್ಲಿ ನಮ್ಮದೆ ಅತ್ಯಾಧುನಿಕ ಪ್ರೊಜೆಕ್ಟರ್, 50 ಹೆಡ್ ಫೋನ್ಸ್‌ಗಳೊಂದಿಗೆ ಕಡಿಮೆ ದರದಲ್ಲಿ ಜನರಿಗೆ ಸಿನಿಮಾ ತೋರಿಸುವ ಇರಾದೆ ಇದೆ ಅಂತ ಎಲ್ಲವನ್ನು ಮಾಧ್ಯಮದ ಮುಂದೆ ಪ್ರದರ್ಶಿಸಿದರು. ಉಳಿದಂತೆ ತಾರಾಗಣದ ವಿವರಗಳನ್ನು ಮುಂದಿನ ದಿನಗಳಲ್ಲಿ ನೀಡಲಾಗುವುದೆಂದು ಅಕ್ಷರ ಸುರೇಶ್ ಮಾತಿಗೆ ವಿರಾಮ ಹಾಕಿದರು.

3.43 ನಿಮಿಷದ ಗೀತೆಯಲ್ಲಿ ಆಯಾ ರಾಜ್ಯದ ಭಾಷೆಗಳಿಗೆ ತಕ್ಕಂತೆ ನಾಯಕ ಮತ್ತು ನಾಯಕಿ ವೇಷಭೂಷಣದಲ್ಲಿ ಕಾಣಿಸಿಕೊಂಡಿದ್ದು ಗಮನ ಸೆಳೆಯಿತು.





# ಫೆಬ್ರವರಿ 30 ಟ್ರೇಲರ್ ರಿಲೀಸ್

ಬಿಗ್ ಬಾಸ್ ಖ್ಯಾತಿಯ ಅಭಿಷೇಕ್ ಶ್ರೀಕಾಂತ್ ನಟನೆಯ ಫೆಬ್ರವರಿ 30 ಸಿನಿಮಾದ ಟ್ರೇಲರ್ ರಿಲೀಸ್ ಆಗಿದೆ. ಸೈಕಲಾಜಿಕಲ್ ಥ್ರಿಲ್ಲರ್ ಕಥಾಹಂದರ ಒಳಗೊಂಡ ಚಿತ್ರ ಫೆಬ್ರವರಿ 30. ಮೈಸೂರು ಮೂಲದ ಪ್ರಶಾಂತ್ ಎಂ.ಎಲ್.ಅವರ ನಿರ್ದೇಶನದ ಈ ಚಿತ್ರಕ್ಕೆ ಶಂಕರ ಮೂವೀಸ್ ಇಂಟರ್ ನ್ಯಾಷನಲ್ ಮೂಲಕ ಜೋಸೆಫ್ ಬೇಬಿ ಅವರು ಬಂಡವಾಳ ಹೂಡಿದ್ದಾರೆ. ಅಭಿಷೇಕ್, ಸಾಹಿತ್ಯಶೆಟ್ಟಿ, ಅಕ್ಷಯ್, ಮನೋಜ್, ಶಿವಕುಮಾರ್ ಚಿತ್ರದ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಪಿ.ಎಂ. ಉನ್ನಿಕೃಷ್ಣನ್ ಅವರ ಛಾಯಾಗ್ರಹಣ, ಲಿಜಿನ್ ಪಂಬೋ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ.

ನಿರ್ದೇಶಕ ಎಂ.ಎಲ್.ಪ್ರಶಾಂತ್ ಅವರು ಮಾತನ್ನಾಡುತ್ತಾ, ಐಟಿ ಎಂಪ್ಲಾಯ್. ಸಣ್ಣ ಪುಟ್ಟ ಶಾರ್ಟ್ ಮೂವಿ ಮಾಡ್ತಾ ಇದ್ದೆ. ಈ ಸಿನಿಮಾವನ್ನ ಚಿಕ್ಕದಾಗಿ ಮಾಡೋಣಾ ಅಂತಾನೇ ಅಂದುಕೊಂಡಿದ್ದು. ಆದ್ರೆ ಬರೀತಾ ಬರೀತಾ ಸಿನಿಮಾ ಚೆನ್ನಾಗಿ ಬಂದಿದೆ. ನಿರ್ಮಾಪಕರಿಗೆ ಕಥೆ ಇಷ್ಟವಾಗಿ ಸಿನಿಮಾ ಮಾಡೋಣಾ ಅಂದ್ರು. ಇದೊಂದು ಸೈಕಾಲಜಿಕಲ್ ಥ್ರಿಲ್ಲರ್ ಸಿನಿಮಾ. ಫೆಬ್ರವರಿ 30 ಅಂದ್ರೆ ಅನ್ ಎಕ್ಸ್ಪೆಕ್ಟೆಡ್ ಡೇಟ್. ಸಿನಿಮಾ ಚೆನ್ನಾಗಿ ಬಂದಿದೆ. ತೆರೆಮೇಲೆ ನೋಡಿದ್ರೆ ಖಂಡಿತ ಇಷ್ಟವಾಗುತ್ತೆ ಎಂದಿದ್ದಾರೆ.

ನಟ ಅಭಿಷೇಕ್ ಶ್ರೀಕಾಂತ್ ಮಾತನ್ನಾಡಿ, ಫೆಬ್ರವರಿ 30 ಬಗ್ಗೆ ಹೇಳ್ಬೇಕು ಅಂದ್ರೆ ನನ್ನ ಫಸ್ಟ್ ಹಾರಾರ್ ಸಿನಿಮಾ. ಇಲ್ಲಿವರೆಗೂ ಮಾಡಿರಲಿಲ್ಲ.

ಪ್ರಶಾಂತ್ ಸರ್ ಕಥೆ ಹೇಳಿದಾಗ ಯೂನಿಕ್ ಅನ್ನಿಸ್ತು. ಆಡಿಷನ್ ನಡೆಸುವಾಗ ಪ್ರಶಾಂತ್ ಸರ್ ಗೂ ಗೊಂದಲವಿತ್ತು. ಆದ್ರೆ ನನಗೆ ಈ ಅವಕಾಶ ಬಂತು. ಜೋಸೆಫ್ ಬೇರೆ ರಾಜ್ಯದಿಂದ ಬಂದು ನಮ್ಮನ್ನ ನಂಬಿ ಇನ್ವೆಸ್ಟ್ ಮಾಡಿದ್ದಕ್ಕೆ ಥ್ಯಾಂಕ್ಯೂ. ಈ ಸಿನಿಮಾದಿಂದ ಸಾಕಷ್ಟು ಕಲಿತಿದ್ದೀನಿ ಎಂದಿದ್ದಾರೆ. ಚೇತನ್ ಮಾತನ್ನಾಡುತ್ತಾ, ಫೆಬ್ರವರಿ 30.. ಎಲ್ಲರಿಗೂ ಗೊತ್ತು ಫೆಬ್ರವರಿಯಲ್ಲಿ ಬರೋದೆ 28 ದಿನ. ಆದ್ರೆ ಈ ಸಿನಿಮಾಗೆ ಫೆಬ್ರವರಿ 30 ಅಂತಾನೇ ಯಾಕಿಟ್ವಿ ಅಂದ್ರೆ ಅದಕ್ಕೊಂದು ಒಳ್ಳೆ ಕಾರಣವೂ ಇದೆ. ನಿರ್ದೇಶಕರು ಬಂದು ನಮ್ಮ ಬಳಿ ಒಂದಷ್ಟು ಮಾಹಿತಿಯನ್ನ ಹಂಚಿಕೊಂಡ್ರು. ಅದಾದ ನಂತರದಲ್ಲಿ ಸಿನಿಮಾ ಮಾಡಬೇಕು ಅನ್ನಿಸ್ತು. ಒಬ್ಬ ತಮಿಳುನಾಡು ವ್ಯಕ್ತಿ ನಮ್ಮ ಕನ್ನಡ ಸಿನಿಮಾ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,